24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 138 | ನವದೆಹಲಿ | ಬೆಲೆ ₹10 | ನವಂಬರ್ 15, 2026, ಭಾನುವಾರ

ಒಳಪುಟಗಳಲ್ಲಿ

ಸೋನಿಯಾ ಆತ್ಮಕತೆಯ ಮತ್ತೊಂದು ಆಯಾಮ ತೆರೆದಿಟ್ಟ ಶಶಿ ತರೂರ್ - ಪು.4

ಮತ್ತೊಂದು ಪ್ರಬಲ ಚಂಡಮಾರುತ ಅಪ್ಪಳಿಸುವ ನಿರೀಕ್ಷೆ: ನ.18, 19ರಂದು ರಾಜ್ಯದಲ್ಲಿ ಭಾರೀ ಮಳೆ - ಪು.5

ಔರಾದ್‌ನಲ್ಲಿ ಕುಡಿಯುವ ನೀರಿನ ಬಿಕ್ಕಟ್ಟು: ಹನಿ ನೀರಿಗೂ ಹಾಹಾಕಾರ - ಪು.6

ಮೇಕೆದಾಟು ಯೋಜನೆ: ರಾಜಕಾರಣ ಬದಿಗಿಟ್ಟು ವಾಸ್ತವತೆ ಅರಿಯಿರಿ



ತಮಿಳುನಾಡು ಸರ್ಕಾರಕ್ಕೆ ಸಿಎಂ ಡಿ.ಕೆ.ಶಿವಕುಮಾರ್ ಆಗ್ರಹ

ಬೆಂಗಳೂರು, ನ.14: ಮೇಕೆದಾಟು ಯೋಜನೆಯ ಬಗ್ಗೆ ರಾಜಕಾರಣ ಬಿಟ್ಟು ತಮಿಳುನಾಡು ವಾಸ್ತವ ಪರಿಸ್ಥಿತಿ ತಿಳಿಯಲು ಮುಂದಾಗಬೇಕೆಂದು ಆಗ್ರಹಿಸಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಾಜ್ಯದ ಪ್ರಮುಖ ವಿಚಾರಗಳಿಗೆ ಸಂಬಂಧಪಟ್ಟಂತೆ ದೆಹಲಿಗೆ ಸರ್ವಪಕ್ಷ ನಿಯೋಗ ಕರೆದೊಯ್ಯಲು ಬಯಸಿದ್ದು, ಪ್ರಧಾನ ಮಂತ್ರಿಯವರು ಅದಕ್ಕೆ ಅನುಮತಿಸಿದ್ದಾರೆ ಎಂದು ಹೇಳಿದ್ದಾರೆ.

ವಿಧಾನಸೌಧದಲ್ಲಿ ನೆಹರೂ ಜನ್ಮ ದಿನಾಚರಣೆ ಅಂಗವಾಗಿ ಶನಿವಾರ ಆಯೋಜಿಸಿದ ಕಾರ್ಯಕ್ರಮದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕಾರಣದಲ್ಲಿ ಪರಸ್ಪರ ಸ್ಪರ್ಧಿಸುತ್ತೇವೆ. ಆದರೆ, ಅಭಿವೃದ್ಧಿಯಲ್ಲಿ ಸಹಕರಿಸುತ್ತೇವೆ ಎಂದು ಹೇಳಿದರು.


ಮೇಕೆದಾಟು ಯೋಜನೆಗೆ ಸುಪ್ರೀಂಕೋರ್ಟ್ ಸಹಮತ ವ್ಯಕ್ತಪಡಿಸಿದೆ. ಈ ವಿಷಯವಾಗಿ ಪ್ರಧಾನಿಯವರ ಬಳಿ ಸರ್ವ ಪಕ್ಷ ನಿಯೋಗ ತೆರಳಲು ಎಲ್ಲರೂ ಒಪ್ಪಿಕೊಂಡಿದ್ದಾರೆ. ಕೇಂದ್ರ ಸರ್ಕಾರದ ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಅಗತ್ಯ ಇದೆ. ಅದಕ್ಕೆ ಬೇಕಾದ ದಾಖಲೆಗಳನ್ನು ಕಳುಹಿಸುತ್ತಿದ್ದೇವೆ ಎಂದರು.

ಮೇಕೆದಾಟು ಯೋಜನೆ ವಿಚಾರದಲ್ಲಿ–ಕರ್ನಾಟಕ ಸುಪ್ರೀಂ ಕೋರ್ಟಿನ ಆದೇಶವನ್ನು ಪಾಲಿಸುತ್ತಿಲ್ಲ ಎಂದು ತಮಿಳುನಾಡಿನ ಮುಖ್ಯಮಂತ್ರಿ ಅವರ ಆಕ್ಷೇಪಕ್ಕೆ ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್ ಅವರು, ಯಾರು ಏನೇ ಟೀಕೆ ಮಾಡಲಿ, ನಾನು ನನ್ನ ರಾಜ್ಯಕ್ಕೆ ಹಿತವಾಗಿದ್ದನ್ನೇ ಮಾಡುತ್ತೇನೆ. ತಮಿಳುನಾಡಿನ ಕಾಂಗ್ರೆಸ್, ಡಿಎಂಕೆ, ಎಐಎಡಿಎಂಕೆ, ಟಿವಿಕೆ ಸೇರಿ ಯಾರು ಬೇಕಾದರೂ ಟೀಕೆ ಮಾಡಲಿ. ದೇಶದಲ್ಲಿ ನೆಲದ ಕಾನೂನು ಎಂಬುದೊಂದಿದೆ. ಅದರಂತೆ ನಡೆದುಕೊಳ್ಳುತ್ತೇವೆ ಎಂದರು.

■ ...3ನೇ ಪುಟಕ್ಕೆ

ಅಣೆಕಟ್ಟೆ ನಿರ್ಮಿಸುವ ಸ್ವಾತಂತ್ರ್ಯ ನಮಗೂ ಇದೆ

ಸುಪ್ರೀಂಕೋರ್ಟ್ ತಮಿಳುನಾಡಿಗೆ 177 ಟಿಎಂಸಿ ನೀರಿನ ಪಾಲು ಪಡೆಯಲು ಸ್ವಾತಂತ್ರ್ಯ ನೀಡಿದೆ. ಅದೇ ರೀತಿ ನಮಗೂ ಅಣೆಕಟ್ಟೆ ನಿರ್ಮಿಸುವ ಸ್ವಾತಂತ್ರ್ಯ ಇದೆ. ಮೇಕೆದಾಟು ಯೋಜನೆಯ ಲಾಭ ನಷ್ಟಗಳು ಏನು ಎಂದು ತಮಿಳುನಾಡಿನವರೆಗೂ ಗೊತ್ತಿದೆ. ಆದರೂ ರಾಜಕೀಯಕ್ಕೆ ಟೀಕೆ ಮಾಡುತ್ತಿದ್ದಾರೆ. ಬೇಕಾದರೆ ಅಲ್ಲಿಂದ ಒಂದು ನಿಯೋಗ ಇಲ್ಲಿಗೆ ಬರಲಿ. ಕರ್ನಾಟಕದ ವಾಸ್ತವ ವಿಚಾರಗಳನ್ನು ವಿವರಿಸಿ, ಮನವರಿಕೆ ಮಾಡಿಕೊಡುತ್ತೇನೆ. ಯೋಜನೆಯಿಂದಾಗುವ ಅನುಕೂಲಗಳ ಬಗ್ಗೆ ತಿಳಿವಳಿಕೆ ನೀಡುತ್ತೇನೆ ಎಂದರು. ರಾಜ್ಯದಿಂದ ಸರ್ವಪಕ್ಷ ನಿಯೋಗ ಕರೆ ತರುತ್ತೇನೆ ಎಂದಾಗ ಅದಕ್ಕೆ ಪ್ರಧಾನಿಯವರು ಒಪ್ಪಿದ್ದಾರೆ ಎಂದು ಹೇಳಿದರು. ಶುಕ್ರವಾರದ ಕಾರ್ಯಕ್ರಮದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಮತ್ತು ತಮ್ಮ ನಡುವೆ ಇದ್ದ ಸೌಹಾರ್ದತೆಯ ಬಗ್ಗೆ ಚರ್ಚೆಯಾಗುತ್ತಿದೆ. ರಾಜ್ಯದ ಪ್ರಜಾಸೇವಕನಾಗಿ, ಪ್ರತಿನಿಧಿಯಾಗಿ ಸರ್ಕಾರಕ್ಕೆ, ರಾಜ್ಯಕ್ಕೆ ಹಿತವಾಗುವ ನಿಟ್ಟಿನಲ್ಲಿ ನನ್ನ ಕರ್ತವ್ಯವನ್ನು ನಿಭಾಯಿಸಿದ್ದೇನೆ. ಚರ್ಚೆಯಾಗುವುದಾದರೇ ಆಗಲಿ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.



ನವದೆಹಲಿಯ ಪ್ರಗತಿ ಮೈದಾನದ ಭಾರತ್ ಮಂಡಪಂನಲ್ಲಿ ಆಯೋಜಿಸಿರುವ 45ನೇ ಭಾರತ ಅಂತಾರಾಷ್ಟ್ರೀಯ ವ್ಯಾಪಾರ ಮೇಳದಲ್ಲಿ ಕರ್ನಾಟಕ ರಾಜ್ಯ ಪೆವಿಲಿಯನ್ ಅನ್ನು ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಉದ್ಘಾಟಿಸಿದರು. ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ನಿರ್ದೇಶಕ ಆರ್. ರಮೇಶ್, ಕರ್ನಾಟಕ ಭವನದ ಸಹಾಯಕ ನಿವಾಸಿ ಆಯುಕ್ತ ಸಿ.ಮೋಹನ್‌ಕುಮಾರ್ ಹಾಗೂ ನವದೆಹಲಿಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕಿ ಡಾ. ಲವೀನಾ ನೊರೊನ್ಹಾ ಹಾಜರಿದ್ದರು.

ಸಹಕಾರ ಕ್ಷೇತ್ರವೇ ರೈತರ ಆರ್ಥಿಕ ಸ್ವಾತಂತ್ರ್ಯದ ಹೆಬ್ಬಾಗಿಲು: ಸಿಎಂ ಡಿ.ಕೆ. ಶಿವಕುಮಾರ್

ಬೆಂಗಳೂರು, ನ.14: ಜನರಿಂದ, ಜನರಿಗಾಗಿ, ಜನರಿಗೋಸ್ಕರ ಇರುವ ಚಳವಳಿಯೇ ಸಹಕಾರ ಚಳವಳಿ. ಸರ್ವರಿಗೂ ಸಮಪಾಲು, ಸಮಬಾಳು ಎಂಬುದೇ ಸಹಕಾರ ತತ್ವದ ಮೂಲಮಂತ್ರ. ರೈತರ ಆರ್ಥಿಕ ಸ್ವಾತಂತ್ರ್ಯದ ಹೆಬ್ಬಾಗಿಲು ಈ ಸಹಕಾರ ಕ್ಷೇತ್ರ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರಿನ ಬನಶಂಕರಿ ನಗರದ ಸರ್ ಎಂ. ವಿಶ್ವೇಶ್ವರಯ್ಯ ಬಡಾವಣೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ 73ನೇ ಸಹಕಾರ ಸಪ್ತಾಹ 2026 ಅನ್ನು ಉದ್ಘಾಟಿಸಿ ಮಾತನಾಡಿದರು.

ಸರ್ವರಿಗೂ ಸಮಪಾಲು, ಸಮಬಾಳು ಎಂಬುದೇ ಸಹಕಾರ ತತ್ವ
73ನೇ ಸಹಕಾರ ಸಪ್ತಾಹ ಉದ್ಘಾಟನೆ



ಸಹಕಾರ ಕ್ಷೇತ್ರವನ್ನು ದ್ವಂದ್ವಲಗ್ನಳಿಸಲು ಯಾರಿಂದಲೂ ಸಾಧ್ಯವಿಲ್ಲ. ರೈತರ ಬದುಕಿನ ಬೆನ್ನೆಲುಬಾಗಿರುವ ಸಹಕಾರ ಸಂಸ್ಥೆಗಳಿಗೆ ಸರ್ಕಾರದ ಬೆಂಬಲ ಮುಂದುವರಿಯಲಿದೆ. ಒಂದು ಹಳ್ಳಿಯಲ್ಲಿ ಸಹಕಾರಿ ಸಂಘ, ಶಾಲೆ ಹಾಗೂ ಪಂಚಾಯಿತಿ ಇರಬೇಕು ಎಂಬುದು ಮಹಾತ್ಮ ಗಾಂಧೀಜಿಯವರ ಆಶಯವಾಗಿತ್ತು" ಎಂದರು.

ರಾಮಕೃಷ್ಣ ಹೆಗಡೆ ಅವರು ಕನಕಪುರದಿಂದ ಗೆದ್ದು ಮುಖ್ಯಮಂತ್ರಿಯಾಗಿದ್ದ ವೇಳೆ. ಆಗ ನಮ್ಮ ಕನಕಪುರ ತಾಲ್ಲೂಕಿನ ಮುಖಂಡರು ನನ್ನನ್ನು ಟಿಎಪಿಸಿಎಂಎಸ್ ಚುನಾವಣೆಗೆ ನಿಲ್ಲಿಸಿದ್ದರು. ವಿದ್ಯಾರ್ಥಿ ಚುನಾವಣೆಯ ನಂತರ ಸಾರ್ವಜನಿಕ ಜೀವನದಲ್ಲಿ ತಾವು ಗೆದ್ದ ಮೊದಲ ಚುನಾವಣೆ ಅದಾಗಿತ್ತು. ಸಹಕಾರ ಸಚಿವನಾಗಿಯೂ ನಾನು ಸೇವೆ ಸಲ್ಲಿಸಿದ್ದೇನೆ. ಇಂದು ಜನಸೇವಕನಾಗಿ, ಪ್ರಜಾಸೇವಕನಾಗಿ ಮುಖ್ಯಮಂತ್ರಿಯ ಜವಾಬ್ದಾರಿ ನಿರ್ವಹಿಸುತ್ತಿದ್ದೇನೆ" ಎಂದು ಹೇಳಿದರು.

■ ...3ನೇ ಪುಟಕ್ಕೆ

CWP COMMONWEALTH WOMEN PARLIAMENTARIANS

ಕರ್ನಾಟಕ ವಿಧಾನಮಂಡಲ


ಶ್ರೀ ಸಲೀಂ ಅಹ್ಮದ್
ಮಾನ್ಯ ಸಭಾಪತಿಗಳು,
ಕರ್ನಾಟಕ ವಿಧಾನ ಪರಿಷತ್ತು


ಡಾ. ಡಿ. ಪುರಂದೇಶ್ವರಿ
ಮಾನ್ಯ ಅಧ್ಯಕ್ಷರು,
ಕಾಮನ್ವೆಲ್ತ್ ಮಹಿಳಾ ಸಂಸದೀಯರು - ಭಾರತ ಪ್ರಾದೇಶಿಕ ಘಟಕ


ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ


ಶ್ರೀ ಓಂ ಬಿರ್ಲಾ
ಮಾನ್ಯ ಸಭಾಧ್ಯಕ್ಷರು
ಲೋಕ ಸಭೆ


ಶ್ರೀ ಹರಿವಂಶ್
ಮಾನ್ಯ ಉಪ ಸಭಾಪತಿಗಳು,
ರಾಜ್ಯಸಭೆ


ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ


ಶ್ರೀ ಜಿ. ಎಸ್. ಪಾಟೀಲ
ಮಾನ್ಯ ಸಭಾಧ್ಯಕ್ಷರು,
ಕರ್ನಾಟಕ ವಿಧಾನಸಭೆ


ಡಾ. ಉಮಾಶ್ರೀ
ಮಾನ್ಯ ಉಪ ಸಭಾಪತಿಗಳು,
ಕರ್ನಾಟಕ ವಿಧಾನ ಪರಿಷತ್ತು

CWP INDIA REGION
COMMONWEALTH WOMEN PARLIAMENTARIANS


ಶ್ರೀ ಮಂಕಾಳ ಎಸ್. ವೈದ್ಯ
ಮಾನ್ಯ ಉಪ ಸಭಾಧ್ಯಕ್ಷರು,
ಕರ್ನಾಟಕ ವಿಧಾನಸಭೆ

ಭಾರತದಲ್ಲಿ ಮೊದಲ ಬಾರಿಗೆ ನಡೆಯುತ್ತಿರುವ
ಕಾಮನ್ವೆಲ್ತ್ ಮಹಿಳಾ ಸಂಸದೀಯರ (CWP) ಸಮ್ಮೇಳನ



ಮಹಿಳಾ ಶಕ್ತಿಯ ಸಂಗಮ, ಉಜ್ವಲ ಭವಿಷ್ಯದ ಸಂಕಲ್ಪ

ಭಾರತ ಸಂಸತ್ತು ಹಾಗೂ ಕರ್ನಾಟಕ ವಿಧಾನಮಂಡಲದ ಸಹಯೋಗದಲ್ಲಿ ನವೆಂಬರ್ 17 ಮತ್ತು 18ರಂದು ಬೆಂಗಳೂರಿನಲ್ಲಿ ಕಾಮನ್ವೆಲ್ತ್ ಮಹಿಳಾ ಸಂಸದೀಯರ (CWP) ಭಾರತ ಪ್ರಾದೇಶಿಕ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ. ಈ ಸ್ವರೂಪದ ಸಮ್ಮೇಳನ ಭಾರತದಲ್ಲಿ ಮೊದಲ ಬಾರಿಗೆ ನಡೆಯುತ್ತಿದ್ದು, ದೇಶದ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮಹಿಳಾ ಜನಪ್ರತಿನಿಧಿಗಳನ್ನು ಒಂದೇ ವೇದಿಕೆಗೆ ತರಲಿದೆ.


ಭದ್ರ ಬುನಾದಿ, ಸಶಕ್ತ ಧ್ವನಿಗಳು: ನೂತನ ಮಹಿಳಾ ಜನಪ್ರತಿನಿಧಿಗಳಿಗಾಗಿ ಸೈಬರ್ ಸುರಕ್ಷತೆ ಮತ್ತು ಮಾರ್ಗದರ್ಶನದ ಹಾದಿಗಳು ಎಂಬ ಆಶಯದಡಿ ಎರಡು ದಿನಗಳ ಸಮ್ಮೇಳನ ನಡೆಯಲಿದೆ. ಸಾರ್ವಜನಿಕ ಜೀವನದಲ್ಲಿರುವ ಮಹಿಳಾ ಜನಪ್ರತಿನಿಧಿಗಳ ಸೈಬರ್ ಸುರಕ್ಷತೆ, ಡಿಜಿಟಲ್ ಜಗತ್ತಿನ ಸವಾಲುಗಳು ಹಾಗೂ ನೂತನ ಮಹಿಳಾ ಜನಪ್ರತಿನಿಧಿಗಳಿಗೆ ಅನುಭವಿಗಳ ಮಾರ್ಗದರ್ಶನ ಒದಗಿಸುವ ಕುರಿತು ಸಮ್ಮೇಳನದಲ್ಲಿ ಚರ್ಚಿಸಲಾಗುವುದು. ಶಾಸನಾತ್ಮಕ ತಿಳುವಳಿಕೆ, ನಾಯಕತ್ವ ಸಾಮರ್ಥ್ಯ ಮತ್ತು ಪ್ರಜಾಪ್ರಭುತ್ವದ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಲ್ಲಿ ಮಹಿಳೆಯರ ಪರಿಣಾಮಕಾರಿ ಪಾಲ್ಗೊಳ್ಳುವಿಕೆಯನ್ನು ಬಲಪಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಸುರಕ್ಷಿತ ಡಿಜಿಟಲ್ ವಾತಾವರಣ, ಸಶಕ್ತ ಮಹಿಳಾ ನಾಯಕತ್ವ ಹಾಗೂ ಸದೃಢ ಪ್ರಜಾಪ್ರಭುತ್ವದತ್ತ ಮಹತ್ವದ ಹೆಜ್ಜೆ.

ದಿನಾಂಕ
17-18
ನವೆಂಬರ್ 2026

ಸ್ಥಳ
ವಿಧಾನ ಸೌಧ
ಬೆಂಗಳೂರು

"ನಮ್ಮ ಅಭಿವೃದ್ಧಿ ಸಂಸ್ಕೃತಿ ಮತ್ತು ಪರಂಪರೆಯನ್ನು ರಕ್ಷಿಸುವುದು ಮತ್ತು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಮೂಲಭೂತ ಕರ್ತವ್ಯವಾಗಿದೆ. ಇದನ್ನು ನಮ್ಮ ಸಂವಿಧಾನವು ದೃಢಪಡಿಸುತ್ತದೆ"

ನಿತ್ಯ ಪಂಚಾಂಗ 15.11.2026 ಭಾನುವಾರ



ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು/ ಚಾಂದ್ರಮಾನ ಆಶ್ವಯುಜ-ಕಾರ್ತಿಕ ಮಾಸ

ಕಾರ್ತಿಕ ಶುದ್ಧ, ಷಷ್ಠಿ, ಉತ್ತರಾಷಾಢ ನಕ್ಷತ್ರ, ತಲಕಾಡು ವೈದ್ಯೇಶ್ವರ ರಥ, ಸಿರಿಗೆರೆ ಶಿವಾನಂದ ನಿಜೈಕ್ಯದಿನ, ಕೆ.ಆರ್.ನಗರ ಬ್ರಹ್ಮಾನಂದ ಸರಸ್ವತಿ ಆರಾಧನೆ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ದೇಶದ ಕೈಗಾರಿಕೆ, ಹಸಿರು, ಕ್ಷೀರಕ್ರಾಂತಿಗೆ ಬುನಾದಿ ಹಾಕಿದ್ದೇ ನೆಹರು: ಸಿಎಂ ಡಿ.ಕೆ.ಶಿವಕುಮಾರ್ ಸ್ಮರಣೆ

ಕೆಪಿಸಿಸಿ ಕಚೇರಿಯಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿ

ಬೆಂಗಳೂರು, ನ.14: ನಮ್ಮ ವಿಧಾನಸೌಧಕ್ಕೆ ಶಂಕುಸ್ಥಾಪನೆ ಮಾಡಿದವರು ನೆಹರು. ಸಂವಿಧಾನ ರಚಿಸುವಂತೆ ಅಂಬೇಡ್ಕರ್ ಅವರನ್ನು ಕಾನೂನು ಮಂತ್ರಿ ಮಾಡಿದ್ದು ನೆಹರು. ದೇಶದಲ್ಲಿ ಕೈಗಾರಿಕಾ ಕ್ರಾಂತಿ, ಹಸಿರುಕ್ರಾಂತಿ, ಕ್ಷೀರ ಕ್ರಾಂತಿಗೆ ಬುನಾದಿ ಹಾಕಿದರು. ಶಿಕ್ಷಣ ಕ್ಷೇತ್ರ ಹಾಗೂ ಆರೋಗ್ಯ ಕ್ಷೇತ್ರಕ್ಕೆ ಅವರ ಕೊಡುಗೆ ನಾವು ಮರೆಯಲು ಸಾಧ್ಯವಿಲ್ಲ. ಮಕ್ಕಳೇ ದೇಶದ ಸಂಪತ್ತು. ಅವರ ಶಿಕ್ಷಣವೇ ದೇಶಕ್ಕೆ ನಿಜವಾದ ಹೂಡಿಕೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಪ್ರತಿಪಾದಿಸಿದರು.

ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಅವರ ಜನ್ಮದಿನದ ಅಂಗವಾಗಿ ಕೆಪಿಸಿಸಿ ಕಚೇರಿಯ ಭಾರತ ಜೋಡೋ ಸಭಾಂಗಣದಲ್ಲಿ ಶನಿವಾರ ನಡೆದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ದೇಶದ ಭವಿಷ್ಯ ಗಟ್ಟಿಯಾಗಿರಬೇಕಾದರೆ ಪ್ರತಿ ಮನೆಯಲ್ಲಿ ಮಕ್ಕಳಿಗೆ ಪ್ರೋತ್ಸಾಹ ನೀಡಬೇಕು. ನೆಹರು ಅವರಿಗೆ ಮಕ್ಕಳೆಂದರೆ ಪ್ರಾಣ. ನಾಳೆ ನಿಮ್ಮದು ಎಂದು ಪಂಡಿತ್ ಜವಾಹರ್ ಲಾಲ್ ನೆಹರು ಮಕ್ಕಳಿಗೆ ಸಂದೇಶ ನೀಡಿದರು ಎಂದರು.

ನೆಹರು ಅವರು ಸ್ವಾತಂತ್ರ ಹೋರಾಟ ಸಂದರ್ಭದಲ್ಲಿ ಇಂದಿರಾ ಗಾಂಧಿ ಅವರಿಗೆ ಬರೆದ ಪತ್ರದ ಅಂಶಗಳನ್ನು ಎಲ್ಲರೂ ಓದಬೇಕು. ಈ ದೇಶದ ಸಂವಿಧಾನಕ್ಕೆ ಅಂಬೇಡ್ಕರ್ ಅವರ ನೇತೃತ್ವದಲ್ಲಿ ಅಡಿಪಾಯ ಹಾಕಿದ್ದು, ಆ ಸಂವಿಧಾನದ ಅಡಿಯಲ್ಲಿ ಕೆಲಸ ಮಾಡುತ್ತಿದ್ದೇವೆ. ಸರ್ದಾರ್ ವಲ್ಲಭಭಾಯ್ ಪಟೇಲ್ ಹಾಗೂ ನೆಹರು ಅವರು ದೇಶ ಛಿದ್ರವಾಗಬಾರದು ಎಂಬ ಉದ್ದೇಶದಿಂದ ಆಗಿನ ಕಾಲದಲ್ಲಿ ದೇಶದಲ್ಲಿದ್ದ 550ಕ್ಕೂ ಹೆಚ್ಚು ರಾಜ ಸಂಸ್ಥಾನಗಳನ್ನು ಒಗ್ಗೂಡಿಸಿ ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ನೀಡಲಾಯಿತು. ಅವರ ಈ ಕೊಡುಗೆ ನಮಗೆ ಶಕ್ತಿ ನೀಡಿದೆ ಎಂದು ತಿಳಿಸಿದರು.

ನೆಹರು ಅವರ ಚಿಂತನೆ, ತತ್ವ ಸಿದ್ಧಾಂತಗಳು ನಮಗೆ ದಾರಿ ದೀಪವಾಗಿವೆ.

ನೆಹರು ಅವರ ಪಂಚವಾರ್ಷಿಕ ಯೋಜನೆ ಜತೆಗೆ, ಹೆಚ್‌ಎಂಟಿ, ಐಟಿಐ, ಇಸ್ರೋ ಸೇರಿದಂತೆ ಎಲ್ಲಾ ಸಾರ್ವಜನಿಕ ಉದ್ದಿಮೆ ಹಾಗೂ ಕೈಗಾರಿಕೆಗಳನ್ನು ಬೆಂಗಳೂರಿನಿಂದಲೇ ಆರಂಭಿಸಿದರು. ಆಮೂಲಕ ದೇಶಕ್ಕೆ ಬುನಾದಿ ಹಾಕಿದ್ದನ್ನು ಕರ್ನಾಟಕದ ಜನತೆ ಮರೆಯಲು ಸಾಧ್ಯವಿಲ್ಲ. ಅವರ ದೂರದೃಷ್ಟಿ ಹಾಗೂ ತ್ಯಾಗವನ್ನು ಇಡೀ ವಿಶ್ವ ಶ್ಲಾಘಿಸುತ್ತದೆ. ಅವರ ಮಾರ್ಗದರ್ಶನದಲ್ಲಿ ನಾವು ಕೆಲಸ ಮಾಡಬೇಕು. ಈ ದೇಶ ಈ ಮಟ್ಟಕ್ಕೆ ಪ್ರಗತಿಯಾಗಲು ನೆಹರೂ ಅವರ ಮಾರ್ಗದರ್ಶನ ಮಹತ್ವದ್ದಾಗಿದೆ. ಅವರ ಚಿಂತನೆ, ತತ್ವ ಸಿದ್ಧಾಂತಗಳು ನಮಗೆ ದಾರಿ ದೀಪವಾಗಿದೆ ಎಂದು ತಿಳಿಸಿದರು.

ಭಾರತ ಜೋಡೋ ಯುವ ಸಂಘಕ್ಕೆ ಸದಸ್ಯತ್ವ ಮಾಡಿಸಿ



ನೀವೆಲ್ಲರೂ ಮುಂದಿನ ದಿನಗಳಲ್ಲಿ ಪಂಚಾಯಿತಿ ಹಾಗೂ ವಾರ್ಡ್ ಮಟ್ಟಗಳಲ್ಲಿ, ಭಾರತ ಜೋಡೋ ಸಂಘಗಳಿಗೆ ಸದಸ್ಯರನ್ನು ಮಾಡಬೇಕು. ಗ್ಯಾರಂಟಿ ಸಮಿತಿಗೆ 40 ಸಾವಿರ ಜನರನ್ನು ನೇಮಿಸಿದ್ದು, 20 ಸಾವಿರ ಸದಸ್ಯರ ನೇಮಕ ಪ್ರಕ್ರಿಯೆ ನಡೆಯುತ್ತಿದೆ. ನಮ್ಮ ಸರ್ಕಾರದ ಐದು ಗ್ಯಾರಂಟಿ ಪ್ರಮುಖವಾಗಿದ್ದು, ಆರನೇ ಗ್ಯಾರಂಟಿ ಭೂಮಿ ಗ್ಯಾರಂಟಿ. ಇಡೀ ದೇಶ ನಮ್ಮ ಗ್ಯಾರಂಟಿ ಯೋಜನೆಗಳನ್ನು ಗಮನಿಸುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನುಡಿದರು.

ಶೀಘ್ರವೇ ನಿಗಮ-ಮಂಡಳಿ ನೇಮಕದ 2ನೇ ಪಟ್ಟಿ

ಪಕ್ಷದ ಕಾರ್ಯಕರ್ತರಿಗೆ ಅಧಿಕಾರ ನೀಡಲು ನಿಮಗ ಮಂಡಳಿಗಳಿಗೆ ನೇಮಕದ ಮೊದಲ ಪಟ್ಟಿ ಪ್ರಕಟವಾಗಿದೆ. ಎರಡನೇ ಪಟ್ಟಿ ಒಂದೆರಡು ದಿನಗಳಲ್ಲಿ ಬಿಡುಗಡೆಯಾಗಲಿದ್ದು, ನಂತರ ಬಾಕಿ ಇರುವ ಸ್ಥಾನಗಳನ್ನು ಕಾರ್ಯಕರ್ತರಿಗೆ ನೀಡಲಾಗುವುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಎಸ್‌ಐಆರ್ ವಿಚಾರವಾಗಿ ಪಕ್ಷದ ವತಿಯಿಂದ ಒಂದು ಆಪ್ ಸಿದ್ಧಪಡಿಸಿದ್ದು, ಮತಪಟ್ಟಿಯಿಂದ ಕೈಬಿಡಲಾಗಿರುವ ಅರ್ಹ ಮತದಾರರ ಹೆಸರನ್ನು ಮತ್ತೆ ಸೇರಿಸಲು ಆಲೋಚನೆ ಮಾಡಬೇಕು. ಕೆಲಸ ಮಾಡಬೇಕು. ನಾವು ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಮಾಡಿದ್ದೇವೆ ಎಂದರು.

ನೆಹರು ಚಿಂತನೆಗಳಿಗೆ ಬಿಜೆಪಿ ವಿರೋಧ: ಸಿದ್ದರಾಮಯ್ಯ

ಸ್ವತಂತ್ರ ಭಾರತದ ಮೊದಲ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರು ದೇಶದ ಅಭಿವೃದ್ಧಿಗೆ ಭದ್ರವಾದ ಅಡಿಪಾಯ ಹಾಕಿದ ಮಹಾನ್ ನಾಯಕ. ಆಹಾರ ಭದ್ರತೆ, ನೀರಾವರಿ, ಕೈಗಾರಿಕೆ, ವಿಜ್ಞಾನ, ಶಿಕ್ಷಣ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯ ಬಲವರ್ಧನೆಗೆ ಅವರು ನೀಡಿದ ಕೊಡುಗೆಯನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ಆದರೆ, ಅವರ ಪ್ರಜಾಪ್ರಭುತ್ವ, ಜಾತ್ಯತೀತತೆ, ಬಹುತ್ವ ಮತ್ತು ಸಮಾನತೆಯ ಮೌಲ್ಯದಂತಹ ಚಿಂತನೆಗಳಿಗೆ ಬಿಜೆಪಿಯ ರಾಜಕೀಯ ಸಿದ್ಧಾಂತವು ವಿರುದ್ಧವಾಗಿದೆ. ಅದಕ್ಕಾಗಿಯೇ ಬಿಜೆಪಿ ನಾಯಕರು ನೆಹರು ಅವರ ವ್ಯಕ್ತಿತ್ವ ಮತ್ತು ಸಾಧನೆಗಳ ಮೇಲೆ ನಿರಂತರವಾಗಿ ದಾಳಿ ಮಾಡುತ್ತಿದ್ದಾರೆ. ನೆಹರು ಅವರನ್ನು ವಿರೋಧಿಸುವ ಉದ್ದೇಶದಿಂದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರನ್ನು ರಾಜಕೀಯವಾಗಿ ಬಳಸಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.








ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮ ದಿನಾಚರಣೆಯ ಸಂದರ್ಭದಲ್ಲಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶನಿವಾರ ಬೆಂಗಳೂರಿನ ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಭವನದಲ್ಲಿ ನಡೆದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿದರು.

ಬಿಬಿಎಂಪಿ ಕೋರಮಂಗಲ ವಾರ್ಡ್‌ಗೆ ಸ್ವಚ್ಛ ವಾಯು ಸರ್ವೇಕ್ಷಣ ಪ್ರಶಸ್ತಿ

ತಮ್ಮ ಕ್ಷೇತ್ರದ ವಾರ್ಡ್‌ಗೆ ರಾಷ್ಟ್ರೀಯ ಪ್ರಶಸ್ತಿ ಲಭಿಸಿದ್ದಕ್ಕೆ ಸಚಿವ ರಾಮಲಿಂಗಾರೆಡ್ಡಿ ಸಂತಸ



ಬೆಂಗಳೂರು, ನ.14: ಭಾರತ ಸರ್ಕಾರದ ಪ್ರತಿಷ್ಠಿತ ಸ್ವಚ್ಛ ವಾಯು ಸರ್ವೇಕ್ಷಣ ಪ್ರಶಸ್ತಿಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ಕೋರ ಮಂಗಲ (ವಾರ್ಡ್ ನಂ–151) ರಾಷ್ಟ್ರೀಯ ಪ್ರಶಸ್ತಿಗೆ ಭಾಜನವಾಗುವ ಮೂಲಕ ರಾಜಧಾನಿ ಬೆಂಗಳೂರಿಗೆ ರಾಷ್ಟ್ರ ಮಟ್ಟದಲ್ಲಿ ಕೀರ್ತಿ ತಂದಿದೆ.

30,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ವಾರ್ಡ್‌ಗಳ ವಿಭಾಗ ದಲ್ಲಿ ಕೋರಮಂಗಲ ವಾರ್ಡ್–151 ರಾಷ್ಟ್ರೀಯ ಪ್ರಶಸ್ತಿ ವಿಜೇತ ವಾರ್ಡ್ ಆಗಿ ಗುರುತಿಸಿ ಕೊಂಡಿದೆ. ವಾರ್ಡ್ ಮಟ್ಟದಲ್ಲಿ ಕೈಗೊಂಡ ಪರಿಣಾಮಕಾರಿ ಸ್ವಚ್ಛ ವಾಯು ನಿರ್ವಹಣೆ, ಪರಿಸರ ಸಂರಕ್ಷಣೆ, ಸುಸ್ಥಿರ ನಗರಾಭಿವೃದ್ಧಿ ಹಾಗೂ ನಾಗರಿಕರ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಪರಿಗಣಿಸಿ ಕೇಂದ್ರ ಸರ್ಕಾರ ಈ ರಾಷ್ಟ್ರೀಯ ಮನ್ನಣೆ ನೀಡಿದೆ.

ತಮ್ಮ ಕ್ಷೇತ್ರದ ವಾರ್ಡ್‌ಗೆ ರಾಷ್ಟ್ರೀಯ ಗೌರವ ಲಭಿಸಿರುವ ಕುರಿತು ಬಿ.ಟಿ.ಎಂ ಕ್ಷೇತ್ರದ ಶಾಸಕರು ಹಾಗೂ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ರಾಮಲಿಂಗಾರೆಡ್ಡಿ ತೀವ್ರ ಸಂತಸ ವ್ಯಕ್ತಪಡಿಸಿದ್ದಾರೆ. ಕೋರ ಮಂಗಲ ವಾರ್ಡ್–151ಕ್ಕೆ ದೊರೆತಿರುವ ಈ ರಾಷ್ಟ್ರೀಯ ಪ್ರಶಸ್ತಿಗೆ ಕಾರಣರಾದ ಎಲ್ಲಾ ಅಧಿಕಾರಿಗಳು, ಜನಪ್ರತಿನಿಧಿಗಳು, ಪೌರಕಾರ್ಮಿಕರು ಹಾಗೂ ಸ್ಥಳೀಯ ನಾಗರಿಕರಿಗೆ ಹೃತ್ಪೂರ್ವಕ ಅಭಿನಂದನೆಗಳು.

ಎಲ್ಲರ ಸಾಮೂಹಿಕ ಪ್ರಯತ್ನ ಮತ್ತು ಪರಿಸರ ಕಾಳಜಿಯಿಂದ ಈ ಮಹತ್ವದ ಸಾಧನೆ ಸಾಧ್ಯವಾಗಿದೆ" ಎಂದು ಸಚಿವರು ಶ್ಲಾಘಿಸಿದ್ದಾರೆ. ಉತ್ತಮವಾಯು ಗುಣಮಟ್ಟ ಹಾಗೂ ಆರೋಗ್ಯಕರ ನಗರ ಪರಿಸರ ನಿರ್ಮಾಣದತ್ತ ಕೋರಮಂಗಲ ವಾರ್ಡ್ ತೋರಿದ ಬದ್ಧತೆ ಇಡೀ ಬೆಂಗಳೂರು ನಗರದ ಇತರ ವಾರ್ಡ್‌ಗಳಿಗೂ ಮಾದರಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಮನೆ ಮುಂದೆ ಪೋಸ್ಟರ್ ಅಂಟಿಸುವುದು ಸಿಎಂ ಸ್ಥಾನದಲ್ಲಿರುವವರು ಮಾಡುವ ಕೆಲಸವೇ? ಎಚ್‌ಡಿಕೆ ಪ್ರಶ್ನೆ



ತುಮಕೂರು, ನ.14: ತಮಗೆ ಕೆಟ್ಟದ್ದನ್ನು ಬಯಸಿಲ್ಲವೆಂದು ಹೇಳುವ ಸಿಎಂ ನನ್ನ ಮನೆ ಮುಂದೆ ಪೋಸ್ಟರ್ ಅಂಟಿಸಲು ಕಾಂಗ್ರೆಸ್ ಕಾರ್ಯ ಕರ್ತರನ್ನು ಪ್ರಚೋದಿಸುತ್ತಿದ್ದಾರೆ. ಒಳ್ಳೆಯದು ಮಾಡುವುದೆಂದರೆ ಹೀಗೇನಾ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

ಗುಬ್ಬಿ ತಾಲೂಕು, ಸಿ.ಎಸ್.ಪುರ (ಚಂದ್ರಶೇಖರಪುರ)ದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಸುಸಜ್ಜಿತ ಸಮುದಾಯ ಭವನ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಕಂಚಿನ ಪುತ್ಥಳಿಯನ್ನು ಶನಿವಾರ ಅನಾವರಣ ಮಾಡಿ ಮಾತನಾಡಿದರು.

ಮಧ್ಯರಾತ್ರಿ ಮನೆಯ ಮುಂದೆ ಪೋಸ್ಟರ್ ಅಂಟಿಸುವ ಕೀಳುಮಟ್ಟದ ರಾಜಕಾರಣ ಅವರದ್ದೇ ಕೊಡುಗೆ ಎಂದು ಹೆಸರು ಹೇಳದೆಯೇ ಸಿಎಂ ವಿರುದ್ಧ ಹರಿಹಾಯ್ದರು. ಸಿನಿಮಾ ಟೆಂಟ್ ನಡೆಸುತ್ತಿದ್ದ ಕಾಲದಿಂದಲೂ ಪೋಸ್ಟರ್ ಅಂಟಿಸುವ ಚಾಳಿ ಹೊಂದಿರುವ ಅವರು, ಮುಖ್ಯಮಂತ್ರಿಯಾದ ಬಳಿಕವೂ ಅದನ್ನು ಬಿಟ್ಟಿಲ್ಲ. ಇತ್ತೀಚೆಗೆ ಮಾಜಿ ಸಿಎಂ ಯಡಿಯೂರಪ್ಪನವರ ಮನೆ ಮುಂದೆ ಕೂಡ ಕಾಂಗ್ರೆಸ್ ಕಾರ್ಯ ಕರ್ತರು ಪೋಸ್ಟರ್‌ಗಳನ್ನು ಅಂಟಿಸಿದ್ದರು. ಬೆಂಗಳೂರಿನ ನನ್ನ ಮನೆಯ ಬಳಿ ಕೂಡ ಪೋಸ್ಟರ್ ಅಂಟಿಸುವ ಕೀಳುಮಟ್ಟದ ರಾಜಕಾರಣ ಮಾಡಿದ್ದಾರೆ. ಪೋಸ್ಟರ್ ಅಂಟಿಸುವುದು ಮುಖ್ಯಮಂತ್ರಿ ಸ್ಥಾನದಲ್ಲಿರುವವರು ಮಾಡುವ ಕೆಲಸವೇ ಎಂದು ಪ್ರಶ್ನಿಸಿದ್ದಾರೆ.

ಫೋನ್ ಕದ್ದಾಲಿಕೆ ಆರೋಪ

ರಾಹುಲ್‌ಗಾಂಧಿ ಹೇಳಿಕೆಗೆ ಸಮರ್ಥನೆ- ಬಹಿರಂಗ ಚರ್ಚೆಗೆ ಬನ್ನಿ, ಪ್ರಧಾನಿಗೆ ಹರಿಪ್ರಸಾದ್ ಸವಾಲು



ಬೆಂಗಳೂರು, ನ.14: ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಫೋನ್ ಕದ್ದಾಲಿಕೆ ಆರೋಪ ಮಾಡಿರುವ ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಸಮರ್ಥಿಸಿಕೊಂಡಿರುವ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್, ಬಹಿರಂಗ ಚರ್ಚೆಗೆ ಮೋದಿಯವರನ್ನು ಸವಾಲು ಹಾಕಿದ್ದಾರೆ.

"ಮಹಾಮಾನವ ಟೆಲಿಫೋನ್ ಕದ್ದಾಲಿಕೆ ಮಾಡ್ತಿರೋದು ಹೊಸದಲ್ಲ. ಗುಜರಾತ್ ಮುಖ್ಯಮಂತ್ರಿಯಾಗಿದ್ದಾಗ ಎಸ್ಐಎಫ್ ರಚಿಸಿ ಫೋನ್ ಕದ್ದಾಲಿಕೆ ಮಾಡಿದ್ದು ಸ್ನೂಪ್ ಗೇಟ್ ಎಂದು ಕುಖ್ಯಾತವಾಗಿತ್ತು" ಎಂದು ಹರಿಪ್ರಸಾದ್ ಹೇಳಿದ್ದಾರೆ.

ರಾಹುಲ್ ಗಾಂಧಿ ಮೋದಿಯವರಿಗೆ ಬಹಿರಂಗ ಚರ್ಚೆಗೆ ಆಹ್ವಾನ ನೀಡಿದ್ದು, ಆ ಚರ್ಚೆ ಆದ ದಿನವೇ ಅವರ ರಾಜಕೀಯ ಜೀವನ ಕೊನೆಯಾಗುತ್ತದೆ ಎಂದು ಹೇಳಿದ್ದಾರೆ. "ಯಾರು ವಿದೇಶಿ ಶಕ್ತಿಗಳ ಕೈಗೊಂಬೆ ಎಂಬುದು ಸಾಬೀತಾಗಬೇಕಿದೆ. ಮೋದಿಯವರಿಗೆ 56 ಇಂಚಿನ ಎದೆ ಇದ್ದರೆ ಬಹಿರಂಗ ಚರ್ಚೆಗೆ ಬರಲಿ" ಎಂದು ಹರಿಪ್ರಸಾದ್ ಸವಾಲು ಹಾಕಿದ್ದಾರೆ.

ಕರ್ನಾಟಕದಲ್ಲೂ ರಾಮಕೃಷ್ಣ ಹೆಗಡೆ ಅವರ ವಿರುದ್ಧ ಫೋನ್ ಕದ್ದಾಲಿಕೆ ಆರೋಪ ಬಂದಾಗ ಅವರು ರಾಜೀನಾಮೆ ನೀಡಿದ್ದರು ಎಂದು ಅವರು ಸ್ಮರಿಸಿದ್ದಾರೆ.

ನಿಗಮ-ಮಂಡಳಿಗಳಿಗೆ ಆರ್‌ಎಸ್‌ಎಸ್ ಕಾರ್ಯಕರ್ತರ ನೇಮಕಕ್ಕೆ ಆಕ್ಷೇಪ; ತನಿಖೆ ಆರಂಭ

ರಾಜ್ಯದ ನಿಗಮ ಮಂಡಳಿಗಳಿಗೆ ಆರ್‌ಎಸ್‌ಎಸ್ ಹಿನ್ನೆಲೆಯ ಕಾರ್ಯಕರ್ತರನ್ನು ನೇಮಕ ಮಾಡಿರುವ ವಿಚಾರದಲ್ಲಿ ಸರ್ಕಾರ ತನಿಖೆ ಆರಂಭಿಸಿದೆ. ಈಗಾಗಲೇ ಕೆಲವರಿಗೆ ರಾಜೀನಾಮೆ ನೀಡುವಂತೆ ನಿರ್ದೇಶನ ನೀಡಲಾಗಿದೆ ಎಂದು ಬಿ.ಕೆ.ಹರಿಪ್ರಸಾದ್ ಹೇಳಿದರು. "ನಾವು 400ಕ್ಕೂ ಹೆಚ್ಚು ನೇಮಕ ಮಾಡಿದ್ದೇವೆ. ಒಂದೆರಡು ಅಚಾತುರ್ಯ ಆಗಿರುತ್ತೆ, ಅದನ್ನು ಸರಿಮಾಡಿಕೊಳ್ಳುತ್ತೇವೆ. ಇನ್ನೂ ಎರಡು ಪಟ್ಟಿ ಬರುತ್ತೆ, ಅದರಲ್ಲಿ ಎಲ್ಲರಿಗೂ ಅವಕಾಶ ಮಾಡಿಕೊಡುವ ಪ್ರಯತ್ನ ಮಾಡ್ತೇವೆ" ಎಂದರು. ಯಾರಿಗೆ ಆರ್‌ಎಸ್‌ಎಸ್ ಹಿನ್ನೆಲೆ ಇದೆ ಎಂಬುದನ್ನು ತನಿಖೆ ಮಾಡಲಾಗುತ್ತಿದೆ. ಅಂಥವರು ರಾಜೀನಾಮೆ ನೀಡಬೇಕು ಅಥವಾ ಸರ್ಕಾರ ಅವರನ್ನು ವಾಪಸ್ ತೆಗೆಯಬೇಕು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಜಿಪಂ, ತಾಪಂ ಚುನಾವಣೆಗಳನ್ನು ಗಂಭೀರವಾಗಿ ಪರಿಗಣಿಸಲು ನಿರ್ಧಾರ: ಬಿ.ವೈ.ವಿಜಯೇಂದ್ರ



ಬೆಂಗಳೂರು, ನ.14: ರಾಜ್ಯದಲ್ಲಿ ನಡೆಯುವ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲು ಬಿಜೆಪಿ ನಿರ್ಧರಿಸಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಖಾಸಗಿ ರೆಸಾರ್ಟ್‌ನಲ್ಲಿ ಶನಿವಾರ ಬಿಜೆಪಿ ಪ್ರಮುಖರ ಸಭೆ ನಡೆಯಿತು. ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ಸಹ ಉಸ್ತುವಾರಿ ಕಾಸಂ ವೆಂಕಟೇಶ್ವರಲು, ಮಾಜಿ ಮುಖ್ಯಮಂತ್ರಿ ಮತ್ತು ಕೇಂದ್ರ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಪ್ರಮುಖರು ಉಪಸ್ಥಿತರಿದ್ದರು.

ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಯನ್ನು ಬಿಜೆಪಿ ಅತ್ಯಂತ ಗಂಭೀರವಾಗಿ ಪರಿಗಣಿಸಲಿದೆ. ಕಾರ್ಯಕರ್ತರ ಚುನಾವಣೆ ಎಂದೇ ಪರಿಗಣಿಸುವ ಈ ಚುನಾವಣೆಯಲ್ಲಿ ಗೆಲ್ಲುವ ದೃಷ್ಟಿಯಿಂದ ಸಂಘಟನಾತ್ಮಕ ವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ. ಎಲ್ಲ ನಾಯಕರು ಜಿಲ್ಲೆ, ತಾಲ್ಲೂಕುಗಳಿಗೆ ಪ್ರವಾಸ ಮಾಡಲಿದ್ದಾರೆ ಎಂದು ವಿವರಿಸಿದ್ದಾರೆ.

ತೀವ್ರ ಬೆಲೆ ಹೆಚ್ಚಳ, ಹದಗೆಟ್ಟ ಕಾನೂನು ಸುವ್ಯವಸ್ಥೆ ಸೇರಿದಂತೆ ಇವೆಲ್ಲ ವಿಚಾರಗಳ ಕುರಿತು ಜನಜಾಗೃತಿ ಮೂಡಿಸಲು ಎಲ್ಲ ತಾಲ್ಲೂಕುಗಳಲ್ಲೂ ಹೋರಾಟ ರೂಪಿಸುವ ಕುರಿತು ಚರ್ಚೆ ನಡೆಯಿತು.

ಅಭಿವೃದ್ಧಿಕಾರ್ಯಗಳು ಸಂಪೂರ್ಣ ಸ್ಥಗಿತ

ಹಾಲು, ಸ್ಟಾಂಪ್ ಪೇಪರ್, ಸರಕಾರಿ ಬಸ್ ಪ್ರಯಾಣದರ ಏರಿಕೆ, ಆಲ್ಕೋಹಾಲ್ ದರ ಏರಿಕೆ, ಡೀಸೆಲ್, ಪೆಟ್ರೋಲ್ ಸುಂಕ ಹೆಚ್ಚಳ ಸೇರಿ ಎಲ್ಲ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರು ತತ್ತರಿಸುವ ಸ್ಥಿತಿ ಇದೆ. ಇನ್ನೊಂದೆಡೆ ಸರಕಾರ ಆಡಳಿತಾತ್ಮಕವಾಗಿ ಅತ್ಯಂತ ನಿಷ್ಕ್ರಿಯ ಸ್ಥಿತಿಗೆ ತಲುಪಿದ್ದು, ಭ್ರಷ್ಟಾಚಾರ ಮಿತಿ ಮೀರಿದೆ. ಅಭಿವೃದ್ಧಿ ಕಾರ್ಯಗಳು ಸಂಪೂರ್ಣ ಸ್ಥಗಿತವಾಗಿವೆ. ಬರಗಾಲದಿಂದ ರೈತರ ಸಂಕಷ್ಟ ತೀವ್ರವಾಗಿದೆ. ಜನ, ಜಾನುವಾರುಗಳು ಇದರಿಂದ ಕಷ್ಟ ಅನುಭವಿಸುವಂತಾಗಿದೆ ಎಂಬ ವಿಚಾರಗಳು ಸಭೆಯಲ್ಲಿ ಚರ್ಚೆಗೆ ಬಂದವು. ಈ ಸರಕಾರವು ಸುಳ್ಳು ಹೇಳುವ ಹಾಗೂ ತಪ್ಪು ಮಾಹಿತಿ ನೀಡುವ ವಿಚಾರಗಳೂ ಚರ್ಚೆಗೆ ಒಳಪಟ್ಟವು. ಈ ಸರಕಾರವು ರೈತರನ್ನು ಭಿಕ್ಷುಕರಂತೆ ಕಾಣುತ್ತಿದೆ. ಬರ ಪರಿಹಾರ ಮೊತ್ತವನ್ನು ಸರಿಯಾಗಿ ನೀಡಿಲ್ಲ. ಬರಗಾಲ ನಿರ್ವಹಣೆಯಲ್ಲಿ ಸರಕಾರ ಸಂಪೂರ್ಣ ವಿಫಲವಾಗಿದೆ. ವಿಧವಾ ಮಾಸಾಶನ, ಹಿರಿಯ ನಾಗರಿಕರ ಪಿಂಚಣಿಯನ್ನೂ ಕಳೆದ ಕೆಲವು ತಿಂಗಳಿನಿಂದ ಬಾಕಿ ಉಳಿಸಿಕೊಂಡಿದೆ. ಇವೆಲ್ಲವನ್ನೂ ಕ್ರೋಡೀಕರಿಸಿ ಜನರ ಮುಂದಿಡಲಾಗುವುದು. ಮುಂಬರುವ ಎಲ್ಲ ಚುನಾವಣೆಗಳಲ್ಲೂ ಪಕ್ಷವು ಗೆಲುವು ಸಾಧಿಸಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ಮೋದಿ ವಿರುದ್ಧ ರಾಹುಲ್ ಆರೋಪ ಅನುಚಿತ

ಬೇಷರತ್ ಕ್ಷಮೆಯಾಚನೆಗೆ ಆಗ್ರಹಿಸಿ ರವಿಕುಮಾರ್ ವಾಗ್ದಾಳಿ



ಬೆಂಗಳೂರು, ನ.14: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಫೋನ್ ಕದ್ದಾಲಿಕೆ ಮಾಡುತ್ತಿದ್ದಾರೆ ಎಂಬ ರಾಹುಲ್ ಗಾಂಧಿ ಮಾಡಿರುವ ಆರೋಪಗಳು ಬೇಜವಾಬ್ದಾರಿತನದಿಂದ ಕೂಡಿದ್ದು, ಅತ್ಯಂತ ಕೀಳುಮಟ್ಟದ್ದಾಗಿದೆ ಹಾಗೂ ಆಧಾರರಹಿತವಾಗಿದೆ.

ರಾಹುಲ್ ಗಾಂಧಿ ಕೂಡಲೇ ಬೇಷರತ್ ಕ್ಷಮೆಯಾಚಿಸಬೇಕು ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆಗ್ರಹಿಸಿದ್ದಾರೆ.

ಮಕ್ಕಳ ದಿನಾಚರಣೆಯಂದು ರಾಹುಲ್ ಗಾಂಧಿ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ಕುರಿತು ನೀಡಿರುವ ಹೇಳಿಕೆಗಳ ಬಗ್ಗೆ ಪ್ರತಿಕ್ರಿಯಿಸಿರುವ ಅವರು, ರಾಹುಲ್ ಗಾಂಧಿ ಅವರ ಮಾತುಗಳನ್ನು ಬಾಲಿಶ ಹಾಗೂ ಅಪಕ್ವ ಹೇಳಿಕೆಗಳೆಂದು ಪರಿಗಣಿಸಬೇಕೋ ಅಥವಾ ಶಿಷ್ಟಾಚಾರ ಮತ್ತು ಜವಾಬ್ದಾರಿಯ ಅರಿವಿಲ್ಲದ ವ್ಯಕ್ತಿಯ ಹೇಳಿಕೆಗಳೆಂದು ಗಂಭೀರವಾಗಿ ಪರಿಗಣಿಸಬೇಕೋ ಎಂಬ ಗೊಂದಲ ಮೂಡುತ್ತಿದೆ ಎಂದು ಟೀಕಿಸಿದ್ದಾರೆ.

ಕಳೆದ 12 ವರ್ಷಗಳಿಂದ ಪ್ರಧಾನಮಂತ್ರಿಯಾಗಿ ಹಗಲಿರುಳು ದೇಶದ ಹಿತಕ್ಕಾಗಿ ಶ್ರಮಿಸುತ್ತಿರುವ ನರೇಂದ್ರ ಮೋದಿ ಅವರು ಇಂದು ಜಾಗತಿಕ ನಾಯಕನಾಗಿ ಗುರುತಿಸಿಕೊಂಡಿದ್ದಾರೆ. ಅವರ ವ್ಯಕ್ತಿತ್ವ ಮತ್ತು ಸಾರ್ವಜನಿಕ ಜೀವನದ ದಾಖಲೆಯ ಬಗ್ಗೆ ದೇಶದ ಜನರಿಗೆ ವಿಶ್ವಾಸವಿದೆ. ಇಂತಹ ಕೀಳುಮಟ್ಟದ ತಂತ್ರಗಳಿಗೆ ಅವರು ಎಂದಿಗೂ ಮೊರೆ ಹೋಗುವುದಿಲ್ಲ ಎಂಬುದು 140 ಕೋಟಿ ಭಾರತೀಯರ ನಂಬಿಕೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

ಮಹಿಳಾ ಮೀಸಲಾತಿ-ರಾಜಕೀಯ ಪ್ರಾತಿನಿಧ್ಯಕ್ಕೆ ಆದ್ಯತೆ: ಡಿ.ಕೆ.ಶಿವಕುಮಾರ್ ಅಭಿಮತ

ಕಾಮನ್ ವೆಲ್ತ್ ಮಹಿಳಾ ಸಂಸದೀಯ ಪಟುಗಳ ಭಾರತೀಯ ಪ್ರಾದೇಶಿಕ ಸಮ್ಮೇಳನದ ಲಾಂಛನ ಅನಾವರಣ

ಬೆಂಗಳೂರು, ನ14: ಮಹಿಳಾ ಮೀಸಲಾತಿ ಮಸೂದೆ ಲೋಕಸಭೆಯಲ್ಲಿ ಅಂಗೀಕಾರವಾಗಬೇಕಿದೆ. ಮುಂಬರುವ ಸಂಸತ್ ಅಧಿವೇಶನದಲ್ಲಿ ಇದು ಕಾರ್ಯರೂಪಕ್ಕೆ ಬರುವ ವಿಶ್ವಾಸವಿದೆ. ಸಂಸತ್ತು ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಸೂಕ್ತ ಪ್ರಾತಿನಿಧ್ಯ ಸಿಗಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಬೆಂಗಳೂರಿನಲ್ಲಿ ಆಯೋಜಿಸಿರುವ ಕಾಮನ್ ವೆಲ್ತ್ ಮಹಿಳಾ ಸಂಸದೀಯ ಪಟುಗಳ ಭಾರತೀಯ ಪ್ರಾದೇಶಿಕ ಸಮ್ಮೇಳನದ ಲಾಂಛನವನ್ನು ವಿಧಾನಸೌಧದ ಮೆಟ್ಟಿಲುಗಳ ಮೇಲೆ ಶನಿವಾರ ಅನಾವರಣಗೊಳಿಸಿ ಮಾತನಾಡಿ, ಈ ಹಿಂದೆ ರಾಜೀವ್‌ಗಾಂಧಿ ಅವರು ಪಂಚಾಯತ್ ನಿಂದ ಹಿಡಿದು ಜಿಲ್ಲಾ ಆಡಳಿತದವರೆಗೆ ಮಹಿಳೆಯರಿಗೆ ಶೇ. 50 ರಷ್ಟು ಮೀಸಲಾತಿ ಕಲ್ಪಿಸುವ ಕಾನೂನು ತಂದಿದ್ದರು. ಎಲ್ಲಾ ರಾಜಕೀಯ ಪಕ್ಷಗಳು ಮಹಿಳಾ ಮೀಸಲಾತಿ ಪರವಾಗಿವೆ



ಎನ್ನುವ ಅಭಿಪ್ರಾಯ ನನ್ನದು ಎಂದು ಹೇಳಿದರು.

ರಾಜ್ಯದ ಆಡಳಿತ ವ್ಯವಸ್ಥೆಯಲ್ಲಿ ಮಹಿಳೆಯರ ಪ್ರಾಬಲ್ಯ ಸಂತೋಷಕರ ಸಂಗತಿ. ನಮ್ಮ ರಾಜ್ಯದ ರಾಜ್ಯಪಾಲರು, ಮುಖ್ಯ ಕಾರ್ಯದರ್ಶಿಗಳು, ವಿಧಾನಸಭೆ ಕಾರ್ಯದರ್ಶಿ, ವಿಧಾನ ಪರಿಷತ್ ಕಾರ್ಯದರ್ಶಿ ಹಾಗೂ ಉಪಸಭಾಪತಿಗಳ ಸ್ಥಾನದಲ್ಲಿ ಮಹಿಳೆಯರೇ ಇದ್ದಾರೆ. ಇವರೆಲ್ಲರಿಗೂ ನಮಸ್ಕರಿಸಿ ನಾವು ಕೆಲಸ ಮಾಡಿಸಿಕೊಳ್ಳುವಂತಹ ಸುಸಂದರ್ಭ ಒದಗಿಬಂದಿದೆ. ಹೆಣ್ಣು ಕುಟುಂಬದ ಕಣ್ಣು. ಮಹಿಳೆ ಸಬಲಳಾದರೆ ಪುರುಷರೂ ಸಬಲರಾಗುತ್ತಾರೆ," ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನವೆಂಬರ್ 17 ಮತ್ತು 18ರಂದು ಸಮ್ಮೇಳನ ನಡೆಯಲಿದ್ದು, ದೇಶ ಮತ್ತು ವಿದೇಶಗಳ ಸುಮಾರು 150ಕ್ಕೂ ಹೆಚ್ಚು ಮಹಿಳಾ ಸಂಸದರು, ಶಾಸಕರು ಹಾಗೂ ಸಭಾಧ್ಯಕ್ಷರು ಪಾಲ್ಗೊಳ್ಳಲಿದ್ದು, ದೇಶದ ಅಭಿವೃದ್ಧಿ ಮತ್ತು ಮಹಿಳಾ ಹಕ್ಕುಗಳ ರಕ್ಷಣೆಯ ಕುರಿತು ಮಾರ್ಗದರ್ಶನ ನೀಡಲಿದ್ದಾರೆ ಎಂದರು.

ಸಿಡಬ್ಲ್ಯುಪಿ ಸಮ್ಮೇಳನ ಐತಿಹಾಸಿಕ ಮೈಲಿಗಲ್ಲು

ನವೆಂಬರ್ 17 ಮತ್ತು 18 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಮೊಟ್ಟಮೊದಲ ಸ್ವತಂತ್ರ ಕಾಮನ್ವೆಲ್ತ್ ಮಹಿಳಾ ಸಂಸದರ (ಅಫಾಕ) ಭಾರತ ವಲಯದ ಸಮ್ಮೇಳನಕ್ಕೆ ಕರ್ನಾಟಕ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ. ಸಿಡಬ್ಲ್ಯೂಪಿ ಭಾರತ ವಲಯದ ಅಧ್ಯಕ್ಷೆ ಡಿ. ಪುರಂದೇಶ್ವರಿ ನಾಯಕತ್ವದಲ್ಲಿ ನಡೆಯುತ್ತಿರುವ ಈ ಸಮ್ಮೇಳನವು ಕರ್ನಾಟಕದ ಇತಿಹಾಸದಲ್ಲಿ ಒಂದು ದೊಡ್ಡ ಮೈಲಿಗಲ್ಲಾಗಿದೆ ಎಂದು ಬಣ್ಣಿಸಿದರು. ಈ ಸಮ್ಮೇಳನದ ಯಶಸ್ಸಿಗೆ ವಿಧಾನಸಭಾ ಸ್ಪೀಕರ್ ಜಿ.ಎಸ್. ಪಾಟೀಲ್ ಮತ್ತು ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್ ಅವರ ಮೂಲಕ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡಲಿದೆ ಎಂದು ಡಿ.ಕೆ. ಶಿವಕುಮಾರ್ ಭರವಸೆ ನೀಡಿದರು.

ರಾಜ್ಯಸಭಾ ಸ್ಥಾನಕ್ಕೆ ಕೇಂದ್ರ ಸಚಿವ ಹರದೀಪ್ ಸಿಂಗ್ ಪುರಿ ರಾಜೀನಾಮೆ


ನವದೆಹಲಿ, ನ.14: ಮಧ್ಯಪ್ರದೇಶದಿಂದ ಮೇಲ್ಮನೆಗೆ ಅವಿರೋಧವಾಗಿ ಆಯ್ಕೆಯಾದ ಕೆಲವು ದಿನಗಳ ಬಳಿಕ ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಸಚಿವ ಹರದೀಪ್ ಸಿಂಗ್ ಪುರಿ ಶನಿವಾರ ಉತ್ತರ ಪ್ರದೇಶವನ್ನು ಪ್ರತಿನಿಧಿಸುವ ತಮ್ಮ ರಾಜ್ಯಸಭಾ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ರಾಜ್ಯಸಭೆ ವರದಿ ಪ್ರಕಾರ, ಉತ್ತರ ಪ್ರದೇಶ ರಾಜ್ಯವನ್ನು ಪ್ರತಿನಿಧಿಸುವ ರಾಜ್ಯಗಳ ಪರಿಷತ್ತಿನ (ರಾಜ್ಯಸಭೆ) ಚುನಾಯಿತ ಸದಸ್ಯರಾದ ಹರದೀಪ್ ಸಿಂಗ್ ಪುರಿ ಅವರು ತಮ್ಮ ರಾಜ್ಯಸಭೆಯ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ನವೆಂಬರ್ 14 ರಿಂದ ಜಾರಿಗೆ ಬರುವಂತೆ ಸಭಾಪತಿಗಳು ಅಂಗೀಕರಿಸಿದ್ದಾರೆ ತಿಳಿಸಲಾಗಿದೆ.

ಕಳೆದ ವಾರ ನಡೆದ ಮಧ್ಯಪ್ರದೇಶದಿಂದ ರಾಜ್ಯಸಭೆ ನಡೆದ ಉಪಚುನಾವಣೆಯಲ್ಲಿ ಇತರ ಇಬ್ಬರು ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತಗೊಂಡ ಬಳಿಕ ಪುರಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದರು. ಮಾಜಿ ಕೇಂದ್ರ ಸಚಿವ ಎಲ್ ಮುರುಗನ್ ಅವರ ರಾಜೀನಾಮೆಯಿಂದ ಈ ಸ್ಥಾನ ತೆರವಾಗಿತ್ತು.

ಖರ್ಗೆ ಎಐಸಿಸಿ ಅಧ್ಯಕ್ಷರಾದಾಗ ನಿರಾಳಗೊಂಡೆ: ಸೋನಿಯಾ

ನವದೆಹಲಿ, ನ.14: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಗಾಂಭೀರ್ಯವುಳ್ಳ ವ್ಯಕ್ತಿ ಎಂದು ಬಣ್ಣಿಸಿರುವ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ, 2022ರಲ್ಲಿ ಖರ್ಗೆ ಅವರು ಪಕ್ಷದ ಅಧ್ಯಕ್ಷ ಸ್ಥಾನವನ್ನು ವಹಿಸಿಕೊಂಡಾಗ ತಮಗೆ ಅತೀವ ನಿರಾಳವಾಯಿತು ಎಂದು ಹೇಳಿಕೊಂಡಿದ್ದಾರೆ.



ತಮ್ಮ ಬಹು ಚರ್ಚಿತ ಆತ್ಮಕಥೆ ಬಿಲಾಂಗಿಂಗ್: ಎ ಜರ್ನಿ ಆಫ್ ಲವ್ ಕೃತಿಯಲ್ಲಿ ಸೋನಿಯಾ ಗಾಂಧಿ ಈ ವಿಷಯವನ್ನು ಹಂಚಿಕೊಂಡಿದ್ದಾರೆ. ಎರಡು ದಶಕಗಳಿಗೂ ಹೆಚ್ಚು ಕಾಲ ಕಾಂಗ್ರೆಸ್ ಅನ್ನು ಮುನ್ನಡೆಸಿದ ಬಳಿಕ, 2022ರ ಅಕ್ಟೋಬರ್‌ನಲ್ಲಿ ನಡೆದ ಸಾಂಸ್ಥಿಕ ಚುನಾವಣೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಅಧ್ಯಕ್ಷರಾಗಿ ಆಯ್ಕೆಯಾದ ಸಂದರ್ಭವನ್ನು ಮೆಲುಕು ಹಾಕಿದ್ದಾರೆ.

ದಶಕಗಳ ಕಾಲ ತಳಮಟ್ಟದಿಂದ ಬೆಳೆದು ಬಂದಿರುವ ಮಲ್ಲಿಕಾರ್ಜುನ ಖರ್ಗೆ ಅವರ ರಾಜಕೀಯ ಅನುಭವ, ಬದ್ಧತೆ ಮತ್ತು ಗಾಂಭೀರ್ಯವನ್ನು ಸೋನಿಯಾ ಗಾಂಧಿ ಶ್ಲಾಘಿಸಿದ್ದಾರೆ. ಕಾಂಗ್ರೆಸ್‌ಗೆ ಅತ್ಯಂತ ಸವಾಲಿನ ಸಮಯದಲ್ಲಿ ಸಮರ್ಥ ನಾಯಕತ್ವ ದೊರೆಯಿತು ಎಂಬ ಭಾವನೆಯನ್ನು ವ್ಯಕ್ತಪಡಿಸಿದ್ದಾರೆ.

2019ರಲ್ಲಿ ರಾಹುಲ್ ಗಾಂಧಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಹಂಗಾಮಿ ಅಧ್ಯಕ್ಷೆಯಾಗಿ ಕಾರ್ಯನಿರ್ವಹಿಸುತ್ತಿದ್ದ ಸೋನಿಯಾ ಗಾಂಧಿ, ಖರ್ಗೆ ಅವರು ಅಧಿಕಾರ ವಹಿಸಿಕೊಂಡಾಗ ತಮ್ಮ ಮೇಲಿದ್ದ ದೊಡ್ಡ ಹೊರೆ ಇಳಿದಂತಾಗಿ ಅತೀವ ನಿರಾಳತೆ ಅನುಭವಿಸಿದ್ದಾಗಿ ಬರೆದುಕೊಂಡಿದ್ದಾರೆ. 2022ರ ಅಕ್ಟೋಬರ್ 26ರಂದು ಖರ್ಗೆ ಅಧಿಕಾರ ಸ್ವೀಕರಿಸಿದ ಸಮಾರಂಭದಲ್ಲೂ ಸೋನಿಯಾ ಇದೇ ರೀತಿಯ ನಿರಾಳತೆಯ ಭಾವನೆಯನ್ನು ವ್ಯಕ್ತಪಡಿಸಿದ್ದರು.

ಈ ಹಿಂದೆಯೂ ಹಲವು ವೇದಿಕೆಗಳಲ್ಲಿ ಹಾಗೂ ಪತ್ರಿಕೆಗೆ ನೀಡಿದ ಸಂದರ್ಶನದಲ್ಲೂ ಸೋನಿಯಾ ಗಾಂಧಿ, ಕಾಂಗ್ರೆಸ್‌ನ ಸಾಮಾನ್ಯ ಕಾರ್ಯಕರ್ತನೊಬ್ಬ ಉನ್ನತ ಹುದ್ದೆಗೆ ಏರಲು ಮಲ್ಲಿಕಾರ್ಜುನ ಖರ್ಗೆ ಅವರೇ ಅತ್ಯುತ್ತಮ ಉದಾಹರಣೆ ಎಂದು ಉಲ್ಲೇಖಿಸಿದ್ದರು.

ಎಸ್‌ಸಿ/ಎಸ್‌ಟಿ ಮೀಸಲಾತಿ ಸಂವಿಧಾನ 9ನೇ ಅನುಸೂಚಿಗೆ: ತುರ್ತು ಕ್ರಮಕ್ಕೆ ಆಗ್ರಹಿಸಿ ಕೇಂದ್ರ ನಾಯಕರಿಗೆ ಡಿಸಿಎಂ ಡಾ.ಜಿ. ಪರಮೇಶ್ವರ್ ಪತ್ರ



ಬೆಂಗಳೂರು, ನ.14: ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಕಾಯ್ದೆಯನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸಲು ತುರ್ತು ಕ್ರಮ ಕೈಗೊಳ್ಳುವಂತೆ ಕೋರಿ ಡಾ.ಜಿ.ಪರಮೇಶ್ವರ್ ಅವರು ಕೇಂದ್ರ ನಾಯಕರಿಗೆ ಪತ್ರ ಬರೆದಿದ್ದಾರೆ. ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು 2022ರಲ್ಲಿ ಕಾಯ್ದೆ ರೂಪಿಸಿತ್ತು. 2023ರ ಜನವರಿ 11ರಂದು ರಾಜ್ಯಪಾಲರ ಅಂಕಿತ ಪಡೆದ ಈ ಕಾಯ್ದೆಯು 2022ರ ನವೆಂಬರ್ 1ರಿಂದ ಅನ್ವಯವಾಗುವಂತೆ ಜಾರಿಗೊಂಡಿತ್ತು. ಆದರೆ, ಒಟ್ಟು ಮೀಸಲಾತಿ ಶೇ.56ಕ್ಕೆ ಏರಿಕೆಯಾಗುವುದು ಶೇ.50ರ ಮೀಸಲಾತಿ ಮಿತಿಯನ್ನು ಮೀರಿದಂತಾಗುತ್ತದೆ ಎಂಬ ಕಾರಣಕ್ಕೆ ಕರ್ನಾಟಕ ಹೈಕೋರ್ಟ್ 2026ರ ಅಕ್ಟೋಬರ್ 12ರಂದು ಮೀಸಲಾತಿ ಹೆಚ್ಚಳದ ನಿಬಂಧನೆಗಳನ್ನು ರದ್ದುಗೊಳಿಸಿದೆ. ಈ ತೀರ್ಪಿನ ವಿರುದ್ಧ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದೆ.

ತಮಿಳುನಾಡಿನಲ್ಲಿ ಶೇ.69ರ ಮೀಸಲಾತಿಗೆ ಸಂವಿಧಾನಾತ್ಮಕ ರಕ್ಷಣೆ ನೀಡಲು 1994ರಲ್ಲಿ ಸಂವಿಧಾನದ 76ನೇ ತಿದ್ದುಪಡಿ ಮೂಲಕ ಅಲ್ಲಿನ ಕಾಯ್ದೆಯನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸಲಾಗಿತ್ತು. ಅದೇ ಮಾದರಿಯಲ್ಲಿ ಕರ್ನಾಟಕದ ಶೇ.56ರ ಮೀಸಲಾತಿಗೂ ಸಂವಿಧಾನಾತ್ಮಕ ರಕ್ಷಣೆ ನೀಡುವ ಕುರಿತು ಕೇಂದ್ರ ಸರ್ಕಾರ ಗಂಭೀರವಾಗಿ ಕ್ರಮ ಕೈಗೊಳ್ಳಬೇಕು ಎಂದು ಪತ್ರದಲ್ಲಿ ಒತ್ತಾಯಿಸಲಾಗಿದೆ.

ಕರ್ನಾಟಕ ಸರ್ಕಾರವು 2023ರ ಮಾರ್ಚ್ 23ರಂದೇ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿದೆ. 2025ರ ಡಿಸೆಂಬರ್ 18ರಂದು ರಾಜ್ಯ ವಿಧಾನಸಭೆಯಲ್ಲಿಯೂ ಈ ಸಂಬಂಧ ನಿರ್ಣಯ ಅಂಗೀಕರಿಸಲಾಗಿದೆ. 2026ರ ಏಪ್ರಿಲ್ 16ರಂದು ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿಗೆ ಪತ್ರ ಬರೆದಿದ್ದರು. ಆದರೂ ನ್ಯಾಯಾಲಯದಲ್ಲಿ ಪ್ರಕರಣ ಬಾಕಿಯಿದೆ ಎಂಬ ಕಾರಣ ನೀಡಿ ಕೇಂದ್ರ ಸರ್ಕಾರ ಈ ವಿಷಯವನ್ನು ಮುಂದೂಡಿತ್ತು ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಪ್ರಧಾನಮಂತ್ರಿಗಳು ಖುದ್ದು ಮಧ್ಯಪ್ರವೇಶಿಸಿ, ಕರ್ನಾಟಕದ ಮೀಸಲಾತಿ ಹೆಚ್ಚಳ ಕಾಯ್ದೆಯನ್ನು 9ನೇ ಅನುಸೂಚಿಗೆ ಸೇರಿಸಲು ಅಗತ್ಯವಾದ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಸಂಸತ್ತಿನಲ್ಲಿ ಮಂಡಿಸುವ ಪ್ರಕ್ರಿಯೆಯನ್ನು ತ್ವರಿತವಾಗಿ ಆರಂಭಿಸಬೇಕು ಎಂದು ಮನವಿ ಮಾಡಿದ್ದಾರೆ.

ಪತ್ರದ ಪ್ರಮುಖ ಬೇಡಿಕೆಗಳು

ಎಸ್‌ಸಿ ಮೀಸಲಾತಿ ಶೇ.17 ಮತ್ತು ಎಸ್‌ಟಿ ಮೀಸಲಾತಿ ಶೇ.7ಕ್ಕೆ ಹೆಚ್ಚಿಸುವ ಕಾಯ್ದೆಯನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸಬೇಕು. ಸಂಸತ್ತಿನಲ್ಲಿ ಅಗತ್ಯ ಸಂವಿಧಾನ ತಿದ್ದುಪಡಿ ಮಸೂದೆ ಮಂಡಿಸಲು ಕೇಂದ್ರ ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು.ರಾಷ್ಟ್ರೀಯ ಎಸ್‌ಸಿ ಮತ್ತು ಎಸ್‌ಟಿ ಆಯೋಗಗಳೊಂದಿಗೆ ಸಮಾಲೋಚನೆ ನಡೆಸಿ, ನ್ಯಾಯಾಲಯ ಗುರುತಿಸಿರುವ ಸಂವಿಧಾನಾತ್ಮಕ ಹಾಗೂ ಪ್ರಕ್ರಿಯಾತ್ಮಕ ಸಮಸ್ಯೆಗಳನ್ನು ಪರಿಹರಿಸಬೇಕು. ಸಂಬಂಧಪಟ್ಟ ಕೇಂದ್ರ ಸಚಿವಾಲಯಗಳು ಸಮನ್ವಯದಿಂದ ಕಾಲಮಿತಿಯೊಳಗೆ ನಿರ್ಧಾರ ಕೈಗೊಳ್ಳಬೇಕು.ದೇಶದಲ್ಲಿ ಶೇ.50ರ ಮೀಸಲಾತಿ ಮಿತಿಯ ಕುರಿತು ರಾಷ್ಟ್ರಮಟ್ಟದಲ್ಲಿ ಮರುಪರಿಶೀಲನೆ ಮತ್ತು ವ್ಯಾಪಕ ಚರ್ಚೆ ನಡೆಸಬೇಕು. ತಮಿಳುನಾಡಿನ ಶೇ.69ರ ಮೀಸಲಾತಿಗೆ ನೀಡಿರುವ ಸಂವಿಧಾನಾತ್ಮಕ ರಕ್ಷಣೆಯ ಮಾದರಿಯಲ್ಲಿಯೇ ಕರ್ನಾಟಕದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಶೇ.24ರ ಒಟ್ಟು ಮೀಸಲಾತಿಗೂ ರಕ್ಷಣೆ ಒದಗಿಸಿ, ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿಯಬೇಕು ಎಂದು ಪತ್ರದಲ್ಲಿ ಪರಮೇಶ್ವರ್ ಉಲ್ಲೇಖಿಸಿದ್ದಾರೆ.

ಉತ್ಪಾದನಾ ವಲಯದ ಉದ್ಯೋಗಿಗಳಿಗೆ ಸೂರು ಕಲ್ಪಿಸಲು ಶ್ರಮಿಕ ನಿವಾಸ್: ಸಚಿವ ಎಂ.ಬಿ. ಪಾಟೀಲ್

ಹೆಚ್ಚಿನ ಉದ್ಯೋಗಿಗಳಿರುವ ಕೈಗಾರಿಕೆಗಳ ಸಮೀಪದಲ್ಲೇ ಡಾಮೆಂಟರಿ, 1-2 ಕೊಠಡಿ ನಿರ್ಮಾಣ, ಕಡಿಮೆ ಬಾಡಿಗೆ ಅಥವಾ ಉಚಿತ ವಾಸ



ಬೆಂಗಳೂರು, ನ.14: ಉತ್ಪಾದನಾ ವಲಯದಲ್ಲಿ ಶ್ರಮದಿಂದ ದುಡಿಯುವ ಉದ್ಯೋಗಿಗಳಿಗೆ ತಾವು ಕೆಲಸ ಮಾಡುವ ಕೈಗಾರಿಕೆಗಳ ಸಮೀಪದಲ್ಲೇ ಗುಣಮಟ್ಟದ ವಸತಿ ಸೌಕರ್ಯ ಕಲ್ಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ 'ಶ್ರಮಿಕ್ ನಿವಾಸ' ನೀತಿಯನ್ನು ಜಾರಿಗೆ ತಂದಿದೆ.ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಈ ಯೋಜನೆಯ ನೀತಿಯನ್ನು ಅನಾವರಣಗೊಳಿಸಿದ್ದಾರೆ.

ಈ ಕುರಿತು ಮಾತನಾಡಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಶ್ರಮದ ಕೆಲಸ ಮಾಡುವ ಉದ್ಯೋಗಿಗಳಿಗೆ ನೆಮ್ಮದಿಯ ಸೂರು ಕಲ್ಪಿಸುವುದು ಸರ್ಕಾರದ ಉದ್ದೇಶವಾಗಿದೆ. ಇದರಿಂದ ಅವರು ಪ್ರತಿದಿನ ಬೇರೆ ಬೇರೆ ಊರುಗಳಿಂದ ಕೆಲಸದ ಸ್ಥಳಕ್ಕೆ ಸಂಚರಿಸುವ ತೊಂದರೆ ತಪ್ಪಲಿದೆ. ಜೊತೆಗೆ ಉತ್ಪಾದಕತೆಯೂ ಹೆಚ್ಚಲಿದೆ. ಹೀಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗಿಗಳನ್ನು ಹೊಂದಿರುವ ಕೈಗಾರಿಕೆಗಳ ಸಮೀಪದಲ್ಲೇ ಡಾರ್ಮಿಟರಿ, ಒಂದು ಕೊಠಡಿಯ ಮನೆ ಹಾಗೂ ಎರಡು ಕೊಠಡಿಗಳ ಮನೆಗಳನ್ನು ನಿರ್ಮಿಸಿ, ಕೈಗೆಟುಕುವ ಬಾಡಿಗೆ ದರದಲ್ಲಿ ಅಥವಾ ಉಚಿತವಾಗಿ ವಾಸಕ್ಕೆ ನೀಡಲಾಗುವುದು ಎಂದು ತಿಳಿಸಿದರು.

ಮೊದಲ ಹಂತದಲ್ಲಿ 30 ಸಾವಿರ ಮನೆ ನಿರ್ಮಾಣ

ರಾಜ್ಯದ ಕೈಗಾರಿಕಾ ಪ್ರದೇಶಗಳು ಬೃಹತ್ ಹೂಡಿಕೆಗೆ ಅನುಕೂಲವಾಗುವ ಹಾಗೂ ಆಕರ್ಷಕ ಸೌಲಭ್ಯಗಳನ್ನು ಹೊಂದಿರಬೇಕು ಎಂಬುದು ಸರ್ಕಾರದ ಆಶಯವಾಗಿದೆ. 'ಶ್ರಮಿಕ್ ನಿವಾಸ್' ಯೋಜನೆಯಡಿ ಮೊದಲ ಹಂತದಲ್ಲಿ 30 ಸಾವಿರ ಮನೆಗಳನ್ನು ನಿರ್ಮಿಸಲಾಗುವುದು. 100 ಉದ್ಯೋಗಿಗಳಿಗೆ ವಸತಿ ಸೌಕರ್ಯ ಕಲ್ಪಿಸಿದರೆ ಒಂದು ಕೋಟಿ ರೂ. ಸಬ್ಸಿಡಿ ನೀಡಲಾಗುವುದು. ಇದೇ ರೀತಿ 1,000 ಉದ್ಯೋಗಿಗಳಿಗೆ ವಸತಿ ಒದಗಿಸಿದರೆ 10 ಕೋಟಿ ರೂ. ಹಾಗೂ 2,500 ಕಾರ್ಮಿಕರಿಗೆ ವಸತಿ ಕಲ್ಪಿಸಿದರೆ ಗರಿಷ್ಠ 25 ಕೋಟಿ ರೂ. ಸಬ್ಸಿಡಿ ನೀಡಲಾಗುವುದು. ಬೃಹತ್ ಕೈಗಾರಿಕೆಗಳು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ಶ್ರಮಿಕ್ ನಿವಾಸ್' ಯೋಜನೆಯಡಿ ಗರಿಷ್ಠ 10 ಚದರ ಮೀಟರ್ ವಿಸ್ತೀರ್ಣದ ಡಾಮೆಂಟರಿ, ಗರಿಷ್ಠ 30 ಚದರ ಮೀಟರ್ ವಿಸ್ತೀರ್ಣದ ಸಿಂಗಲ್ ಬೆಡ್‌ರೂಮ್ ಹಾಗೂ ಗರಿಷ್ಠ 60 ಚದರ ಮೀಟರ್ ವಿಸ್ತೀರ್ಣದ ಡಬಲ್ ಬೆಡ್‌ರೂಮ್ ಮನೆಗಳನ್ನು ನಿರ್ಮಿಸಲು ಅವಕಾಶವಿದೆ. ಆದರೆ, ಉದ್ಯಮಿಗಳು ಕೆಐಎಡಿಬಿ ಮೂಲಕ ತಮಗೆ ಮಂಜೂರಾಗಿರುವ ನಿವೇಶನದ ಒಳಗಡೆಯೇ ಇವುಗಳನ್ನು ನಿರ್ಮಿಸುವುದು ಕಡ್ಡಾಯವಾಗಿದೆ ಎಂದು ಎಂ.ಬಿ. ಪಾಟೀಲ್ ಮಾಹಿತಿ ನೀಡಿದರು.

ಕಾಯಂ ಉದ್ಯೋಗಿಗಳಿಗಷ್ಟೇ ಅನ್ವಯ

ಯೋಜನೆಯಡಿ ಕಂಪನಿಗಳ ಕಾಯಂ ಉದ್ಯೋಗಿಗಳು ಮಾತ್ರ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಉದ್ಯೋಗಿಗಳ ಅವಲಂಬಿತರಿಗೆ ಈ ಸೌಲಭ್ಯ ಅನ್ವಯಿಸುವುದಿಲ್ಲ. ಒಂದು ಕಂಪನಿಗೆ ಗರಿಷ್ಠ 25 ಕೋಟಿ ರೂ.ವರೆಗೆ ಸಬ್ಸಿಡಿ ನೀಡಲಾಗುವುದು ಕಾರ್ಮಿಕರು ಕೈಗಾರಿಕೆಗಳ ಅವಿಭಾಜ್ಯ ಅಂಗ. ಪರಿಶ್ರಮದಿಂದ ದುಡಿಯುವವರು ನೆಮ್ಮದಿಯಿಂದ ಇರಬೇಕು ಎಂಬುದು ನಮ್ಮ ಸದಾಶಯ. ವಸತಿ ಸೌಲಭ್ಯದಿಂದ ಕಾರ್ಮಿಕರ ಅನಗತ್ಯ ಓಡಾಟ ತಪ್ಪಿ, ಕೈಗಾರಿಕೆಗಳ ಉತ್ಪಾದಕತೆಯೂ ಹೆಚ್ಚಲಿದೆ. ಇದರಿಂದ ರಾಜ್ಯದ ಆರ್ಥಿಕತೆಗೆ ಅನುಕೂಲವಾಗಲಿದೆ. ಈ ಉದ್ದೇಶದಿಂದಲೇ ಶ್ರಮಿಕ್ ನಿವಾಸ ಯೋಜನೆಯನ್ನು ಜಾರಿಗೆ ತಂದಿದ್ದೇವೆ." ಎಂದು ಎಂ.ಬಿ. ಪಾಟೀಲ್ ತಿಳಿಸಿದರು.

ಕಲ್ಯಾಣ ಕರ್ನಾಟಕದಲ್ಲಿ ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನ: ಸಚಿವ ಅಜಯ್ ಧರ್ಮಸಿಂಗ್ ಆಶಯ



ರಾಯಚೂರು, ನ.14: ಕಲ್ಯಾಣ ಕರ್ನಾಟಕದಲ್ಲಿ ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸುವಂತಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಅಜಯ ಸಿಂಗ್ ಆಶಯ ವ್ಯಕ್ತಪಡಿಸಿದ್ದಾರೆ.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶನಿವಾರ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದಿಂದ ಆಯೋಜಿಸಿದ್ದ 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಮಾತನಾಡಿ, ರಾಯಚೂರು ಜಿಲ್ಲೆ ಸಾಹಿತ್ಯಿಕ ಶ್ರೀಮಂತಿಕೆ ಹೊಂದಿದ್ದು, ದಾಸಸಾಹಿತ್ಯ ಹಾಗೂ ಶರಣ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದೆ. ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕದಲ್ಲಿ ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಬೇಕು' ಎಂದಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸುವುದಾಗಿ ಘೋಷಿಸಿದ್ದಾರೆ. ಮೊದಲ ವಿಶ್ವ ಕನ್ನಡ ಸಮ್ಮೇಳನ ಮೈಸೂರಿನಲ್ಲಿ, ಎರಡನೇ ಸಮ್ಮೇಳನ ಬೆಳಗಾವಿಯಲ್ಲಿ ನಡೆದಿತ್ತು. ಈ ಬಾರಿ ಕಲ್ಯಾಣ ಕರ್ನಾಟಕದಲ್ಲಿ ಸಮ್ಮೇಳನ ಆಯೋಜಿಸುವಂತೆ ಈ ಭಾಗದ ಜನಪ್ರತಿನಿಧಿಗಳು ಹಾಗೂ ಸಾಹಿತಿಗಳು ಮುಖ್ಯಮಂತ್ರಿಗೆ ಮನವಿ ಮಾಡೋಣ' ಎಂದು ಹೇಳಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬಕ್ಕೆ ಎಸ್‌ಐಆರ್ ಕಾರಣ: ಖಂಡ್ರೆ

ಬೆಂಗಳೂರು, ನ.14: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್.)ನಿಂದ ದೇಶದ ಆಡಳಿತ ವ್ಯವಸ್ಥೆಯೇ ಸಂಪೂರ್ಣ ಹಾಳಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರು ತಿಂಗಳುಗಳ ಕಾಲ ಶಾಲಾ ಶಿಕ್ಷಕರನ್ನು, ಸರ್ಕಾರಿ ನೌಕರರನ್ನು ಎಸ್.ಐ.ಆರ್. ಕೆಲಸಕ್ಕೆ ಬಳಸಿಕೊಳ್ಳುತ್ತಿರುವ ಕಾರಣ, ಸರ್ಕಾರಿ ಶಾಲೆಗಳಲ್ಲಿ ಸಮರ್ಪಕವಾಗಿ ಪಾಠ ಪ್ರವಚನ ನಡೆದಿಲ್ಲ, ಸರ್ಕಾರಿ ಕಚೇರಿಗಳಲ್ಲಿ ಕಡತಗಳು ವಿಲೇವಾರಿ ಆಗುತ್ತಿಲ್ಲ ಎಂದರು.

ಮಿಗಿಲಾಗಿ ಲಕ್ಷಾಂತರ ಮತದಾರರ ಹೆಸರನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ. ಹಿಂದೆಲ್ಲಾ ಮತದಾರರ ಪಟ್ಟಿ ಪರಿಷ್ಕರಣೆ ಮಾಡಿದ ರೀತಿಯಲ್ಲಿ ಮೃತಪಟ್ಟವರ, ವಿಳಾಸ ಬದಲಾದವರ, ಎರಡು ಕಡೆ ಹೆಸರಿದ್ದ ಮತದಾರರ ಪರಿಷ್ಕರಣೆ ಮಾಡಿದ್ದರೆ ಸಾಕಿತ್ತು. ಆದರೆ ತಾರ್ಕಿಕ ಅಸಂಗತತೆ ಹೆಸರಿನಲ್ಲಿ ಒಂದು ಕುಟುಂಬದಲ್ಲಿ 6 ಮಕ್ಕಳಿದ್ದರೆ ಅವರ



ಹೆಸರು 2002ರ ಮತದಾರರ ಪಟ್ಟಿಯಲ್ಲಿ ಇಲ್ಲ ಎಂದು ಅನಗತ್ಯವಾಗಿ ತೊಂದರೆ ನೀಡಲಾಗುತ್ತಿದೆ. ಎಂದರು.

ಎಸ್.ಐ.ಆರ್. ಪ್ರಕ್ರಿಯೆಯಿಂದ ಅರ್ಹ ಮತದಾರರಿಗೂ ಘೋರ ಅನ್ಯಾಯವಾಗುತ್ತಿದೆ. ಇದರ ವಿರುದ್ಧ ನಮ್ಮ ಪಕ್ಷದ ನಾಯಕರು ಹೋರಾಟ ಮಾಡುತ್ತಿದ್ದಾರೆ. ಸರ್ವೋಚ್ಚ ನ್ಯಾಯಾಲಯದಲ್ಲೂ ವಿಚಾರಣೆ ನಡೆಯುತ್ತಿದೆ ಎಂದರು.

ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬ ಕುರಿತಂತೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಎಸ್.ಐ.ಆರ್.ನಿಂದಾಗಿ ಅಂತಿಮ ಮತದಾರರ ಪಟ್ಟಿ ಲಭ್ಯವಾಗದ ಕಾರಣ ಸ್ಥಳೀಯ ಸಂಸ್ಥೆಗಳ ಚುನಾವಣೆಗಳೂ ವಿಳಂಬವಾಗುತ್ತಿವೆ ಎಂದು ಅಭಿಪ್ರಾಯಪಟ್ಟರು.

ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬರಿಗೂ ನಮ್ಮ ಮತ ನಮ್ಮ ಹಕ್ಕು ಇರುತ್ತದೆ. ಆದರೆ ಮತದಾರರು ತಮ್ಮ ಹಕ್ಕು ಕೇಳುತ್ತಿದ್ದಾರೆ. ಅವರನ್ನು ಕೈಬಿಟ್ಟು ಚುನಾವಣೆ ನಡೆಸಲು ಸಾಧ್ಯವೇ ಎಂದು ಈಶ್ವರ ಖಂಡ್ರೆ ಪ್ರಶ್ನಿಸಿದರು.

ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧೀ ಅವರು ಸತ್ಯಕ್ಕಾಗಿ ಹೋರಾಡುತ್ತಿದ್ದಾರೆ. ಅವರು ತಮ್ಮ ಫೋನ್ ಕದ್ದಾಲಿಕೆ ಆಗುತ್ತಿದೆ ಎಂದು ಆರೋಪಿಸಿದ್ದಾರೆ. ಅದರಲ್ಲಿ ಸತ್ಯ ಇಲ್ಲದೆ ಅವರು ಆರೋಪ ಮಾಡಲ್ಲ. ಹಿಂದೆ ಫೆಗಾಸಿಸ್ ಸ್ಪೈವೇರ್ ವಿಚಾರದಲ್ಲೂ ಅವರು ಧ್ವನಿ ಎತ್ತಿದ್ದರು. ಆದರೆ ಕೇಂದ್ರ ಸರ್ಕಾರ ದಮನಕಾರಿ ಪ್ರವೃತ್ತಿ ಅನುಸರಿಸಿತು ಎಂದರು.

ರಾಮಲೀಲಾ ಮೈದಾನದಲ್ಲಿ ಸಭೆ ಪ್ರತಿಭಟನೆ: ಹೊಸ ಮಾರ್ಗಸೂಚಿ

ನವದೆಹಲಿ, ನ.14: ರಾಷ್ಟ್ರ ರಾಜಧಾನಿಯ ರಾಮಲೀಲಾ ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಭೆ, ಪ್ರತಿಭಟನೆ ಹಾಗೂ ಇತರ ಕಾರ್ಯಕ್ರಮಗಳನ್ನು ನಿಯಂತ್ರಿಸಲು ದೆಹಲಿ ಪೊಲೀಸರು ಹೊಸ ಮಾರ್ಗಸೂಚಿ ರೂಪಿಸಿದ್ದಾರೆ. ಇದರ ಪ್ರಕಾರ, ಕಾರ್ಯಕ್ರಮಗಳಲ್ಲಿ ಗರಿಷ್ಠ 50 ಸಾವಿರ ಜನರು ಭಾಗವಹಿಸಲು ಅವಕಾಶ ನೀಡುವ ಪ್ರಸ್ತಾವನೆ ಇದ್ದು, ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಮಾತ್ರ ಕಾರ್ಯಕ್ರಮ ನಡೆಸಲು ಸಮಯ ನಿಗದಿಪಡಿಸಲಾಗಿದೆ.

ಹೊಸ ಮಾರ್ಗಸೂಚಿಯ ಕರಡು ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು (ಎಸ್‌ಒಪಿ) ಅನುಮೋದನೆಗಾಗಿ ದೆಹಲಿ ಪೊಲೀಸ್ ಪ್ರಧಾನ ಕಚೇರಿಗೆ ಕಳುಹಿಸಲಾಗಿದೆ. ಸದ್ಯ ಪ್ರಸ್ತಾವನೆ ಆರಂಭಿಕ ಹಂತದಲ್ಲಿದ್ದು, ನಿಯಮಗಳು ಅಂತಿಮಗೊಂಡಿಲ್ಲ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ಪ್ರಸ್ತಾವನೆಯಂತೆ, ಕಾರ್ಯಕ್ರಮ ಆಯೋಜಕರು ಕನಿಷ್ಠ 10 ದಿನ ಮುಂಚಿತವಾಗಿ ಪೊಲೀಸ್ ಅನುಮತಿಗಾಗಿ ಅರ್ಜಿ ಸಲ್ಲಿಸಬೇಕು. ಅದಕ್ಕೂ ಮೊದಲು ದೆಹಲಿ ಮಹಾನಗರ ಪಾಲಿಕೆಯಿಂದ ಮೈದಾನದ ಲಭ್ಯತೆ ಕುರಿತು ದೃಢೀಕರಣ ಪಡೆಯುವುದು ಕಡ್ಡಾಯವಾಗಲಿದೆ.

ಕಾರ್ಯಕ್ರಮದ ವೇಳೆ ಸಂಚಾರ ನಿರ್ವಹಣೆ, ವಾಹನ ನಿಲುಗಡೆ, ಜನರನ್ನು ಇಳಿಸುವ ಸ್ಥಳಗಳ ವ್ಯವಸ್ಥೆ ಹಾಗೂ ತುರ್ತು ವಾಹನಗಳ ಸಂಚಾರಕ್ಕೆ ಅಡ್ಡಿಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಆಯೋಜಕರದ್ದಾಗಿರಲಿದೆ. ಬಂದೂಕು, ಕತ್ತಿ, ಈಟಿ ಸೇರಿದಂತೆ ಅಪಾಯಕಾರಿ ವಸ್ತುಗಳನ್ನು ಮೈದಾನಕ್ಕೆ ತರುವುದನ್ನು ನಿರ್ಬಂಧಿಸುವ ಪ್ರಸ್ತಾವನೆಯಿದೆ. ಮೈದಾನದ ಸುತ್ತಮುತ್ತ ಡ್ರೋನ್ ಹಾರಾಟ ನಡೆಸಲು ಪೂರ್ವಾನುಮತಿ ಪಡೆಯಬೇಕಾಗುತ್ತದೆ.

ಇದಲ್ಲದೆ, ಕಾರ್ಯಕ್ರಮಕ್ಕೆ ಆಗಮಿಸುವವರಿಗೆ ಕುಡಿಯುವ ನೀರು, ವೈದ್ಯಕೀಯ ನೆರವು, ಶೌಚಾಲಯ ಹಾಗೂ ತ್ಯಾಜ್ಯ ವಿಲೇವಾರಿ ವ್ಯವಸ್ಥೆ ಕಲ್ಪಿಸುವುದನ್ನೂ ಆಯೋಜಕರು ಖಚಿತಪಡಿಸಿಕೊಳ್ಳಬೇಕು.

ಮೊದಲನೇ ಪುಟದಿಂದ

ಮೇಕೆದಾಟು ಯೋಜನೆ: ರಾಜಕಾರಣ ಬದಿಗಿಟ್ಟು ವಾಸ್ತವತೆ ಅರಿಯಿರಿ

ಮೇಕೆದಾಟು ವಿಚಾರದಲ್ಲಿ ಕರ್ನಾಟಕ ಕಾಂಗ್ರೆಸ್–ತಮಿಳುನಾಡು ಕಾಂಗ್ರೆಸ್ ಫೈಟ್

ನವದೆಹಲಿ, ನ.14: ಮೇಕೆದಾಟು ಅಣೆಕಟ್ಟು ಯೋಜನೆ ವಿಚಾರವಾಗಿ ಕರ್ನಾಟಕ ಕಾಂಗ್ರೆಸ್ ಮತ್ತು ತಮಿಳುನಾಡು ಕಾಂಗ್ರೆಸ್ ನಾಯಕರ ನಡುವೆ ನೇರ ಸಂಘರ್ಷ ಆರಂಭವಾಗಿದೆ. ಎರಡು ರಾಜ್ಯಗಳ ಕಾಂಗ್ರೆಸ್ ನಾಯಕರ ಪರಸ್ಪರ ವಿರುದ್ಧದ ನಿಲುವು ಪಕ್ಷದೊಳಗಿನ ಭಿನ್ನಾಭಿಪ್ರಾಯವನ್ನು ಬಹಿರಂಗಪಡಿಸಿದೆ. ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಅಗತ್ಯ ಅನುಮತಿಗಳನ್ನು ನೀಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರಲ್ಲಿ ಶುಕ್ರವಾರ ಮೈಸೂರಿನಲ್ಲಿ ಮನವಿ ಮಾಡಿದ್ದರು. ಯೋಜನೆಗೆ ಅಡ್ಡಿಯಾಗಿರುವ ಅನುಮತಿಗಳನ್ನು ಶೀಘ್ರ ನೀಡುವಂತೆ ಒತ್ತಾಯಿಸಿದ್ದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ತಮಿಳುನಾಡು ಕಾಂಗ್ರೆಸ್ ಅಧ್ಯಕ್ಷ ಮಾಣಿಕ್ಕಂ ಠಾಗೋರ್, ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಶಿವಕುಮಾರ್ ಅವರ ಹೇಳಿಕೆ ಖಂಡನೀಯ ಎಂದು ಟೀಕಿಸಿರುವ ಅವರು, ಕಾವೇರಿ ನ್ಯಾಯಮಂಡಳಿ ಹಾಗೂ ಸುಪ್ರೀಂ ಕೋರ್ಟ್ ಆದೇಶಗಳ ಹಿನ್ನೆಲೆಯಲ್ಲಿ ಯೋಜನೆಗೆ ವಿರೋಧವಿದೆ. ತಮಿಳುನಾಡಿನ ರೈತರ ಹಿತಾಸಕ್ತಿಗೆ ಧಕ್ಕೆಯಾಗುವ ಯೋಜನೆಯನ್ನು ಒಪ್ಪಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಇತ್ತ ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಹಾಗೂ ಡಿಎಂಕೆ ಅಧ್ಯಕ್ಷ ಎಂ.ಕೆ. ಸ್ಟಾಲಿನ್ ಕೂಡ ಮೇಕೆದಾಟು ವಿಚಾರದಲ್ಲಿ ತಮ್ಮ ರಾಜ್ಯ ಸರ್ಕಾರ ಸಕ್ರಿಯವಾಗಿ ಪ್ರತಿಕ್ರಿಯಿಸಬೇಕು ಎಂದು ಒತ್ತಾಯಿಸಿದ್ದಾರೆ. ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರಿಗೆ ಪತ್ರ ಬರೆದು, ಕಾವೇರಿ ವಿಚಾರದಲ್ಲಿ ಎಲ್ಲ ಪಕ್ಷಗಳ ಸಭೆ ಕರೆದು ಒಗ್ಗಟ್ಟಿನ ನಿಲುವು ರೂಪಿಸುವಂತೆ ಆಗ್ರಹಿಸಿದ್ದಾರೆ.

ಕಸ್ತೂರಿ ರಂಗನ್ ವರದಿ ತಿರಸ್ಕರಿಸುವಂತೆ ಮನವಿ

ಕಸ್ತೂರಿ ರಂಗನ್ ವರದಿಯನ್ನು ತಿರಸ್ಕಾರ ಮಾಡಬೇಕು ಎಂದು ಮನವಿ ಮಾಡಿದ್ದೇವೆ. ನಿನ್ನೆ ಪ್ರಧಾನಮಂತ್ರಿಯವರ ಕಾರ್ಯಕ್ರಮದಲ್ಲಿ ಮಾತನಾಡುತ್ತಾ, ಮೆಟ್ರೋ ಯೋಜನೆ ವಿಚಾರದಲ್ಲಿ ಸಮಪಾಲು ನೀಡಲು ಮನವಿ ಮಾಡಿದ್ದೇನೆ. ಒಟ್ಟು ಮೆಟ್ರೋ ಯೋಜನೆ 500 ಕಿ.ಮೀ.ಗಳಷ್ಟು ಅಭಿವೃದ್ಧಿಯಾಗಬೇಕು. ಅದಕ್ಕಾಗಿ ಬಾಕಿ ಇರುವ ಯೋಜನೆಗಳಿಗೂ ಅನುಮತಿ ನೀಡುವಂತೆ ಮನವಿ ಮಾಡಿಕೊಂಡಿದ್ದೇನೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಸಹಕಾರ ಕ್ಷೇತ್ರವೇ ರೈತರ ಆರ್ಥಿಕ ಸ್ವಾತಂತ್ರ್ಯದ ಹೆಬ್ಬಾಗಿಲು: ಸಿಎಂ ಡಿ.ಕೆ. ಶಿವಕುಮಾರ್

ರೈತರ ಬದುಕನ್ನು ಉಳಿಸಿ ಬೆಳೆಸುವಲ್ಲಿ ಸಹಕಾರ ಕ್ಷೇತ್ರದ ಪಾತ್ರ ದೊಡ್ಡದು

ರೈತರ ಆರ್ಥಿಕ ಶಕ್ತಿಗೆ ಪಿಎಲ್ ಡಿ ಬ್ಯಾಂಕ್ ಸೇರಿದಂತೆ ಹಲವಾರು ಸಂಘಗಳು ಪ್ರಮುಖ ಆಧಾರವಾಗಿವೆ. ಡಿಸಿಸಿ ಬ್ಯಾಂಕ್ ರೈತರ ಕೃಷಿ ಚಟುವಟಿಕೆಗಳಿಗೆ ಬಡ್ಡಿರಹಿತ ಸಾಲ ಒದಗಿಸುತ್ತಿವೆ. ಬೀಜ, ಗೊಬ್ಬರ ಹಾಗೂ ಕೃಷಿ ವೆಚ್ಚಗಳಿಗೆ ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ರೈತರಿಗೆ ಸುಲಭವಾಗಿ ಸಾಲ ಸಿಗದ ಸಂದರ್ಭದಲ್ಲಿ ಸಹಕಾರ ಕ್ಷೇತ್ರವೇ ರೈತರ ನೆರವಿಗೆ ನಿಂತಿದೆ. ದೇಶದ ರೈತರ ಬದುಕನ್ನು ಉಳಿಸಿ ಬೆಳೆಸುವಲ್ಲಿ ಸಹಕಾರ ಕ್ಷೇತ್ರದ ಪಾತ್ರ ದೊಡ್ಡದು" **ಎಂದು ಹೇಳಿದರು.**

17 ಲಕ್ಷ ರೈತರಿಗೆ ಬಡ್ಡಿರಹಿತ ಸಾಲ

ರಾಜ್ಯ ಸರ್ಕಾರ ಬೆಳೆ ಸಾಲ ಮತ್ತು ಬಡ್ಡಿ ಸಹಾಯಧನ ಯೋಜನೆಯಡಿ ರೈತರಿಗೆ ಬಡ್ಡಿರಹಿತ ಸಾಲ ನೀಡುತ್ತಿದೆ. ಇದರಿಂದ ಸುಮಾರು 17 ಲಕ್ಷ ರೈತರಿಗೆ ಅನುಕೂಲವಾಗುತ್ತಿದ್ದು, ಈಗಾಗಲೇ 1,135 ಕೋಟಿ ರೂಪಾಯಿಗಳ ಅನುದಾನವನ್ನು ವಿವಿಧ ರೂಪಗಳಲ್ಲಿ ಸರ್ಕಾರ ಒದಗಿಸಿದೆ ಎಂದು ತಿಳಿಸಿದರು. ದೇವರ ಮೇಲಿನ ಭಕ್ತಿಗೆ ಎಷ್ಟು ಮಹತ್ವವಿದೆಯೋ, ಸಹಕಾರ ಕ್ಷೇತ್ರದಲ್ಲಿ ಒಗ್ಗಟ್ಟಿಗೂ ಅಷ್ಟೇ ಮಹತ್ವವಿದೆ. ಒಬ್ಬರಿಗೊಬ್ಬರು ನೆರವಾಗುವ ಮನೋಭಾವವನ್ನು ಸಹಕಾರ ಕ್ಷೇತ್ರ ಬೆಳೆಸಿದೆ. ನೂರಾರು ರಾಜಕಾರಣಿಗಳು, ಸಂಸದರು, ಶಾಸಕರು ಹಾಗೂ ಜಿಲ್ಲಾ ಪಂಚಾಯಿತಿ ಪ್ರತಿನಿಧಿಗಳು ಸಹಕಾರ ಕ್ಷೇತ್ರದಿಂದಲೇ ಬೆಳೆದು ಬಂದಿದ್ದಾರೆ" ಎಂದು ಹೇಳಿದರು.

ಸಹಕಾರಿ ಸಂಸ್ಥೆಗಳು ಲಕ್ಷಾಂತರ ಜನರಿಗೆ ನಿವೇಶನ ಒದಗಿಸಿವೆ: "ಬೆಂಗಳೂರು ನಗರದಲ್ಲಿ ವಸತಿ ಸಹಕಾರಿ ಸಂಘಗಳು ಲಕ್ಷಾಂತರ ಜನರಿಗೆ ನಿವೇಶನ ಒದಗಿಸುವ ಮೂಲಕ ಮಹತ್ವದ ಸೇವೆ ಸಲ್ಲಿಸಿವೆ. ಸುಮಾರು 30ರಿಂದ 40 ಲಕ್ಷ ಜನರಿಗೆ ಸಹಕಾರಿ ಸಂಘಗಳ ಮೂಲಕ ನಿವೇಶನ ಸೌಲಭ್ಯ ದೊರೆತಿರಬಹುದು. ಬಿಡಿಎ ಕೂಡ ಬಡವರಿಗೆ ನಿವೇಶನ ಒದಗಿಸುವ ಕಾರ್ಯ ಮಾಡುತ್ತಿದೆ. ಜನರ ಬದುಕಿಗೆ ಶಕ್ತಿ ತುಂಬುವ ಸಹಕಾರ ಚಳವಳಿಯನ್ನು ಉಳಿಸಿ ಬೆಳೆಸಬೇಕು" ಎಂದು ಕರೆ ನೀಡಿದರು.

ಸೋನಿಯಾ ಆತ್ಮಕತೆಯ ಮತ್ತೊಂದು ಆಯಾಮ ತೆರೆದಿಟ್ಟ ಶಶಿ ತರೂರ್

ನವದೆಹಲಿ, ನ.14: ದಶಕಗಳ ಕಾಲ ಭಾರತೀಯ ರಾಜಕೀಯದ ಪ್ರಮುಖ ಮುಖವಾಗಿ ಗುರುತಿಸಿಕೊಂಡಿರುವ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರ ಬದುಕಿನ ಮತ್ತೊಂದು ಮಗ್ಗುಲನ್ನು ಪರಿಚಯಿಸುವ ಕೃತಿ ಇದೀಗ ಗಮನ ಸೆಳೆಯುತ್ತಿದೆ. ರಾಜಕೀಯ ನಿರ್ಧಾರಗಳು, ಅಧಿಕಾರದ ಹೋರಾಟ ಮತ್ತು



ಸಾರ್ವಜನಿಕ ಜೀವನದ ಆಚೆಗೆ ಒಬ್ಬ ಮಹಿಳೆಯ ವೈಯಕ್ತಿಕ ಬದುಕು ಹೇಗಿತ್ತು ಎಂಬುದನ್ನು ಅವರ ಆತ್ಮಕಥನ 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ತೆರೆದಿಡುತ್ತದೆ. ಕಾಂಗ್ರೆಸ್ ಸಂಸದ ಹಾಗೂ ಲೇಖಕ ಶಶಿ ತರೂರ್ ಈ ಪುಸ್ತಕವನ್ನು ರಾಜಕೀಯ ಜೀವನಚರಿತ್ರೆಯಾಗಿ ನೋಡದೆ, ಪ್ರೀತಿ, ಕುಟುಂಬ, ನೋವು ಮತ್ತು ಭಾರತವನ್ನು ತಮ್ಮ ನೆಲೆಯಾಗಿ ಸ್ವೀಕರಿಸಿದ ಮಹಿಳೆಯೊಬ್ಬರ ಆತ್ಮಕಥನವಾಗಿ ವಿಶ್ಲೇಷಿಸಿದ್ದಾರೆ.

ಪುಸ್ತಕದ ಮುನ್ನುಡಿಯಲ್ಲೇ ಸೋನಿಯಾ ಗಾಂಧಿ ತಮ್ಮ ಬರಹ ರಾಜಕೀಯದ ಬಗ್ಗೆ ಅಲ್ಲ, ರಾಜಕೀಯವು ಕೇವಲ ಹಿನ್ನೆಲೆಯಲ್ಲಿರುವ ವೈಯಕ್ತಿಕ ನೆನಪುಗಳ ಕಥೆ ಎಂದು ಸ್ಪಷ್ಟಪಡಿಸಿದ್ದಾರೆ. ಇಟಲಿಯ ಪೀಡ್ಮಾಂಟ್ ಪ್ರದೇಶದ ಸಾಮಾನ್ಯ ಪಟ್ಟಣದಲ್ಲಿ ಬೆಳೆದ ಯುವತಿ ಹೇಗೆ ಭಾರತಕ್ಕೆ ಬಂದು ಇಲ್ಲಿನ ಸಂಸ್ಕೃತಿ, ಕುಟುಂಬ ಮತ್ತು ಬದುಕಿನೊಂದಿಗೆ ಬೆರೆತರು ಎಂಬುದೇ ಈ ಪುಸ್ತಕದ ಮುಖ್ಯ ಕಥನ.

ಸೋನಿಯಾ ಗಾಂಧಿ ತಮ್ಮ ಬಾಲ್ಯದ ದಿನಗಳು ಮತ್ತು ತಂದೆ ಸ್ಟೀಫಾನೊ ಮೈನೊ ಅವರೊಂದಿಗಿನ ಸಂಕೀರ್ಣ ಸಂಬಂಧವನ್ನು ಮುಕ್ತವಾಗಿ ವಿವರಿಸಿದ್ದಾರೆ. ಭಾರತೀಯ ಕುಟುಂಬವು ವಿದೇಶಿ ಸೊಸೆಯನ್ನು ಒಪ್ಪಿಕೊಳ್ಳಲು ವಿರೋಧಿಸಿರಬಹುದು ಎಂಬ ಸಾಮಾನ್ಯ ಕಲ್ಪನೆಗೆ ವಿರುದ್ಧವಾಗಿ, ಅವರ ಮದುವೆಗೆ ವಿರೋಧ ವ್ಯಕ್ತಪಡಿಸಿದ್ದು ಸ್ವತಃ ಅವರ ತಂದೆಯೇ. ಮದುವೆ ಸಮಾರಂಭಕ್ಕೂ ಅವರು ಹಾಜರಾಗಿರಲಿಲ್ಲ. ಬಳಿಕ ಕಳುಹಿಸಿದ ಪತ್ರದಲ್ಲಿ ತಮ್ಮ ಮನೆಯ ಬಾಗಿಲು ಯಾವಾಗಲೂ ತೆರೆದಿರುತ್ತದೆ ಎಂದು ತಿಳಿಸಿದ್ದರು. ಈ ಪತ್ರ ಸೋನಿಯಾ ಅವರನ್ನು ಭಾವುಕರನ್ನಾಗಿಸಿತ್ತು. ಪುಸ್ತಕದಲ್ಲಿನ ಅತ್ಯಂತ ನೋವಿನ ಸಂಗತಿಗಳಲ್ಲಿ 1969ರ ಜನವರಿಯಲ್ಲಿ ಸಂಭವಿಸಿದ ಮೊದಲ ಮಗುವಿನ ಸಾವಿನ ಘಟನೆ ಪ್ರಮುಖವಾಗಿದೆ. ಅವಧಿಗೂ ಎರಡು ತಿಂಗಳು ಮೊದಲೇ ಜನಿಸಿದ್ದ ಮಗುವನ್ನು ಇನ್‌ಕ್ಯುಬೇಟರ್‌ನಲ್ಲಿ ನೋಡಿದಾಗ ಸೋನಿಯಾ ಮತ್ತು ರಾಜೀವ್ ಅಪಾರ ಪ್ರೀತಿಯಿಂದ ಮಗುವನ್ನು ಸ್ವೀಕರಿಸಿದ್ದರು. ಆದರೆ ಮರುದಿನವೇ ಮಗು ಮೃತಪಟ್ಟಿದ್ದು ದಂಪತಿಗೆ ತೀವ್ರ ಆಘಾತ ನೀಡಿತ್ತು.

ಮಗುವಿನ ಅಂತ್ಯಸಂಸ್ಕಾರದ ವಿಚಾರದಲ್ಲೂ ಕುಟುಂಬದಲ್ಲಿ ಚರ್ಚೆ ನಡೆದಿತ್ತು. ಸಾಂಪ್ರದಾಯಿಕ ಹಿಂದೂ ಪದ್ಧತಿಯಂತೆ ಮಗುವಿನ ದೇಹವನ್ನು ನದಿಯಲ್ಲಿ ವಿಸರ್ಜಿಸುವುದಕ್ಕೆ ಸೋನಿಯಾ ಒಪ್ಪಿರಲಿಲ್ಲ. ಕೊನೆಗೆ ರಾಜೀವ್ ಮತ್ತು ಸಂಜಯ್ ಗಾಂಧಿ ಅವರು ಮೆಹ್ರೌಲಿಯಲ್ಲಿರುವ ಫಿರೋಜ್ ಗಾಂಧಿ ಅವರ ತೋಟದ ಮನೆಯ ಬೋಗನ್‌ವಿಲ್ಲಾ ಗಿಡದ ಕೆಳಗೆ ಮಗುವನ್ನು ಸಮಾಧಿ ಮಾಡಿದ್ದರು. ಹಲವು ವರ್ಷಗಳ ಕಾಲ ಆ ಸ್ಥಳಕ್ಕೆ ತೆರಳಿ ಹೂವುಗಳನ್ನು ಇಟ್ಟುಬರುತ್ತಿದ್ದ ನೆನಪನ್ನೂ ಅವರು ಹಂಚಿಕೊಂಡಿದ್ದಾರೆ.


1975ರ ತುರ್ತು ಪರಿಸ್ಥಿತಿ, ಆಪರೇಷನ್ ಬ್ಲೂಸ್ಟಾರ್, ಇಂದಿರಾಗಾಂಧಿ ಹತ್ಯೆ ಮತ್ತು 1991ರಲ್ಲಿ ರಾಜೀವ್‌ಗಾಂಧಿ ಅವರ ಹತ್ಯೆಯಂತಹ ದೇಶದ ಇತಿಹಾಸದ ಪ್ರಮುಖ ಘಟನೆಗಳನ್ನೂ ಸೋನಿಯಾ ನೆನಪಿಸಿಕೊಂಡಿದ್ದಾರೆ. ತುರ್ತು ಪರಿಸ್ಥಿತಿಯನ್ನು ತಪ್ಪು ನಿರ್ಧಾರವೆಂದು ಒಪ್ಪಿಕೊಂಡಿರುವ ಅವರು, ಇಂದಿರಾಗಾಂಧಿ ಮೂಲತಃ ಪ್ರಜಾಪ್ರಭುತ್ವದಲ್ಲಿ ನಂಬಿಕೆಯಿಟ್ಟಿದ್ದ ನಾಯಕಿ ಎಂಬ ಅಭಿಪ್ರಾಯವನ್ನೂ ವ್ಯಕ್ತಪಡಿಸಿದ್ದಾರೆ.

ರಾಜೀವ್‌ಗಾಂಧಿ ಹತ್ಯೆಯ ಬಳಿಕ ರಾಜಕೀಯದಿಂದ ದೂರ ಉಳಿಯಲು ಬಯಸಿದ್ದ ಸೋನಿಯಾ, ಕೊನೆಗೆ 1998ರಲ್ಲಿ ರಾಜಕೀಯ ಪ್ರವೇಶಿಸಿದರು. 2004ರಲ್ಲಿ ಪ್ರಧಾನಮಂತ್ರಿ ಹುದ್ದೆಯನ್ನು ನಿರಾಕರಿಸಿ ಮನಮೋಹನ್ ಸಿಂಗ್ ಅವರನ್ನು ಆಯ್ಕೆ ಮಾಡಿದ ನಿರ್ಧಾರದ ಹಿನ್ನೆಲೆಯನ್ನೂ ವಿವರಿಸಿದ್ದಾರೆ.

2010ರಲ್ಲಿ ಸಮ್ಮಿಶ್ರ ಸರ್ಕಾರದ ಸಂಕಷ್ಟದ ಸಂದರ್ಭದಲ್ಲಿ ಪ್ರಣಬ್ ಮುಖರ್ಜಿ ಅವರು ಮನಮೋಹನ್ ಸಿಂಗ್ ಅವರನ್ನು ಬದಲಿಸುವ ಸಲಹೆ ನೀಡಿದ್ದರು ಎಂಬ ವಿಚಾರವನ್ನೂ ಉಲ್ಲೇಖಿಸಿದ್ದಾರೆ.

ಮಾಜಿ ಮಾಧ್ಯಮ ಸಲಹೆಗಾರ ಸಂಜಯ್ ಬಾರು ಅವರ 'ದ ಆಕ್ಸಿಡೆಂಟಲ್ ಪ್ರೈಮ್ ಮಿನಿಸ್ಟರ್' ಪುಸ್ತಕದಲ್ಲಿನ ಹಲವು ವಿಚಾರಗಳನ್ನು ಸೋನಿಯಾ ತಳ್ಳಿಹಾಕಿದ್ದಾರೆ. ಆದರೆ ಅನೇಕ ರಾಜಕೀಯ ವಿವಾದಗಳ ಬಗ್ಗೆ ಅವರು ಮೌನ ವಹಿಸಿರುವುದನ್ನೂ ಶಶಿ ತರೂರ್ ಗಮನಿಸಿದ್ದಾರೆ.

ವಿದೇಶಕ್ಕೆ ತೆರಳಿದ್ದೇಕೆ: ಊಹಾಪೋಹಗಳಿಗೆ ತೆರೆ



ಪುಸ್ತಕದಲ್ಲಿ ಸೋನಿಯಾ ಗಾಂಧಿ ತಮ್ಮ ಆರೋಗ್ಯ ಸಮಸ್ಯೆಗಳ ಬಗ್ಗೆಯೂ ವಿವರಿಸಿದ್ದಾರೆ. ಯುಪಿಎ–2 ಸರ್ಕಾರದ ಅವಧಿಯಲ್ಲಿ ಅವರು ಚಿಕಿತ್ಸೆಗೆ ವಿದೇಶಕ್ಕೆ ತೆರಳಿದ್ದ ವಿಚಾರ ಹಲವು ಊಹಾಪೋಹಗಳಿಗೆ ಕಾರಣವಾಗಿತ್ತು. ಆದರೆ ಪತ್ರಿಕೆಗಳಲ್ಲಿ ಪ್ರಕಟವಾಗಿದ್ದಂತೆ ನ್ಯೂಯಾರ್ಕ್‌ಗೆ ಹೋಗಿರಲಿಲ್ಲ. 2010ರಲ್ಲಿ ಸ್ತನದಲ್ಲಿದ್ದ ಗಡ್ಡೆಗಳ ಚಿಕಿತ್ಸೆಗಾಗಿ ಮಿಲಾನ್‌ಗೆ ಮತ್ತು 2011ರಲ್ಲಿ ಮೇದೋಜ್ಜೀರಕ ಗ್ರಂಥಿಗೆ ಸಂಬಂಧಿಸಿದ ಶಸ್ತ್ರಚಿಕಿತ್ಸೆಗಾಗಿ ರೋಟರ್‌ಡ್ಯಾಂಗೆ ತೆರಳಿದ್ದಾಗಿ ಪುಸ್ತಕದಲ್ಲಿ ತಿಳಿಸಿದ್ದಾರೆ. ಭಾರತದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದರೆ ತಮ್ಮ ಆರೋಗ್ಯದ ವಿವರಗಳು ಬಹಿರಂಗವಾಗುವ ಸಾಧ್ಯತೆ ಇತ್ತು. ಅಲ್ಲದೆ, ತಮ್ಮ ಸಹೋದರಿಯರ ಸಾನ್ನಿಧ್ಯದಲ್ಲಿರಬೇಕೆಂಬ ಕಾರಣವೂ ಈ ನಿರ್ಧಾರಕ್ಕೆ ಕಾರಣವಾಗಿತ್ತು ಎಂದು ವಿವರಿಸಿದ್ದಾರೆ.

ತೆಲಂಗಾಣ ಗಿಗ್ ಕಾರ್ಮಿಕರಿಗೆ ರಾಹುಲ್ ಕೊಡುಗೆ

ಪ್ರತಿ ವ್ಯವಹಾರದ ಶೇ.1ರಷ್ಟು ಹಣ ಮೀಸಲು, 15 ಲಕ್ಷ ರೂ. ವಿಮಾ ಸೌಲಭ್ಯ

ಹೈದರಾಬಾದ್, ನ.14: ತೆಲಂಗಾಣದ ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಹತ್ವದ ಘೋಷಣೆಗಳನ್ನು ಮಾಡಿದ್ದಾರೆ. ಆನ್‌ಲೈನ್ ವೇದಿಕೆಗಳ ಮೂಲಕ ಕೆಲಸ ಮಾಡುವ ಕಾರ್ಮಿಕರ ಕಲ್ಯಾಣಕ್ಕಾಗಿ ವಿಶೇಷ ಯೋಜನೆ ರೂಪಿಸಲಾಗಿದ್ದು, ಪ್ರತಿ ವ್ಯವಹಾರದ ಮೌಲ್ಯದ ಶೇ.1ರಷ್ಟು ಹಣವನ್ನು ಕಾರ್ಮಿಕರ ಕಲ್ಯಾಣಕ್ಕೆ ಮೀಸಲಿಡುವ ವ್ಯವಸ್ಥೆ ಘೋಷಿಸಲಾಗಿದೆ.

ಆಹಾರ ವಿತರಣೆ, ಕ್ಯಾಬ್ ಮತ್ತು ಆಟೋರಿಕ್ಷಾ ಚಾಲನೆ ಸೇರಿದಂತೆ ವಿವಿಧ ಡಿಜಿಟಲ್ ವೇದಿಕೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಆರ್ಥಿಕ ಭದ್ರತೆ ಒದಗಿಸುವುದು ಈ ಯೋಜನೆಯ ಉದ್ದೇಶವಾಗಿದೆ. ಸ್ವಿಗ್ಗಿ, ಜೊಮ್ಯಾಟೊ, ಊಬರ್ ಸೇರಿದಂತೆ ವಿವಿಧ ಸೇವಾ ವೇದಿಕೆಗಳೊಂದಿಗೆ ಕೆಲಸ ಮಾಡುವ ಕಾರ್ಮಿಕರು ಇದರ ವ್ಯಾಪ್ತಿಗೆ ಬರಲಿದ್ದಾರೆ. ಈ ಯೋಜನೆಯಡಿ ಸುಮಾರು ಆರು ಲಕ್ಷ ಗಿಗ್ ಕಾರ್ಮಿಕರಿಗೆ ಅನುಕೂಲವಾಗುವ ನಿರೀಕ್ಷೆಯಿದೆ. ಕಾರ್ಮಿಕರ ಕಲ್ಯಾಣಕ್ಕಾಗಿ ಸಂಗ್ರಹವಾಗುವ ಹಣವನ್ನು ಪ್ರತ್ಯೇಕ ಕಲ್ಯಾಣ ನಿಧಿಯಲ್ಲಿ ಜಮೆ ಮಾಡಲಾಗುತ್ತದೆ. ಈ ನಿಧಿಯನ್ನು ಕಾರ್ಮಿಕರ ಸಾಮಾಜಿಕ ಭದ್ರತೆ, ಆರೋಗ್ಯ ಮತ್ತು ಇತರ ಕಲ್ಯಾಣ ಕಾರ್ಯಕ್ರಮಗಳಿಗೆ ಬಳಸುವ ಉದ್ದೇಶವಿದೆ.



15 ಲಕ್ಷದವರೆಗೆ ವಿಮಾ ಸೌಲಭ್ಯ

ಗಿಗ್ ಕಾರ್ಮಿಕರಿಗೆ ವಿಮಾ ರಕ್ಷಣೆಯನ್ನೂ ಒದಗಿಸುವ ಘೋಷಣೆ ಮಾಡಲಾಗಿದೆ. ಅಪಘಾತ ವಿಮೆ ಸೇರಿದಂತೆ ಒಟ್ಟು 15 ಲಕ್ಷದವರೆಗಿನ ವಿಮಾ ಸೌಲಭ್ಯಗಳನ್ನು ಕಲ್ಪಿಸುವುದು ಯೋಜನೆಯ ಪ್ರಮುಖ ಅಂಶವಾಗಿದೆ. ಈ ಮೂಲಕ ಕೆಲಸದ ಸಂದರ್ಭದಲ್ಲಿ ಅಪಘಾತ ಅಥವಾ ಅನಿರೀಕ್ಷಿತ ಸಂಕಷ್ಟ ಎದುರಾದರೆ ಕಾರ್ಮಿಕರಿಗೆ ಮತ್ತು ಅವರ ಕುಟುಂಬಗಳಿಗೆ ಆರ್ಥಿಕ ನೆರವು ದೊರೆಯಲಿದೆ.

ಆರು ಲಕ್ಷ ಕಾರ್ಮಿಕರಿಗೆ ಅನುಕೂಲ

ತೆಲಂಗಾಣದಲ್ಲಿ ಸುಮಾರು ಆರು ಲಕ್ಷ ಗಿಗ್ ಕಾರ್ಮಿಕರಿದ್ದಾರೆ ಎಂದು ರಾಜ್ಯದ ಕಾರ್ಮಿಕ ಸಚಿವ ಗಡ್ಡಂ ವಿವೇಕ್ ವೆಂಕಟಸ್ವಾಮಿ ತಿಳಿಸಿದ್ದಾರೆ. ಆಹಾರ ವಿತರಣೆ, ಕ್ಯಾಬ್ ಮತ್ತು ಆಟೋರಿಕ್ಷಾ ಚಾಲನೆ, ಆನ್‌ಲೈನ್ ಸೇವೆಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುವವರು ಈ ಯೋಜನೆಯ ವ್ಯಾಪ್ತಿಗೆ ಬರಲಿದ್ದಾರೆ.

ಕಾರ್ಮಿಕರಿಗಾಗಿ ವಿಶೇಷ ಕಲ್ಯಾಣ ಮಂಡಳಿ

ತೆಲಂಗಾಣ ಸರ್ಕಾರ 2026ರಲ್ಲಿ ಜಾರಿಗೆ ತಂದಿರುವ 'ತೆಲಂಗಾಣ ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ ನೋಂದಣಿ, ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ಕಾಯ್ದೆ'ಯ ಅನುಷ್ಠಾನಕ್ಕೆ ಈ ಯೋಜನೆ ಮಹತ್ವದ ಹೆಜ್ಜೆಯಾಗಿದೆ. ಕಾರ್ಮಿಕರ ನೋಂದಣಿ, ಕಲ್ಯಾಣ ನಿಧಿಯ ನಿರ್ವಹಣೆ ಹಾಗೂ ಅವರ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ವಿಶೇಷ ಕಲ್ಯಾಣ ಮಂಡಳಿ ರಚಿಸುವ ವ್ಯವಸ್ಥೆಯಿದೆ. ಕಾರ್ಮಿಕರ ದೂರುಗಳನ್ನು ಸ್ವೀಕರಿಸಿ ಪರಿಹರಿಸಲು ಪ್ರತ್ಯೇಕ ವ್ಯವಸ್ಥೆಯನ್ನೂ ರೂಪಿಸಲಾಗುತ್ತಿದೆ. ಸರ್ಕಾರದ ವಿಶೇಷ ಮೊಬೈಲ್ ಆಪ್ ಮೂಲಕ ಕಾರ್ಮಿಕರ ನೋಂದಣಿ, ಮಾಹಿತಿ ಸಂಗ್ರಹ ಮತ್ತು ಕಲ್ಯಾಣ ಸೌಲಭ್ಯಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗುತ್ತದೆ.

ಅಣ್ಣನ ನಿಧನದ ಬಳಿಕ ಎನ್‌ಸಿಪಿ ವಿಲೀನಕ್ಕೆ ವಿರಾಮ ಊಹಾಪೋಹಗಳಿಗೆ ತೆರೆಎಳೆದ ಸುಪ್ರಿಯಾ ಸುಳೆ

ಮುಂಬೈ, ನ.14: ಮಹಾರಾಷ್ಟ್ರದಲ್ಲಿ ಎನ್‌ಸಿಪಿ ಎರಡು ಬಣಗಳ ನಡುವಿನ ಸಂಭಾವ್ಯ ವಿಲೀನ ಊಹಾಪೋಹಗಳಿಗೆ ಪೂರ್ಣವಿರಾಮ ಇಟ್ಟಿರುವ ಶರದ್ ಪವಾರ್ ಅವರ ಪುತ್ರಿ ಮತ್ತು ಎನ್‌ಸಿಪಿ (ಎಸ್ಪಿ) ನಾಯಕಿ ಸುಪ್ರಿಯಾ ಸುಳೆ, ತಮ್ಮ ಸಹೋದರ ಅಜಿತ್ ಪವಾರ್ ನಿಧನದ ಬಳಿಕ ಈ ವಿಷಯದ ಕುರಿತು ಚರ್ಚೆಗಳು ಕೊನೆಗೊಂಡಿವೆ ಎಂದು ಹೇಳಿದ್ದಾರೆ.



ಮುಂಬೈನಲ್ಲಿ ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ನಾನು ಇದನ್ನು ಪದೇಪದೇ ಹೇಳಿದ್ದೇನೆ. ನಾನು ನನ್ನ ಕೈಗಳನ್ನು ಜೋಡಿಸಿ ಮತ್ತೊಮ್ಮೆ ಹೇಳುತ್ತಿದ್ದೇನೆ, ಬಹಳ ಸ್ಪಷ್ಟವಾಗಿ. ನನಗೆ ಈ ವಿಷಯದಿಂದ ಬೇಸರವಾಗಿದೆ. ನಾವು ವಿಷಯದ ಬಗ್ಗೆ ಪೂರ್ಣವಿರಾಮ ಹಾಕಿದ್ದೇವೆ ಎಂದು ತಿಳಿಸಿದ್ದಾರೆ. ನಮ್ಮ ಸಹೋದರ ಅಜಿತ್ ಪವಾರ್ ಜೊತೆ ವಿಲೀನದ ಬಗ್ಗೆ ಚರ್ಚೆಗಳು ನಡೆಯುತ್ತಿದ್ದವು ಎಂದಿರುವ ಅವರು, ದಿನಾಂಕವನ್ನು ಸಹ ನಿರ್ಧರಿಸಲಾಗಿತ್ತು. ಆದರೆ ಆತ ನಿಧನರಾದ ಬಳಿಕ ನಾವು ನಮ್ಮ ಕಡೆಯಿಂದ ಈ ವಿಷಯಕ್ಕೆ ಪೂರ್ಣ ವಿರಾಮ ಹಾಕಿದ್ದೇವೆ. ಈ ವಿಷಯದ ಬಗ್ಗೆ ಮತ್ತೆ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಕುಟುಂಬ ಸಂಬಂಧಗಳನ್ನು ರಾಜಕೀಯದೊಂದಿಗೆ ಬೆರೆಸಬೇಡಿ ಎಂದಿದ್ದಾರೆ.

ಇದೇ ವೇಳೆ ಸುನಿಲ್ ತತ್ಕರೆ, ಛಗನ್ ಭುಜಬಲ್ ಮತ್ತು ಪ್ರಫುಲ್ ಪಟೇಲ್ ಹೇಳಿಕೆಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅವರೆಲ್ಲರೂ ನಮ್ಮ ತಂದೆ ಶರದ್ ಪವಾರ್ ಅವರೊಂದಿಗೆ ಕೆಲಸ ಮಾಡಿದ್ದಾರೆ. ನನ್ನ ಪಾಲನೆ–ಪೋಷಣೆ ನನಗೆ ಅವರ ಬಗ್ಗೆ ನಕಾರಾತ್ಮಕ ವಿಷಯವನ್ನು ಹೇಳಲು ಅವಕಾಶ ನೀಡುವುದಿಲ್ಲ. ಅಧಿಕಾರ ಬರುತ್ತದೆ ಮತ್ತು ಹೋಗುತ್ತದೆ, ಆದರೆ ಕುಟುಂಬವು ಒಟ್ಟಿಗೆ ಇರುತ್ತದೆ ಎಂದು ಹೇಳಿದ್ದಾರೆ.

ಪಕ್ಷಾತೀತ ರಾಜಕೀಯ ಸಂಬಂಧಗಳನ್ನು ನೆನಪಿಸಿಕೊಂಡ ಸುಳೆ, ತಮ್ಮ ಪಕ್ಷವು ಕೇಂದ್ರದ ಮಾಜಿ ಸಚಿವರಾದ ಅರುಣ್ ಜೇಟ್ಲಿ ಮತ್ತು ಸುಷ್ಮಾ ಸ್ವರಾಜ್ ಅವರನ್ನು ಹಲವಾರು ಸಂದರ್ಭಗಳಲ್ಲಿ ಹೊಗಳಿದೆ. ಪಹಲ್ಗಾಮ್ ಘಟನೆಯ ಸಮಯದಲ್ಲಿ ಶರದ್ ಪವಾರ್ ಸರ್ಕಾರಕ್ಕೆ ಬೆಂಬಲ ನೀಡಿದ್ದರು. 2023ರಲ್ಲಿ ನಡೆದದ್ದು ಈಗಾಗಲೇ ಸಂಭವಿಸಿದೆ, ಆದರೆ ನಮ್ಮ ಕುಟುಂಬ ಸಂಬಂಧಗಳು ಆಗಲೂ ಇದ್ದವು ಮತ್ತು ಇಂದಿಗೂ ಅಸ್ತಿತ್ವದಲ್ಲಿವೆ ಎಂದು ತಿಳಿಸಿದ್ದಾರೆ.

ಶಿವಸೇನೆ (ಯುಬಿಟಿ) ನಾಯಕ ಸಂಜಯ್ ರಾವತ್ ಅವರ ಹೇಳಿಕೆ ಮತ್ತು ಸಾಮ್ನಾ ಪತ್ರಿಕೆ ಸಂಪಾದಕೀಯ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಸಂಜಯ್ ರಾವುತ್ ಒಬ್ಬ ಪ್ರಮುಖ ನಾಯಕ ಮತ್ತು ಹಿರಿಯ ಸಹೋದರ. ತಮ್ಮ ಮನಸ್ಸಿನಲ್ಲಿರುವುದನ್ನು ಹೇಳುವ ಹಕ್ಕು ಅವರಿಗಿದೆ. ಅವರಿಗೆ ಏನಾದರೂ ಅನಿಸಿದರೆ, ಖಂಡಿತವಾಗಿಯೂ ಅದರ ಬಗ್ಗೆ ಬರೆಯುವ ಹಕ್ಕು ಅವರಿಗಿದೆ. ಇಂತಹ ಸಂಪಾದಕೀಯಗಳನ್ನು ನಾವು ಸ್ವಾಗತಿಸುತ್ತೇವೆ ಎಂದಿದ್ದಾರೆ.

ಯುಜಿಸಿ–ಎನ್‌ಇಟಿ ಪ್ರಶ್ನೆ ಮರುಪರಿಶೀಲನೆಗೆ ಕೋರ್ಟ್ ಆದೇಶ

ನವದೆಹಲಿ, ನ.14: ಸ್ಪರ್ಧಾತ್ಮಕ ಪರೀಕ್ಷೆಗಳ ಕೀ–ಉತ್ತರಗಳ ವಿವಾದಗಳಲ್ಲಿ ನ್ಯಾಯಾಂಗದ ಸಂಯಮವು ಸಂಪೂರ್ಣವಾದುದಲ್ಲ. ಯಾವುದೇ ತರ್ಕ ಅಥವಾ ವಿಶ್ಲೇಷಣೆಯ ಅಗತ್ಯವಿಲ್ಲದೆಯೇ ಉತ್ತರವು ಸ್ಪಷ್ಟವಾಗಿ ತಪ್ಪಾಗಿದೆ ಎಂದು ಸಾಬೀತಾದರೆ ನ್ಯಾಯಾಲಯವು ಮಧ್ಯಪ್ರವೇಶಿಸಬಹುದು ಎಂದು ದೆಹಲಿ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

2026ರ ಜೂನ್ ತಿಂಗಳಲ್ಲಿ ನಡೆದ ಯುಜಿಸಿ–ನೆಟ್ ಪರೀಕ್ಷೆಯ ಕೀ ಉತ್ತರಗಳಲ್ಲಿನ ಲೋಪಗಳನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಜಸ್ಮೀತ್ ಸಿಂಗ್ ಅವರ ಏಕಸದಸ್ಯ ಪೀಠವು, ವಿವಾದಿತ 4 ಪ್ರಶ್ನೆಗಳನ್ನು ಮರುನಿರ್ಧಾರಕ್ಕಾಗಿ ಸಂಬಂಧಪಟ್ಟ ವಿಷಯ ತಜ್ಞರ ಸಮಿತಿಗೆ ಒಪ್ಪಿಸಿ ಆದೇಶಿಸಿದೆ.

ಜೂನ್ 22 ರಿಂದ 30ರವರೆಗೆ ನಡೆದಿದ್ದ ಯುಜಿಸಿ–ನೆಟ್ ಪರೀಕ್ಷೆಗೆ ಸುಮಾರು 7,27,506 ಅಭ್ಯರ್ಥಿಗಳು ಹಾಜರಾಗಿದ್ದರು. ಆಗಸ್ಟ್‌ನಲ್ಲಿ ಫಲಿತಾಂಶ ಪ್ರಕಟವಾಗಿತ್ತು. ಆದರೆ, ತಾತ್ಕಾಲಿಕ ಮತ್ತು ಅಂತಿಮ ಕೀ ಉತ್ತರಗಳಲ್ಲಿ ವ್ಯತ್ಯಾಸವಿದೆ ಎಂದು ಆರೋಪಿಸಿ ನಾಸಿರ್ ರಶೀದ್ ಸೇರಿದಂತೆ ಹಲವು ಅಭ್ಯರ್ಥಿಗಳು ಸಂವಿಧಾನದ 226ನೇ ವಿಧಿಯಡಿ ಹೈಕೋರ್ಟ್ ಮೆಟ್ಟಿಲೇರಿದ್ದರು.



ಒಟ್ಟು 10 ಪ್ರಶ್ನೆಗಳ ಕೀ ಉತ್ತರಗಳನ್ನು ಪ್ರಶ್ನಿಸಲಾಗಿತ್ತು.

ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ತಪ್ಪಾದ ಕೀ ಉತ್ತರವು ಅಭ್ಯರ್ಥಿಗಳ ಶ್ರೇಯಾಂಕ ಮತ್ತು ಅರ್ಹತೆಯ ಮೇಲೆ ನೇರ ಪರಿಣಾಮ ಬೀರುತ್ತದೆ. ಕಟ್–ಆಫ್ ಅಂಕಗಳನ್ನು ದಾಟಲು ಒಂದೇ ಒಂದು ಅಂಕವೂ ನಿರ್ಣಾಯಕವಾಗಬಹುದು. ಇಂತಹ ಲೋಪಗಳಿಂದ ಅಭ್ಯರ್ಥಿಗಳು ತೊಂದರೆ ಅನುಭವಿಸಬಾರದು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಒಟ್ಟು 10 ವಿವಾದಿತ ಪ್ರಶ್ನೆಗಳಲ್ಲಿ 6 ಪ್ರಶ್ನೆಗಳು ಶೈಕ್ಷಣಿಕ ಅಭಿಪ್ರಾಯ ಮತ್ತು ತರ್ಕವನ್ನು ಆಧರಿಸಿವೆ. ಈಗಾಗಲೇ ವಿಷಯ ತಜ್ಞರು ಅವುಗಳನ್ನು ಪರಿಶೀಲಿಸಿರುವುದರಿಂದ, ಮೇಲ್ಮನವಿ ಪ್ರಾಧಿಕಾರದಂತೆ ತಜ್ಞರ ಅಭಿಪ್ರಾಯದಲ್ಲಿ ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ ಎಂದು ಕೋರ್ಟ್ ಸ್ಪಷ್ಟಪಡಿಸಿತು.

ಶಿಕ್ಷಣಶಾಸ್ತ್ರ ವಿಭಾಗದ ಎರಡು, ಉರ್ದು ಮತ್ತು ಭೂಗೋಳ ಶಾಸ್ತ್ರದ ತಲಾ ಒಂದು ಪ್ರಶ್ನೆಗಳು ಸಾರ್ವಜನಿಕವಾಗಿ ಲಭ್ಯವಿರುವ ಪ್ರಮಾಣಿತ ಪಠ್ಯಪುಸ್ತಕಗಳ ಆಧಾರದ ಮೇಲೆ ಒಂದೇ ನಿಖರ ಉತ್ತರವನ್ನು ಹೊಂದಿವೆ. ಮೇಲ್ನೋಟಕ್ಕೆ ಇವುಗಳ ಕೀ ಉತ್ತರ ತಪ್ಪಾಗಿರುವುದು ಕಂಡುಬಂದಿದೆ.

ತಪ್ಪಾದ ಉತ್ತರಗಳನ್ನು ನ್ಯಾಯಾಲಯವೇ ಸ್ವತಃ ತಿದ್ದುವುದಿಲ್ಲ, ಆ ಕೆಲಸವನ್ನು ವಿಷಯ ತಜ್ಞರೇ ಮಾಡಬೇಕು ಎಂದು ಹೇಳಿದ ಪೀಠವು, ಈ ನಾಲ್ಕು ಪ್ರಶ್ನೆಗಳನ್ನು ತಜ್ಞರ ಸಮಿತಿಗೆ ವರ್ಗಾಯಿಸಿದೆ. ಅರ್ಜಿದಾರರ ಅಹವಾಲುಗಳನ್ನು ಆಲಿಸಿ, ಮೂರು ವಾರಗಳ ಒಳಗಾಗಿ ಸೂಕ್ತ ಕಾರಣಗಳೊಂದಿಗೆ ಆದೇಶ ಹೊರಡಿಸುವಂತೆ ಸಮಿತಿಗೆ ನಿರ್ದೇಶನ ನೀಡಿದೆ.

2026ರ ಜೂನ್‌ನಲ್ಲಿ ನಡೆದ ಯುಜಿಸಿ–ನೆಟ್ ಪರೀಕ್ಷೆಯು ಹಲವು ವಿವಾದಗಳಿಗೆ ಕಾರಣವಾಗಿತ್ತು. ಇಂಗ್ಲಿಷ್ ಪತ್ರಿಕೆಯ 150 ಪ್ರಶ್ನೆಗಳಲ್ಲಿ 67 ಪ್ರಶ್ನೆಗಳು 2024ರ ಪರೀಕ್ಷೆಯಿಂದಲೇ ಯಥಾವತ್ತಾಗಿ ಪುನರಾವರ್ತನೆಯಾಗಿದ್ದವು ಎಂಬ ಆರೋಪ ಕೇಳಿಬಂದಿತ್ತು. ಇಂಗ್ಲಿಷ್, ವಾಣಿಜ್ಯ ಮತ್ತು ಸಮಾಜಶಾಸ್ತ್ರ ಪತ್ರಿಕೆಗಳ ಕುರಿತ ದೂರುಗಳ ಹಿನ್ನೆಲೆಯಲ್ಲಿ ಎನ್‌ಟಿಎ ಸೆಪ್ಟೆಂಬರ್ 2026ರಲ್ಲಿ ಮರುಪರೀಕ್ಷೆ ನಡೆಸಿತ್ತು.

ಗೋಕುಲ್ ಡೇರಿ ಗೆಲುವು ಬಿಜೆಪಿಗೆ ಮುಳುವಾಗುವುದೇ?

ನವದೆಹಲಿ, ನ.14: ಮಹಾರಾಷ್ಟ್ರದ ಅತಿದೊಡ್ಡ ಡೇರಿಗಳಲ್ಲಿ ಒಂದಾದ ಗೋಕುಲ್ ಮೇಲೆ ನಿಯಂತ್ರಣ ಸಾಧಿಸಲು ಆಡಳಿತಾರೂಢ ಮಹಾಯುತಿ ಮೈತ್ರಿಕೂಟ ಯಶಸ್ವಿಯಾಗಿದೆ. ಆದರೆ, ಪ್ರತಿಪಕ್ಷಗಳ ಎದುರು ಚುನಾವಣೆಯಲ್ಲಿ ಸೋತ ಕೆಲವೇ ವಾರಗಳಲ್ಲಿ ಸರ್ಕಾರಿ ಆದೇಶದ (ಸುಗ್ರೀವಾಜ್ಞೆ) ಮೂಲಕ ಅಧಿಕಾರ ಹಿಡಿದಿರುವುದು ಮಿತ್ರಪಕ್ಷಗಳಾದ ಬಿಜೆಪಿ ಮತ್ತು ಶಿವಸೇನೆ ಪಾಳಯದಲ್ಲೇ ಅಸಮಾಧಾನದ ಹೊಗೆಯಾಡಲು ಕಾರಣವಾಗಿದೆ.



ನವೆಂಬರ್ 10ರಂದು ನಡೆದ ಡೇರಿ ಅಧ್ಯಕ್ಷರ ಚುನಾವಣೆಯಲ್ಲಿ ಎನ್‌ಸಿಪಿ ನಾಯಕ ರಾಜೇಶ್ ಪಾಟೀಲ್ ಅವರು 16–13 ಮತಗಳ ಅಂತರದಿಂದ ಆಯ್ಕೆಯಾಗಿದ್ದಾರೆ. ಅಕ್ಟೋಬರ್ 19ರಂದು ನಡೆದಿದ್ದ ಆಡಳಿತ ಮಂಡಳಿ ಚುನಾವಣೆಯಲ್ಲಿ ಮಹಾಯುತಿ ಮೈತ್ರಿಕೂಟವು 12–13 ಮತಗಳಿಂದ ಸೋಲು ಕಂಡಿತ್ತು. ಆದರೆ, ಇತ್ತೀಚೆಗಷ್ಟೇ ಸರ್ಕಾರವು ತಾನು ನಾಮನಿರ್ದೇಶನ ಮಾಡುವ ನಾಲ್ವರು ನಿರ್ದೇಶಕರಿಗೆ ಮತದಾನದ ಹಕ್ಕು ಕಲ್ಪಿಸುವ ಸುಗ್ರೀವಾಜ್ಞೆಯನ್ನು ಜಾರಿಗೆ ತಂದಿತ್ತು. ಈ ಹೆಚ್ಚುವರಿ ಮತಗಳ ಬಲದಿಂದ ಆಡಳಿತಾರೂಢ ಮೈತ್ರಿಕೂಟವು ಈಗ ಡೇರಿಯ ಅಧಿಕಾರದ ಚುಕ್ಕಾಣಿ ಹಿಡಿಯುವಲ್ಲಿ ಯಶಸ್ವಿಯಾಗಿದೆ.

ಆದರೆ, ಈ ಬೆಳವಣಿಗೆಗಳು ಬಿಜೆಪಿಯ ವರ್ಚಸ್ಸಿಗೆ ಧಕ್ಕೆ ತರಬಹುದು ಮತ್ತು ಎನ್‌ಸಿಪಿಯನ್ನು ನಂಬಲು ಸಾಧ್ಯವಿಲ್ಲ ಎಂಬ ಕಳವಳವು ಬಿಜೆಪಿ ಸ್ಥಳೀಯ ನಾಯಕರಲ್ಲಿ ಮೂಡಿದೆ. ಸಚಿವರು, ಪದಾಧಿಕಾರಿಗಳು ಹಾಗೂ ತಳಮಟ್ಟದ ಕಾರ್ಯಕರ್ತರು ಸೇರಿದಂತೆ ಹಲವು ಬಿಜೆಪಿ ನಾಯಕರನ್ನು ಮಾತನಾಡಿಸಿದಾಗ ಈ ಅಸಮಾಧಾನ ಹೊರಬಿದ್ದಿದೆ. ಇತ್ತ ಪಶ್ಚಿಮ ಮಹಾರಾಷ್ಟ್ರದ ಕೊಲ್ಹಾಪುರದಲ್ಲಿರುವ ಈ ಡೇರಿಯ ರಾಜಕೀಯ ಬೆಳವಣಿಗೆಗಳು ಪಕ್ಷದ ಸಂಘಟನೆಯ ಮೇಲೆ ಪರಿಣಾಮ ಬೀರಬಹುದು ಎಂಬ ಆತಂಕ ಶಿವಸೇನೆ ನಾಯಕರಲ್ಲೂ ವ್ಯಕ್ತವಾಗಿದೆ.

ಎನ್‌ಸಿಪಿ ಒತ್ತಡಕ್ಕೆ ಮಣಿದು ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಅನಗತ್ಯವಾಗಿ ಈ ವಿವಾದದಲ್ಲಿ ಸಿಲುಕಿಕೊಂಡಿದ್ದಾರೆ ಎಂಬುದು ಪಕ್ಷದೊಳಗಿನ ಚರ್ಚೆಗಳ ಸಾರಾಂಶ. ಕೊನೆಗೆ ಬಿಜೆಪಿ ತೀವ್ರ ಮುಖಭಂಗ ಅನುಭವಿಸಬೇಕಾಯಿತು. ಇದರ ಲಾಭ ಪಡೆದ ಕಾಂಗ್ರೆಸ್, ಸ್ಥಳೀಯ ವಿಷಯವನ್ನು ಮತ ಕಳ್ಳತನ ಎಂದು ಆರೋಪಿಸುವ ಮೂಲಕ ರಾಷ್ಟ್ರೀಯ ವಿಷಯವನ್ನಾಗಿ ಪರಿವರ್ತಿಸಿತು ಎಂದು ಬಿಜೆಪಿಯ ಹಿರಿಯ ಪದಾಧಿಕಾರಿಯೊಬ್ಬರು ಬೇಸರ ವ್ಯಕ್ತಪಡಿಸಿದ್ದಾರೆ.

ಬಿಜೆಪಿಯ ಹಿರಿಯ ಸಚಿವ ಚಂದ್ರಕಾಂತ್ ಪಾಟೀಲ್ ಮತ್ತು ಎನ್‌ಸಿಪಿಯ ಹಸನ್ ಮುಶ್ರಿಫ್ ಅವರ ಪ್ರಾಬಲ್ಯವೇ ಈ ಚುನಾವಣೆಯಲ್ಲಿ ಮೇಲುಗೈ ಸಾಧಿಸಿದ್ದು, ತಳಮಟ್ಟದ ನಾಯಕರನ್ನು ಕಡೆಗಣಿಸಲಾಗಿದೆ ಎಂದು ಸ್ಥಳೀಯ ಬಿಜೆಪಿ ನಾಯಕರು ಆರೋಪಿಸಿದ್ದಾರೆ. ಕಳೆದ ಅವಧಿಯಲ್ಲಿ ಗೋಕುಲ್ ನಿರ್ದೇಶಕಿಯಾಗಿದ್ದ ಬಿಜೆಪಿಯ ಶೌಮಿಕಾ ಮಹಾಡಿಕ್ ಅವರನ್ನು ಈ ಬಾರಿ ಕಡೆಗಣಿಸಿರುವ ಬಗ್ಗೆ ಅವರು ಬೆರಳು ಮಾಡಿದ್ದಾರೆ.

ಸ್ಥಳೀಯ ನಾಯಕತ್ವವನ್ನು ಬೆಳೆಸುವ ಮತ್ತು ಸಬಲೀಕರಣಗೊಳಿಸುವಲ್ಲಿ ಬಿಜೆಪಿಯ ದೌರ್ಬಲ್ಯವನ್ನು ಇದು ಎತ್ತಿತೋರಿಸುತ್ತದೆ ಎಂದು ಕೆಲವು ನಾಯಕರು ಅಭಿಪ್ರಾಯಪಟ್ಟಿದ್ದಾರೆ.

ಈ ಬೆಳವಣಿಗೆಗಳ ಕುರಿತು ಪ್ರತಿಕ್ರಿಯಿಸಿರುವ ಎನ್‌ಸಿಪಿ ನಾಯಕ ಹಸನ್ ಮುಶ್ರಿಫ್, ಬಿಕ್ಕಟ್ಟನ್ನು ನಿವಾರಿಸಲು ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದೆ.

ಇದರಲ್ಲಿ ಬೇರೆ ಯಾವುದೇ ಹಿತಾಸಕ್ತಿಗಳಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಒಂದು ವೇಳೆ ಬಿಜೆಪಿ ಮತ್ತು ಆಡಳಿತ ಮೈತ್ರಿಕೂಟವು ಗೋಕುಲ್ ಅನ್ನು ಕಿತ್ತುಕೊಂಡು ಗುಜರಾತ್ ಮೂಲದ ಅಮುಲ್‌ನಂತಹ ದೊಡ್ಡ ಸಹಕಾರಿ ಸಂಸ್ಥೆಗೆ ಹಸ್ತಾಂತರಿಸಲು ಬಯಸಿದೆ ಎಂಬ ಸಂದೇಶ ಹೋದರೆ, ಅದು ಮರಾಠಿ ಅಸ್ಮಿತೆಯ ಪ್ರಶ್ನೆಯಾಗಿ ಹೊರಹೊಮ್ಮಬಹುದು. ಇದು ಪಕ್ಷಕ್ಕೆ ನುಂಗಲಾರದ ತುತ್ತಾಗಬಹುದು ಎಂದು ಮತ್ತೊಬ್ಬ ನಾಯಕ ಹೇಳಿದ್ದಾರೆ. ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಕೂಡ ಈ ವಿಚಾರದಲ್ಲಿ ಮಧ್ಯಪ್ರವೇಶಿಸಲು ಒಲವು ತೋರಿರಲಿಲ್ಲ ಎಂದು ಹಿರಿಯ ಶಿವಸೇನೆ ನಾಯಕರೊಬ್ಬರು ತಿಳಿಸಿದ್ದಾರೆ.

ಮಹದೇವ್ ಬೆಟ್ಟಿಂಗ್ ಜಾಲದ ಮೇಲೆ ಸಿಬಿಐ ದಾಳಿ

ನವದೆಹಲಿ, ನ.14: ಮಹದೇವ್ ಆನ್‌ಲೈನ್ ಅಕ್ರಮ ಬೆಟ್ಟಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರೀಯ ತನಿಖಾ ದಳ (ಸಿಬಿಐ) ದೇಶದ ಆರು ರಾಜ್ಯಗಳ 33 ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದೆ. ಈ ವೇಳೆ ಅಕ್ರಮ ಬೆಟ್ಟಿಂಗ್ ನಡೆಸುತ್ತಿದ್ದ ಲೈವ್ ಪ್ಯಾನೆಲ್‌ಗಳನ್ನು ಪತ್ತೆಹಚ್ಚಿ ಧ್ವಂಸಗೊಳಿಸಲಾಗಿದೆ. ಮೊಬೈಲ್ ಫೋನ್‌ಗಳು, ಡಿಜಿಟಲ್ ಸಾಧನಗಳು ಹಾಗೂ ಹವಾಲಾ ಹಣ ವರ್ಗಾವಣೆಗೆ ಸಂಬಂಧಿಸಿದ ಮಹತ್ವದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ.



ಪ್ರಕರಣದ ಪ್ರಮುಖ ಆರೋಪಿ ಹಾಗೂ ಮಹದೇವ್ ಆನ್‌ಲೈನ್ ಬುಕ್‌ನ ಪ್ರಮುಖ ಪ್ರವರ್ತಕ ಸೌರಭ್ ಚಂದ್ರಕರ್ ನೀಡಿದ ಮಾಹಿತಿಯ ಆಧಾರದಲ್ಲಿ ಈ ದಾಳಿ ನಡೆಸಲಾಗಿದೆ. ಓಮನ್‌ನಿಂದ ಭಾರತಕ್ಕೆ ಹಸ್ತಾಂತರಗೊಂಡಿದ್ದ ಆತನನ್ನು ಸಿಬಿಐ ನವೆಂಬರ್ 1ರಂದು ಬಂಧಿಸಿತ್ತು. ವಿಚಾರಣೆಗಾಗಿ ರಾಯ್‌ಪುರದ ವಿಶೇಷ ಸಿಬಿಐ ನ್ಯಾಯಾಲಯವು ಎಂಟು ದಿನಗಳ ಪೊಲೀಸ್ ಕಸ್ಟಡಿಗೆ ಒಪ್ಪಿಸಿತ್ತು.

ವಿಚಾರಣೆ ವೇಳೆ ಬೆಟ್ಟಿಂಗ್ ವೇದಿಕೆಯ ಕಾರ್ಯವೈಖರಿ ಹಾಗೂ ಭಾರತದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪ್ಯಾನೆಲ್ ಆಪರೇಟರ್‌ಗಳ ಜಾಲದ ಕುರಿತು ಮಾಹಿತಿ ಲಭ್ಯವಾಗಿದೆ. ವಿದೇಶದಲ್ಲಿರುವ ಪ್ರಧಾನ ಕಚೇರಿಯಿಂದ ಈ ವೇದಿಕೆ ಕಾರ್ಯನಿರ್ವಹಿಸುತ್ತಿದ್ದು, ಭಾರತದಲ್ಲಿ ಪ್ಯಾನೆಲ್ ಆಪರೇಟರ್‌ಗಳು ಗ್ರಾಹಕರಿಗೆ ಬೆಟ್ಟಿಂಗ್ ಐಡಿಗಳನ್ನು ಒದಗಿಸಿ, ಇತರರ ಹೆಸರಿನಲ್ಲಿ ತೆರೆಯಲಾದ ಅಥವಾ ಬಾಡಿಗೆಗೆ ಪಡೆದ ಬ್ಯಾಂಕ್ ಖಾತೆಗಳ ಮೂಲಕ ಹಣ ಸಂಗ್ರಹಿಸುತ್ತಿದ್ದರು. ಬಳಿಕ ಲಾಭದ ಹಣವನ್ನು ಹವಾಲಾ ಮಾರ್ಗದ ಮೂಲಕ ವಿದೇಶಕ್ಕೆ ವರ್ಗಾಯಿಸುತ್ತಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ.

ಪೊಲೀಸ್ ಕಸ್ಟಡಿ ಅವಧಿ ಮುಗಿದ ಹಿನ್ನೆಲೆಯಲ್ಲಿ ನವೆಂಬರ್ 12ರಂದು ಸೌರಭ್ ಚಂದ್ರಾಕರ್‌ನನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ನವೆಂಬರ್ 19ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಛತ್ತೀಸ್‌ಗಢ ಸರ್ಕಾರದಿಂದ ತನಿಖೆ ವರ್ಗಾವಣೆಯಾದ ಬಳಿಕ ಸಿಬಿಐ ಈ ಪ್ರಕರಣದಲ್ಲಿ ಎರಡು ಎಫ್‌ಐಆರ್‌ಗಳನ್ನು ದಾಖಲಿಸಿದೆ. ವಿದೇಶದಲ್ಲಿರುವ ಆರೋಪಿಗಳು, ಬೆಟ್ಟಿಂಗ್ ಜಾಲದ ಕಾರ್ಯಾಚರಣೆಗೆ ನೆರವು ನೀಡಿದವರು ಹಾಗೂ ಸಂಬಂಧಿತ ಸರ್ಕಾರಿ ಅಧಿಕಾರಿಗಳ ಪಾತ್ರದ ಕುರಿತು ತನಿಖೆ ಮುಂದುವರಿದಿದೆ. ತಲೆಮರೆಸಿಕೊಂಡಿರುವ ಇತರ ಆರೋಪಿಗಳ ಹಸ್ತಾಂತರಕ್ಕೂ ಸಿಬಿಐ ಕ್ರಮ ಕೈಗೊಂಡಿದೆ.

ಧರ್ಮಸ್ಥಳ ದೇವಸ್ಥಾನಕ್ಕೂ ಗ್ರಾಮಕ್ಕೂ ಅವಿನಾಭಾವ ಸಂಬಂಧ

ಧರ್ಮಸ್ಥಳ ಷಡ್ಯಂತ್ರ ಖಂಡಿಸಲು ಸಮಾಲೋಚನಾ ಸಭೆ

ಮುಂಬೈ,ನ.14: ನೆಮ್ಮದಿ, ಸಾಮರಸ್ಯ ಹಾಗೂ ಕೋಮುಸೌಹಾರ್ದ ನೆಲೆಸಿದೆ. ಹಿಂದೂಗಳು, ಜೈನರು, ಮುಸ್ಲಿಮರು ಮತ್ತು ಕ್ರೈಸ್ತರು ಸೇರಿದಂತೆ ಸರ್ವಧರ್ಮೀಯರೂ ಇಲ್ಲಿನ ಭಕ್ತರಾಗಿದ್ದು, ಶ್ರದ್ಧಾ–ಭಕ್ತಿಯಿಂದ ನಡೆದುಕೊಳ್ಳುತ್ತಾರೆ. ಆದರೂ ಕ್ಷೇತ್ರದ ಪ್ರಗತಿ ಹಾಗೂ ಸೇವಾಕಾರ್ಯಗಳ ಯಶಸ್ಸಿನಿಂದ ಮತ್ಸರಗೊಂಡು ಕ್ಷೇತ್ರಕ್ಕೆ ಅಪಪ್ರಚಾರದ ಮೂಲಕ ಮಸಿ ಬಳಿಯುವ ವಿಫಲ ಯತ್ನ ಮಾಡುತ್ತಿದ್ದಾರೆ ಎಂದು ಧರ್ಮಸ್ಥಳ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಶ್ರೀನಿವಾಸ ರಾವ್ ಧರ್ಮಸ್ಥಳ ಆರೋಪಿಸಿದರು.

ಸಮಾಲೋಚನಾ ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಿಂದ ಗಿರೀಶ್ ಮಟ್ಟಣ್ಣವರ್, ಮಹೇಶ್ ಶೆಟ್ಟಿ ತಿಮರೋಡಿ, ಜಯಂತ ಟಿ. ಹಾಗೂ ಸಂಗಡಿಗರು 2000 ದಿಂದ 2014ರ ವರೆಗೆ ಧರ್ಮಸ್ಥಳದಲ್ಲಿ 1,510 ಅಸಹಜ ಸಾವುಗಳು (ಯು.ಡಿ.ಆರ್) ಆಗಿವೆ ಎಂದು ಸುಳ್ಳು ವದಂತಿ ಪಸರಿಸುತ್ತಿದ್ದಾರೆ.



ಬುರುಡೆ ಗ್ಯಾಂಗ್‌ನ ಸದಸ್ಯರು ವಿವಿಧ ಕಚೇರಿಗಳು, ಆಯೋಗಗಳು ಹಾಗೂ ನ್ಯಾಯಾಲಯಗಳಿಗೆ ಹೋಗಿ ಅಪಪ್ರಚಾರ ಮಾಡುತ್ತಿದ್ದಾರೆ. 2000 ದಿಂದ 2014ರ ವರೆಗೆ ಧರ್ಮಸ್ಥಳ ಮತ್ತು ಸುತ್ತಮುತ್ತ ಆಗಿರುವ ಅಸಹಜ ಸಾವುಗಳು 374 ಎಂದು ಮಾಹಿತಿಹಕ್ಕಿನಿಂದ ಪಡೆದ ವಿವರದಲ್ಲಿ ಲಭಿಸಿದೆ.

ಬೆಳ್ತಂಗಡಿ ತಾಲ್ಲೂಕು 81 ಗ್ರಾಮಗಳನ್ನು ಹೊಂದಿದ್ದು, ಜಿಲ್ಲೆಯಲ್ಲೆ ಅತಿದೊಡ್ಡ ತಾಲ್ಲೂಕು ಆಗಿದೆ. ಆರಂಭದಲ್ಲಿ ಬೆಳ್ತಂಗಡಿ ತಾಲ್ಲೂಕುಕೇಂದ್ರದಲ್ಲಿ ಮಾತ್ರ ಪೊಲೀಸ್‌ಠಾಣೆ ಇತ್ತು. ಪುಂಜಾಲಕಟ್ಟೆ, ವೇಣೂರು, ಧರ್ಮಸ್ಥಳದಲ್ಲಿ ಇತ್ತೀಚೆಗೆ ಪೊಲೀಸ್ ಠಾಣೆಗಳು ಆರಂಭಗೊಂಡಿವೆ. ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಕೂಡಾ ಇದೇ ಸಂಖ್ಯೆಯನ್ನು ಉಲ್ಲೇಖಿಸಿ ಅಪಪ್ರಚಾರ ಮಾಡುತ್ತಿದ್ದಾರೆ. ಸುಳ್ಳು ಮಾಹಿತಿ ಹಾಗೂ ಅಪಪ್ರಚಾರದಿಂದ ಧರ್ಮಸ್ಥಳಕ್ಕೆ ಕಳಂಕ ಬಂದಿದೆ.

ಗ್ರಾಮಕ್ಕೆ ಸಂಬಂಧಿಸಿದ ಯಾವುದೇ ತೀರ್ಮಾನಕ್ಕೆಗೊಳ್ಳುವ ಮೊದಲು ಗ್ರಾಮಸ್ಥರ ಅಹವಾಲು ಆಲಿಸಬೇಕು ಎಂದು ಸಲಹೆ ನೀಡಿದರು.

ಮುಖ್ಯಂತ್ರಿ, ಗೃಹಸಚಿವರು, ಜಿಲ್ಲಾಉಸ್ತುವಾರಿ ಸಚಿವರು ಹಾಗೂ ಎಲ್ಲಾ ಶಾಸಕರುಗಳಿಗೆ ಮನವಿಯ ಪ್ರತಿಯನ್ನು ಕಳುಹಿಸಿಕೊಡಲಾಯಿತು. ವಕೀಲ ಕೇಶವ ಬೆಳಾಲು, ಗ್ರಾಮಸ್ಥರು ಉಪಸ್ಥಿತರಿದ್ದು, ಸಭೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದರು.

ಸೂಕ್ತ ನ್ಯಾಯ ದೊರಕದಿದ್ದಲ್ಲಿ ಮುಂದೆ ಕಾನೂನು ರೀತಿಯಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಶ್ರೀನಿವಾಸ ರಾವ್ ಎಚ್ಚರಿಕೆ ನೀಡಿದರು.

ಯುವಜನತೆಗೆ ಮಾರ್ಗದರ್ಶಕರಾಗಿ, ವಿಕಸಿತ ಭಾರತದ ಕನಸಿಗೆ ಶಕ್ತಿಯಾಗಿ

ಐಐಟಿ ಹಳೆಯ ವಿದ್ಯಾರ್ಥಿಗಳಿಗೆ ರಾಜ್ಯಪಾಲೆ ಡಾ. ಸುಧಾ ಯಾದವ್ ಕರೆ

ಬೆಂಗಳೂರು, ನ.14: ಐಐಟಿಗಳ ಹಳೆಯ ವಿದ್ಯಾರ್ಥಿಗಳು ತಮ್ಮ ಜ್ಞಾನ, ಅನುಭವ, ತಂತ್ರಜ್ಞಾನ ಮತ್ತು ನಾವೀನ್ಯತೆಯ ಮೂಲಕ ಯುವಜನತೆಗೆ ಮಾರ್ಗದರ್ಶನ ನೀಡಬೇಕು ಹಾಗೂ 2047ರ ವಿಕಸಿತ ಭಾರತದ ಕನಸನ್ನು ಸಾಕಾರಗೊಳಿಸಲು ಸಕ್ರಿಯವಾಗಿ ಕೊಡುಗೆ ನೀಡಬೇಕು ಎಂದು ರಾಜ್ಯಪಾಲೆ ಡಾ. ಸುಧಾ ಯಾದವ್ ಕರೆ ನೀಡಿದರು.

ಬೆಂಗಳೂರಿನ ಐಐಟಿ ಅಲ್ಯುಮ್ನಿ ಸೆಂಟರ್‌ನಲ್ಲಿ ಶನಿವಾರ ಆಯೋಜಿಸಲಾಗಿದ್ದ ಐಐಟಿ ಖರಗ್‌ಪುರದ ಪ್ಲಾಟಿನಂ ಜುಬಿಲಿ (75ನೇ ವರ್ಷದ) ಸಂಭ್ರಮಾಚರಣೆ ಹಾಗೂ ಹಳೆಯ ವಿದ್ಯಾರ್ಥಿಗಳ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿ, ಒಂದು ಕಾಲದಲ್ಲಿ ಐಐಟಿಯಲ್ಲಿ ವ್ಯಾಸಂಗ ಮಾಡುವುದು ಅಸಂಖ್ಯಾತ ವಿದ್ಯಾರ್ಥಿಗಳ ಕನಸಾಗಿತ್ತು. ಐಐಟಿಯಲ್ಲಿ ಪಡೆಯುವ ಶಿಕ್ಷಣವು ಕೇವಲ ಶೈಕ್ಷಣಿಕ ಜ್ಞಾನಕ್ಕೆ ಸೀಮಿತವಾಗದೆ, ವ್ಯಕ್ತಿತ್ವ ವಿಕಸನ, ವಿಶಾಲ ದೃಷ್ಟಿಕೋನ ಹಾಗೂ ಜೀವನದ ದಿಕ್ಕನ್ನೇ ಬದಲಿಸುವ ಶಕ್ತಿಯನ್ನು ಹೊಂದಿದೆ" ಎಂದರು.

ಐಐಟಿ ಖರಗ್‌ಪುರವು 75 ವರ್ಷಗಳ ಸಾರ್ಥಕ ಪಯಣವನ್ನು ಪೂರ್ಣಗೊಳಿಸಿರುವುದಕ್ಕೆ ಅಭಿನಂದನೆ ಸಲ್ಲಿಸಿದ ರಾಜ್ಯಪಾಲರು, "ಈ



ಸಂಸ್ಥೆಯ ಬೆಳವಣಿಗೆಯಲ್ಲಿ ಕೊಡುಗೆ ನೀಡಿದ ಹಿಂದಿನ ಮತ್ತು ಪ್ರಸ್ತುತ ಬೋಧಕ ವರ್ಗ, ವಿಜ್ಞಾನಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ಪರಿಶ್ರಮ ಶ್ಲಾಘನೀಯ. ದೇಶದಲ್ಲಿ ಒಂದೇ ಐಐಟಿಯಿಂದ ಆರಂಭವಾದ ಪಯಣ ಇಂದು 23 ಐಐಟಿಗಳ ಸ್ಥಾಪನೆಯವರೆಗೆ ಬೆಳೆದಿರುವುದು ಭಾರತದ ಶಿಕ್ಷಣ, ಸಂಶೋಧನೆ ಮತ್ತು ನಾವೀನ್ಯತೆಯ ಪ್ರಗತಿಗೆ ಸಾಕ್ಷಿಯಾಗಿದೆ. ಐಐಟಿಗಳ ಹಳೆಯ ವಿದ್ಯಾರ್ಥಿಗಳು ತಂತ್ರಜ್ಞಾನ, ಸಂಶೋಧನೆ, ಉದ್ಯಮಶೀಲತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದೇಶಕ್ಕೆ ಮಹತ್ವದ ಕೊಡುಗೆ ನೀಡಿದ್ದು, ಜಾಗತಿಕ ಮಟ್ಟದಲ್ಲಿಯೂ ಗುರುತಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಭಾರತದ ಡಿಜಿಟಲ್ ಪರಿವರ್ತನೆಯನ್ನು ಶ್ಲಾಘಿಸಿದ ರಾಜ್ಯಪಾಲರು ಔಪಚಾರಿಕ ಶಿಕ್ಷಣದ ಅವಕಾಶ ಕಡಿಮೆ ಇದ್ದವರೂ ಇಂದು ಡಿಜಿಟಲ್ ವಹಿವಾಟುಗಳನ್ನು ನಡೆಸುತ್ತಿರುವುದು ತಂತ್ರಜ್ಞಾನದ ಶಕ್ತಿ ಮತ್ತು ಅದರ ವ್ಯಾಪಕ ತಲುಪುವಿಕೆಗೆ ಸಾಕ್ಷಿಯಾಗಿದೆ. ಭಾರತವು ಡಿಜಿಟಲ್ ಇಂಡಿಯಾ, ಆತ್ಮವಿಶ್ವಾಸದ ಭಾರತ ಹಾಗೂ ಜಾಗತಿಕ ಭಾರತವಾಗಿ ಹೊರಹೊಮ್ಮಿದೆ. ಬೃಹತ್ ಜನಸಂಖ್ಯೆ, ಸದೃಢ ಪ್ರಜಾಪ್ರಭುತ್ವ, ಯುವಜನತೆಯ ಶಕ್ತಿ, ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆ ಹಾಗೂ ವಿಸ್ತರಿಸುತ್ತಿರುವ ಸ್ಟಾರ್ಟ್‌ಅಪ್ ವಲಯ ದೇಶದ ಪ್ರಗತಿಗೆ ಬಲ ತುಂಬಿವೆ. ಇಂದು ಭಾರತವು ಜಾಗತಿಕ ಮಟ್ಟದಲ್ಲಿ ಆತ್ಮವಿಶ್ವಾಸದಿಂದ ತನ್ನದೇ ಆದ ಸ್ಥಾನವನ್ನು ನಿರ್ಮಿಸಿಕೊಂಡು, ವಿಶ್ವದ ರಾಷ್ಟ್ರಗಳನ್ನು ಸಹಭಾಗಿತ್ವಕ್ಕೆ ಆಹ್ವಾನಿಸುವ ಸಾಮರ್ಥ್ಯ ಹೊಂದಿದೆ". "ಶಿಕ್ಷಣದ ನಿಜವಾದ ಉದ್ದೇಶ ಉದ್ಯೋಗ ಪಡೆಯುವುದಕ್ಕೆ ಮಾತ್ರ ಸೀಮಿತವಾಗಿರಬಾರದು. ಜ್ಞಾನದ ಮೂಲಕ ಸಮಾಜ ಮತ್ತು ರಾಷ್ಟ್ರದ ಬಗೆಗಿನ ಜವಾಬ್ದಾರಿಯನ್ನು ಅರಿತುಕೊಳ್ಳುವುದೇ ಶಿಕ್ಷಣದ ನಿಜವಾದ ಉದ್ದೇಶವಾಗಿದೆ. ವಿಜ್ಞಾನ ಮತ್ತು ತಂತ್ರಜ್ಞಾನದ ಪ್ರಯೋಜನಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿದಾಗ ಮಾತ್ರ ಅವುಗಳ ಬಳಕೆ ಸಾರ್ಥಕವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಐಐಟಿ ಹಳೆಯ ವಿದ್ಯಾರ್ಥಿಗಳ ಕೇಂದ್ರದ ಅಧ್ಯಕ್ಷ ಮತ್ತು ಐಐಟಿ ರೂರ್ಕಿಯ ಆಡಳಿತ ಮಂಡಳಿಯ ಮಾಜಿ ಅಧ್ಯಕ್ಷ ಪ್ರೊ. ಅಶೋಕ್ ಮಿಶ್ರಾ, ಐಐಟಿ ಖರಗ್ ಪುರ ನಿರ್ದೇಶಕರಾದ ಪ್ರೊಫೆಸರ್ ಸುಮನ್ ಚಕ್ರವರ್ತಿ, ಐಐಟಿ ಅಲುಮ್ನಿ ಸೆಂಟರ್‌ನ ಉಪಾಧ್ಯಕ್ಷ ಪಿ. ಎಸ್.ವಿ. ಅನಂತ್ ನಾರಾಯಣ್ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸುವುದು ಅಗತ್ಯ

ಮಹಿಳೆಯರಿಗೆ ಸಮಾನ ಅವಕಾಶಗಳನ್ನು ಕಲ್ಪಿಸುವ ಅಗತ್ಯವನ್ನು ಪ್ರತಿಪಾದಿಸಿದ ರಾಜ್ಯಪಾಲರು, ಸೂಕ್ತ ಅವಕಾಶ ದೊರೆತಾಗ ಮಹಿಳೆಯರು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದಾರೆ. ಯುದ್ಧ ವಿಮಾನಗಳನ್ನು ಚಲಾಯಿಸುವುದರಿಂದ ಹಿಡಿದು ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಮೋಟಾರ್ ಸೈಕಲ್ ಸಾಹಸ ಪ್ರದರ್ಶನಗಳವರೆಗೆ ಮಹಿಳೆಯರು ಹಲವು ಕ್ಷೇತ್ರಗಳಲ್ಲಿ ಹೊಸ ಸಾಧನೆಗಳನ್ನು ಮಾಡಿದ್ದಾರೆ. ಮಹಿಳೆಯರ ಪ್ರತಿಭೆ ಮತ್ತು ಸಾಮರ್ಥ್ಯಕ್ಕೆ ವೇದಿಕೆ ಕಲ್ಪಿಸುವಲ್ಲಿ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.



ಬೆಂಗಳೂರಿನ ಹೈಕೋರ್ಟ್ ಆವರಣದಲ್ಲಿ ಶನಿವಾರ ನಡೆದ "ಡ್ರಗ್ಸ್ ವಿರುದ್ಧ ಓಟ" ಮಾದಕ ದ್ರವ್ಯ ವಿರೋಧಿ ಜಾಗೃತಿ ಮ್ಯಾರಥಾನ್‌ಗೆ ನ್ಯಾಯಮೂರ್ತಿ ಅನು ಶಿವರಾಮನ್ ಚಾಲನೆ ನೀಡಿದರು.

ಮತ್ತೊಂದು ಪ್ರಬಲ ಚಂಡಮಾರುತ ಅಪ್ಪಳಿಸುವ ನಿರೀಕ್ಷೆ: ನ.18, 19ರಂದು ರಾಜ್ಯದಲ್ಲಿ ಭಾರೀ ಮಳೆ

ಬೆಂಗಳೂರು,ನ.14: ಬಂಗಾಳ ಕೊಲ್ಲಿಯಲ್ಲಿ ಅರ್ನಾಬ್ ಮುರಸು ಚಂಡಮಾರುತದ ಅಬ್ಬರ ತಣ್ಣಗಾದ ಬೆನ್ನಲ್ಲೇ ಇದೀಗ ಮತ್ತೊಂದು ಚಂಡಮಾರುತದ ಆತಂಕ ಎದುರಾಗಿದೆ.

ಆಗ್ನೇಯ ಬಂಗಾಳಕೊಲ್ಲಿ ಮತ್ತು ಅಂಡಮಾನ್ ಸಮುದ್ರ ವ್ಯಾಪ್ತಿಯಲ್ಲಿ ವಾಯುಭಾರ ಕುಸಿದಿದ್ದು, ನವೆಂಬರ್ 16ರಂದು ಪ್ರಬಲ ಚಂಡಮಾರುತವು ಭಾರತದ ಪೂರ್ವ ಕರಾವಳಿ ತೀರಕ್ಕೆ ಅಪ್ಪಳಿಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಪರಿಣಾಮ, ಕರ್ನಾಟಕದಲ್ಲಿಯೂ ನವೆಂಬರ್ 18 ಮತ್ತು 19ರಂದು ಭಾರೀ ಮಳೆ ಸುರಿಯಲಿದೆ ಎಂದು ಇಲಾಖೆ ಹೇಳಿದೆ.

ಚಂಡಮಾರುತದ ಪರಿಣಾಮವಾಗಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ ಹಾಗೂ ಧಾರವಾಡ ಜಿಲ್ಲೆಗಳಿಗೆ ನವೆಂಬರ್ 19ರವರೆಗೆ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

ಇತ್ತೀಚೆಗಷ್ಟೇ ಹವಾಮಾನ ಇಲಾಖೆಯು ರಾಜ್ಯದಲ್ಲಿ ಸುಮಾರು 7 ದಿನಗಳ ಕಾಲ ಮಳೆಯಾಗುವ ಸಾಧ್ಯತೆ ಇಲ್ಲವೆಂದು ಹೇಳಿತ್ತು. ಆದರೆ, ಇದೀಗ, ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಹಠಾತ್ ಹವಾಮಾನ ಬದಲಾವಣೆಯಿಂದಾಗಿ, ಮಳೆ ಬೀಳುವ ಸಾಧ್ಯತೆ ಇದೆ ಎಂದು ಹೇಳಿದೆ.

ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತವು ನವೆಂಬರ್ 15ರಂದು ಮತ್ತಷ್ಟು ತೀವ್ರಗೊಂಡು, ವಾಯುವ್ಯ ದಿಕ್ಕಿನತ್ತ ಚಲಿಸಲಿದೆ.

ನವೆಂಬರ್ 16ರ ವೇಳೆಗೆ ಮಧ್ಯ ಬಂಗಾಳಕೊಲ್ಲಿಯಲ್ಲಿ ಪ್ರಬಲ ಚಂಡಮಾರುತವಾಗಿ ರೂಪುಗೊಂಡು ಕರಾವಳಿ ತೀರಗಳಿಗೆ ಅಪ್ಪಳಿಸಲಿದೆ. ಒಡಿಶಾ ಮತ್ತು ಆಂಧ್ರಪ್ರದೇಶ ರಾಜ್ಯಗಳಲ್ಲಿ ಧಾರಾಕಾರ ಮಳೆ ಸುರಿಯುವ ಸಾಧ್ಯತೆ ಇದ್ದು, ಎರಡೂ ರಾಜ್ಯಗಳಿಗೆ ಹೈ ಅಲರ್ಟ್ ಘೋಷಿಸ ಲಾಗಿದೆ. ಚಂಡಮಾರುತದ ಹಿನ್ನೆಲೆಯಲ್ಲಿ ಸಮುದ್ರದ ಅಲೆಗಳು ಪ್ರಕ್ಷುಬ್ಧಗೊಂಡಿದ್ದು, ಗಂಟೆಗೆ 50 ರಿಂದ 65 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಬೀಸುತ್ತಿದೆ.

ಕೆಇಎ ನೇಮಕಾತಿ ಪರೀಕ್ಷೆ: ಶೇ.68ರಷ್ಟು ಹಾಜರು

ಬೆಂಗಳೂರು,ನ.14: ಪೌರಾಡಳಿತ ನಿರ್ದೇಶನಾಲಯದ ಕಲ್ಯಾಣ ಕರ್ನಾಟಕ ವೃಂದಕ್ಕೆ ಸೇರಿದ ನೀರು ಸರಬರಾಜು ಆಪರೇಟರ್ ಹಾಗೂ ಸಹಾಯಕ ನೀರು ಸರಬರಾಜು ಆಪರೇಟರ್, ಇಎಸ್‌ಐ ಹಾಗೂ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನರ್ಸಿಂಗ್ ಅಧಿಕಾರಿ ಹುದ್ದೆಗಳ ನೇಮಕಕ್ಕೆ ಇಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಯಶಸ್ವಿಯಾಗಿ ಲಿಖಿತ ಪರೀಕ್ಷೆ ನಡೆಸಿತು.

ನೀರು ಸರಬರಾಜು ಆಪರೇಟರ್ ಹಾಗೂ ಸಹಾಯಕ ನೀರು ಸರಬರಾಜು ಆಪರೇಟರ್ ಹುದ್ದೆಗಳಿಗೆ ಬೆಳಿಗ್ಗೆ ನಿರ್ದಿಷ್ಟ ಪತ್ರಿಕೆಗೆ ಪರೀಕ್ಷೆ ನಡೆಯಿತು.

ಇದರಲ್ಲಿ ಅರ್ಜಿ ಸಲ್ಲಿಸಿದ್ದ 2,552 ಅಭ್ಯರ್ಥಿಗಳ ಪೈಕಿ 1,481 ಮಂದಿ (ಶೇ.68) ಹಾಜರಾಗಿದ್ದರು.

ಮಧ್ಯಾಹ್ನ ದ ನಂತರ ಮೇಲಿನ ಎಲ್ಲ ಇಲಾಖೆಗಳ ಹುದ್ದೆಗಳಿಗೆ ಸಾಮಾನ್ಯ ಜ್ಞಾನ ಪತ್ರಿಕೆಗೆ ಪರೀಕ್ಷೆ ನಡೆಯಿತು. ಅದರಲ್ಲಿ 13,044 ಅಭ್ಯರ್ಥಿಗಳ ಪೈಕಿ 7,089 (ಶೇ 68) ಮಂದಿ ಹಾಜರಾಗಿದ್ದರು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ತಿಳಿಸಿದ್ದಾರೆ.

ಕ್ಯಾನ್ಸರ್ ಔಷಧ ದರ ಇಳಿಕೆ: ಬೆಲೆಗಳ ಮೇಲೆ ನಿಗಾವಹಿಸುವಂತೆ ಔಷಧ ನಿಯಂತ್ರಕರಿಗೆ ಸೂಚನೆ

ಬೆಂಗಳೂರು, ನ.14: ಕ್ಯಾನ್ಸರ್ ಚಿಕಿತ್ಸೆಗೆ ಬಳಸುವ ಅನುಸೂಚಿತವಲ್ಲದ 137 ಔಷಧಗಳ ಪರಿಷ್ಕೃತ ದರವನ್ನು ಕಡ್ಡಾಯವಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಮೇಲ್ವಿಚಾರಣೆ ನಡೆಸುವಂತೆ ರಾಷ್ಟ್ರೀಯ ಔಷಧ ದರ ಪ್ರಾಧಿಕಾರ ಎಲ್ಲ ರಾಜ್ಯಗಳ ಔಷಧ ನಿಯಂತ್ರಕರಿಗೆ ಸೂಚನೆ ನೀಡಿದೆ.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯ ಇತ್ತೀಚೆಗೆ 137 ಕ್ಯಾನ್ಸರ್ ಔಷಧಗಳ ದರಗಳನ್ನು ನವೆಂಬರ್ 9 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿತ್ತು.

ನೂತನ ದರಗಳನ್ನು ಅನ್ವಯಿಸುವ ಬಗ್ಗೆ ಔಷಧಗಳ ಉತ್ಪಾದಕರು, ಚಿಲ್ಲರೆ ಮಾರಾಟಗಾರರು, ದಾಸ್ತಾನುದಾರರು, ಆಸ್ಪತ್ರೆಗಳು ಮತ್ತು ವೈದ್ಯಕೀಯ ಸಂಸ್ಥೆಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ. ಪರಿಷ್ಕೃತ ದರಗಳನ್ನು ಪಾಲನೆ ಮಾಡುವಂತೆ ಹಾಗೂ ನೂತನ ದರ ಪಟ್ಟಿಯನ್ನು ತಮ್ಮ ವೆಬ್ ಸೈಟ್ ಹಾಗೂ ಸ್ಥಳದಲ್ಲಿ ಪ್ರದರ್ಶಿಸುವಂತೆ ತಿಳಿಸಲಾಗಿದೆ.

ಔಷಧಗಳ ದರ ಇಳಿಕೆಯ ಲಾಭ, ಅಗತ್ಯವುಳ್ಳವರು ಹಾಗೂ ರೋಗಿಗಳಿಗೆ ದೊರೆಯುತ್ತಿರುವುದನ್ನು ಖಚಿತಪಡಿಸಿಕೊಳ್ಳುವ ಕುರಿತು ರಾಜ್ಯ ಔಷಧ ನಿಯಂತ್ರಕರಿಗೆ ನಿರ್ದೇಶನ ನೀಡಲಾಗಿದ್ದು, ಕೈಗೊಂಡಿರುವ ಕ್ರಮಗಳ ಕುರಿತು ಇದೇ 16 ರೊಳಗೆ ರಾಷ್ಟ್ರೀಯ ಔಷಧ ದರ ಪ್ರಾಧಿಕಾರಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿದೆ.

ಮಕ್ಕಳ ಮೇಲೆ ಶೈಕ್ಷಣಿಕ ಒತ್ತಡಕ್ಕೆ ಕಡಿವಾಣ ಹಾಕಲು ಸರ್ಕಾರ ತೀರ್ಮಾನ

1ರಿಂದ 9ರವರೆಗೆ ಕೋಚಿಂಗ್‌ಗೆ ನಿರ್ಬಂಧ, 10ನೇ ತರಗತಿಯಿಂದ ಮಾತ್ರ ಅವಕಾಶ

ಬೆಂಗಳೂರು, ನ.14: ಮಕ್ಕಳ ಮೇಲಿನ ಅತಿಯಾದ ಶೈಕ್ಷಣಿಕ ಒತ್ತಡಕ್ಕೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಮಹತ್ವದ ತೀರ್ಮಾನ ಕೈಗೊಂಡಿದೆ. 1ರಿಂದ 9ನೇ ತರಗತಿಯ ಮಕ್ಕಳಿಗೆ ಕೋಚಿಂಗ್ ನೀಡುವುದಕ್ಕೆ ನಿರ್ಬಂಧ ವಿಧಿಸುವುದು ಹಾಗೂ 10ನೇ ತರಗತಿಯಿಂದ ಮಾತ್ರ ಕೋಚಿಂಗ್‌ಗೆ ಅವಕಾಶ ಕಲ್ಪಿಸುವ ಉದ್ದೇಶದ ಕರಡು ಮಾರ್ಗಸೂಚಿಯನ್ನು ಶಾಲಾ ಶಿಕ್ಷಣ ಇಲಾಖೆ ಪ್ರಕಟಿಸಿದೆ.

15 ವರ್ಷ ತುಂಬಿದವರಿಗೆ ಮಾತ್ರ ಕೋಚಿಂಗ್ ಸೆಂಟರ್ ಪ್ರವೇಶಕ್ಕೆ ಅವಕಾಶ ನೀಡುವ ಪ್ರಸ್ತಾವನೆ ಮುಂದಿಟ್ಟಿದೆ. ಬೆಳಗ್ಗೆಯಿಂದ ಸಂಜೆವರೆಗೆ ಶಾಲೆಯಲ್ಲಿ ಪಾಠ, ನಂತರ ಕೋಚಿಂಗ್ ಸೆಂಟರ್‌ಗಳಲ್ಲಿ ತರಗತಿಗಳು, ಮನೆಗೆ ಬಂದ ಬಳಿಕ ಹೋಂವರ್ಕ್ ಹಾಗೂ ಪರೀಕ್ಷೆಗಳ ಸಿದ್ಧತೆ. ಹೀಗೆ ಮಕ್ಕಳಿಗೆ ವಿಶ್ರಾಂತಿ, ಆಟ, ಮನರಂಜನೆಗೂ ಸಮಯವಿಲ್ಲದಂತಾಗಿದೆ. ಈ ಪರಿಸ್ಥಿತಿಗೆ ಬ್ರೇಕ್ ಹಾಕಲು ಸರ್ಕಾರ ಮುಂದಾಗಿರುವ ಕ್ರಮಕ್ಕೆ ಪೋಷಕರಿಂದ ಸ್ವಾಗತ ವ್ಯಕ್ತವಾಗಿದೆ.

ಕರ್ನಾಟಕ ಸರ್ಕಾರ
ಶಾಲಾ ಶಿಕ್ಷಣ ಇಲಾಖೆ

ಟ್ಯೂಷನ್ ಹೆಸರಿನಲ್ಲಿ ಮಕ್ಕಳ ಮೇಲೆ ಹೆಚ್ಚುತ್ತಿರುವ ಓದಿನ ಒತ್ತಡ ಕಡಿಮೆಯಾಗುವುದರ ಜತೆಗೆ, ಉತ್ತಮ ರ್ಯಾಂಕ್ ಹಾಗೂ ಫಲಿತಾಂಶದ ಆಮಿಷವೊಡ್ಡಿ ಪೋಷಕರಿಂದ ಹೆಚ್ಚಿನ ಶುಲ್ಕ ವಸೂಲಿ ಮಾಡುವ ಪ್ರವೃತ್ತಿಗೂ ಕಡಿವಾಣ ಬೀಳಬಹುದು ಎಂಬುದು ಪೋಷಕರ ಅಭಿಪ್ರಾಯವಾಗಿದೆ.

ಮಕ್ಕಳಿಗೆ ಶಿಕ್ಷಣ ಕೊಡಿಸುವ ಹೆಸರಿನಲ್ಲಿ ಅವರ ಬಾಲ್ಯವನ್ನೇ ಕಸಿದುಕೊಳ್ಳುತ್ತಿರುವ ಕೋಚಿಂಗ್ ಸಂಸ್ಕೃತಿಗೆ ಕಡಿವಾಣ ಹಾಕಲು ಸರ್ಕಾರ ಮುಂದಾಗಿದೆ. ಆದರೆ, ಕರಡು ಮಾರ್ಗಸೂಚಿಯ ಅಂತಿಮ ಸ್ವರೂಪ ಏನಾಗಲಿದೆ, ನಿಯಮಗಳು ಎಷ್ಟರಮಟ್ಟಿಗೆ ಪರಿಣಾಮಕಾರಿಯಾಗಿ ಜಾರಿಯಾಗಲಿವೆ ಹಾಗೂ ಮಕ್ಕಳ ಮೇಲಿನ ಶೈಕ್ಷಣಿಕ ಒತ್ತಡವನ್ನು ಎಷ್ಟರಮಟ್ಟಿಗೆ ತಗ್ಗಿಸಲಿವೆ ಎಂಬುದನ್ನು ಕಾದುನೋಡಬೇಕಿದೆ.

ಕೋಚಿಂಗ್ ಸೆಂಟರ್‌ಗಳ ಕಾರ್ಯವೈಖರಿ ಮೇಲೂ ನಿಯಂತ್ರಣ ಹೇರಲು ಚಿಂತನೆ

ಇಷ್ಟು ದಿನ ಉತ್ತಮ ಫಲಿತಾಂಶ, ಹೆಚ್ಚಿನ ರ್ಯಾಂಕ್ ಕೊಡಿಸುವುದಾಗಿ ಭರವಸೆ ನೀಡಿ ಪೋಷಕರನ್ನು ಆಕರ್ಷಿಸುತ್ತಿದ್ದ ಕೋಚಿಂಗ್ ಸೆಂಟರ್‌ಗಳ ಕಾರ್ಯವೈಖರಿಗೂ ಇನ್ನು ಮುಂದೆ ನಿಯಂತ್ರಣ ಹೇರುವ ಉದ್ದೇಶ ಸರ್ಕಾರಕ್ಕಿದೆ. ಕೋಚಿಂಗ್ ಸೆಂಟರ್‌ಗಳ ನೋಂದಣಿ, ಶುಲ್ಕ ವಸೂಲಿ ಹಾಗೂ ಮೂಲಸೌಕರ್ಯಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಿಯಮಗಳನ್ನು ಜಾರಿಗೆ ತರಲು ಇಲಾಖೆ ಮುಂದಾಗಿದೆ. ಕೋಚಿಂಗ್ ಸೆಂಟರ್‌ಗಳಲ್ಲಿ ಅಗ್ನಿ ಸುರಕ್ಷತಾ ವ್ಯವಸ್ಥೆ, ಸಿಸಿಟಿವಿ ಕ್ಯಾಮರಾ, ಶೌಚಾಲಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಡ್ಡಾಯಗೊಳಿಸುವ ಪ್ರಸ್ತಾವನೆಯೂ ಇದೆ. ಪ್ರತಿಯೊಂದು ಕೋಚಿಂಗ್ ಸೆಂಟರ್ ನೋಂದಣಿ ಮಾಡಿಸಿಕೊಳ್ಳಬೇಕು. ನಿಯಮಗಳನ್ನು ಉಲ್ಲಂಘಿಸಿದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನೂ ಇಲಾಖೆ ನೀಡಿದೆ.

ಕೆಪಿಎಸ್‌ಸಿ ಪಶುವೈದ್ಯ ನೇಮಕಾತಿ ಹಗರಣ ಇ.ಡಿ.ಯಿಂದ ದೋಷಾರೋಪ ಪಟ್ಟಿ ಸಲ್ಲಿಕೆ

ಬೆಂಗಳೂರು, ನ.14 ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಪಶುವೈದ್ಯಕೀಯ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ (ಇ.ಡಿ) ಅಧಿಕಾರಿಗಳು ಮೊದಲ ದೋಷಾರೋಪ ಪಟ್ಟಿಯನ್ನು ಸಲ್ಲಿಸಿದ್ದಾರೆ.

1,500 ಪುಟಗಳ ಚಾರ್ಜ್ ಶೀಟ್‌ನಲ್ಲಿ ಪ್ರಕರಣದ ಪ್ರಮುಖ ಆರೋಪಿಗಳಾದ ಐಎಎಸ್ ಅಧಿಕಾರಿ ಜ್ಞಾನೇಂದ್ರಕುಮಾರ್ ಹಾಗೂ ಕಿಂಗ್‌ಪಿನ್ ಬಸವರಾಜ್ ಕನ್ನಾಳೆ ವಿರುದ್ಧ ಹಲವು ಗಂಭೀರ ಆರೋಪಗಳನ್ನು ಇಡಿ ಉಲ್ಲೇಖಿಸಿದೆ.

ದೋಷಾರೋಪ ಪಟ್ಟಿಯ ಪ್ರಕಾರ, ಜನವರಿ 8 ಮತ್ತು 9ರಂದು ಹಲವು ವಿಲ್ಲಾಗಳನ್ನು ಮುಂಗಡವಾಗಿ ಕಾಯ್ದಿರಿಸಲಾಗಿತ್ತು. ಆರ್ಕಿಡ್ ನಿರ್ವಾಣ ಸೇರಿದಂತೆ ವಿವಿಧ ವಿಲ್ಲಾಗಳಲ್ಲಿ ಸುಮಾರು 20 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿತ್ತು ಎಂದು ಇ.ಡಿ. ಉಲ್ಲೇಖಿಸಿದೆ.


ಜನವರಿ 7ರಂದು ಎಚ್‌ಪಿ ಪೆನ್‌ಡ್ರೈವ್ ಮೂಲಕ ಜ್ಞಾನೇಂದ್ರ ಕುಮಾರ್ ಅವರು ಬಸವರಾಜ್ ಕನ್ನಾಳೆಗೆ ಪ್ರಶ್ನೆಗಳು ಮತ್ತು ಉತ್ತರಗಳನ್ನು ನೀಡಿದ್ದರು ಎನ್ನಲಾಗಿದೆ.

ಎರಡು ಪ್ರಶ್ನೆಪತ್ರಿಕೆಗಳಿಗೆ ಸಂಬಂಧಿಸಿದ 80 ಅಂಕಗಳ ಪ್ರಶ್ನೆಗಳನ್ನು ಪೆನ್‌ಡ್ರೈವ್‌ನಲ್ಲಿ ಹಾಕಿಕೊಡಲಾಗಿತ್ತು.

ಅಂತಿಮ ಹಂತದ ಪ್ರಶ್ನೆಪತ್ರಿಕೆಯನ್ನೇ ಜ್ಞಾನೇಂದ್ರ ಕುಮಾರ್ ಮತ್ತು ಕನ್ನಾಳೆ ನಕಲು ಮಾಡಿದ್ದರು ಎಂದು ಆರೋಪಿಸಲಾಗಿದೆ.

ಕಚೇರಿಯಲ್ಲಿದ್ದ ಶಿಯೋಮಿ ಟ್ಯಾಬ್ಲೆಟ್‌ನಲ್ಲಿ ಪ್ರಶ್ನೆಪತ್ರಿಕೆಯನ್ನು ನಕಲು ಮಾಡಲಾಗಿತ್ತು. ಬಳಿಕ ಸಾಕ್ಷ್ಯ ಸಿಗದಂತೆ ಮಾಡಲು ಅದೇ ದಿನ ಟ್ಯಾಬ್ಲೆಟ್ ಒಡೆದು ಬಿಸಾಡಲಾಗಿತ್ತು ಎಂದು ಚಾರ್ಜ್ ಶೀಟ್‌ನಲ್ಲಿ ಉಲ್ಲೇಖಿಸಲಾಗಿದೆ.

ಕೆಪಿಎಸ್‌ಸಿ ನೇಮಕಾತಿ ಹಗರಣ: ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ 7 ದಿನ ಎಸ್‌ಐಟಿ ವಶಕ್ಕೆ



ಕೆಪಿಎಸ್‌ಸಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಹೈಕೋರ್ಟ್ ರಚಿಸಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ) ತನಿಖೆಯನ್ನು ಚುರುಕುಗೊಳಿಸಿದೆ. ಇದರ ಭಾಗವಾಗಿ ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಎಸ್. ಸಾಹುಕಾರ್ ರನ್ನು ಎಸ್‌ಐಟಿ ಏಳು ದಿನಗಳ ಕಾಲ ವಶಕ್ಕೆ ಪಡೆದುಕೊಂಡಿದೆ. ತನಿಖೆ ಆರಂಭಿಸಿರುವ ಎಸ್‌ಐಟಿ ಶಿವಶಂಕರಪ್ಪ ಸಾಹುಕಾರ್ ನನ್ನು ವಶಕ್ಕೆ ಕೇಳಿ ಒಂದನೇ ಎಸಿಎಂಎಂ ನ್ಯಾಯಾಲಯದಲ್ಲಿ ಮನವಿ ಮಾಡಿತ್ತು. ಎಸ್‌ಐಟಿ ಮನವಿಯನ್ನು ಪುರಸ್ಕರಿಸಿರುವ ನ್ಯಾಯಾಲಯವು ನ.19ರ ವರೆಗೂ ಶಿವಶಂಕರಪ್ಪ ಸಾಹುಕಾರ್‌ನನ್ನು ಎಸ್‌ಐಟಿ ವಶಕ್ಕೆ ನೀಡಿ ಆದೇಶ ಮಾಡಿದೆ.ಈ ಪ್ರಕರಣದ ತನಿಖೆಯನ್ನು ಕೈಗೆತ್ತಿಕೊಂಡಿದ್ದ ಜಾರಿ ನಿರ್ದೇಶನಾಲಯ(ಇ.ಡಿ) ಅಕ್ಟೋಬರ್ 6ರಂದು ವಿಚಾರಣೆಗೆ ಬಂದಿದ್ದ ಶಿವಶಂಕರಪ್ಪ ಸಾಹುಕಾರ್ ರನ್ನು ಬಂಧಿಸಿತ್ತು. ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದ ಶಿವಶಂಕರಪ್ಪರನ್ನು ಎಸ್‌ಐಟಿ ವಶಕ್ಕೆ ಪಡೆದಿದ್ದು, ತನಿಖೆ ಚುರುಕುಗೊಂಡಿದೆ.

ಡಾ.ವಿಜಯಲಕ್ಷ್ಮಿ ಬಾಳೆಕುಂದ್ರಿಗೆ ಕನ್ನಡರತ್ನ ಪ್ರಶಸ್ತಿ ಪ್ರದಾನ

ಬೆಂಗಳೂರು, ನ.14: ಸರ್ಕಾರಿ ಶಾಲಾ ಮಕ್ಕಳಲ್ಲಿನ ಸಾಹಿತ್ಯ ಪ್ರತಿಭೆಯನ್ನು ಗುರುತಿಸಿ ಕನ್ನಡ ಭಾಷೆಯ ಮೇಲಿನ ಅಭಿಮಾನ ಬೆಳೆಸುವ ಉದ್ದೇಶದಿಂದ ಯುವ ಬೆಂಗಳೂರು ಟ್ರಸ್ಟ್ ಆಯೋಜಿಸಿದ್ದ ಮಕ್ಕಳ ಕನ್ನಡ ಕವಿಗೋಷ್ಠಿ ಕಾರ್ಯಕ್ರಮ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಸಂಭ್ರಮದಿಂದ ನಡೆಯಿತು. ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಬೆಂಗಳೂರಿನ ವಿವಿಧ ಸರ್ಕಾರಿ ಶಾಲೆಗಳ ಸುಮಾರು 250 ವಿದ್ಯಾರ್ಥಿಗಳು ಭಾಗವಹಿಸಿ, ತಾವು ರಚಿಸಿದ ಸ್ವರಚಿತ ಕನ್ನಡ ಕವನಗಳನ್ನು ವಾಚಿಸಿದರು. ಕನ್ನಡ ನಾಡು–ನುಡಿ, ಪ್ರಕೃತಿ, ಪರಿಸರ, ತಾಯಿ, ಸಮಾಜ ಹಾಗೂ ಜೀವನ ಮೌಲ್ಯಗಳ ಕುರಿತ ಮಕ್ಕಳ ಕವನಗಳು ಸಭಿಕರ ಮೆಚ್ಚುಗೆಗೆ ಪಾತ್ರವಾದವು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕರ್ನಾಟಕದ ಮೊದಲ ಮಹಿಳಾ ಹೃದ್ರೋಗ ತಜ್ಞೆಡಾ. ವಿಜಯಲಕ್ಷ್ಮಿ ಬಾಳೆಕುಂದ್ರಿ ಅವರು ಮಕ್ಕಳ ಪ್ರತಿಭೆಯನ್ನು ಶ್ಲಾಘಿಸಿ,



ಚಿಕ್ಕ ವಯಸ್ಸಿನಲ್ಲಿಯೇ ಕನ್ನಡ ಸಾಹಿತ್ಯದ ಅಭಿರುಚಿ ಬೆಳೆಸುವ ಇಂತಹ ವೇದಿಕೆಗಳು ಅಗತ್ಯವೆಂದರು. ಇದೇ ಸಂದರ್ಭದಲ್ಲಿ ದಿವಂಗತ ಬಿ. ವಿಜಯಕುಮಾರ್ (ಸಂಸ್ಥಾಪಕರು, ಎಚ್.ಎ.ಎಲ್ ಕನ್ನಡ ಸಂಘ) ಅವರ ಸ್ಮರಣಾರ್ಥ ನೀಡುವ ಕನ್ನಡ ರತ್ನ ಪ್ರಶಸ್ತಿ ಅನ್ನು ಅವರಿಗೆ ಪ್ರದಾನ ಮಾಡಲಾಯಿತು. ಕವನ ವಾಚನ ಮಾಡಿದ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಹಾಗೂ ಗೌರವ ನೀಡಿ ಅಭಿನಂದಿಸಲಾಯಿತು.

2008ರ ಸೆಪ್ಟೆಂಬರ್‌ನಲ್ಲಿ ಸ್ಥಾಪನೆಯಾದ ಯುವ ಬೆಂಗಳೂರು ಟ್ರಸ್ಟ್, ಒಂದು ಸರ್ಕಾರಿ ಶಾಲೆಯಿಂದ ಆರಂಭಿಸಿ ಇಂದು ಕರ್ನಾಟಕದ 356 ಸರ್ಕಾರಿ ಶಾಲೆಗಳ ಮಕ್ಕಳ ಅಭಿವೃದ್ಧಿಗೆ ಶ್ರಮಿಸುತ್ತಿದೆ.

ಶಿಕ್ಷಣದ ಜೊತೆಗೆ ಮಕ್ಕಳ ಆರೋಗ್ಯ, ಆತ್ಮವಿಶ್ವಾಸ, ಸೃಜನಶೀಲತೆ ಹಾಗೂ ಜೀವನ ಕೌಶಲ್ಯಗಳ ವೃದ್ಧಿಗೆ ಸಂಸ್ಥೆ ಆದ್ಯತೆ ನೀಡುತ್ತಿದೆ. ಕಾರ್ಯಕ್ರಮದಲ್ಲಿ ಟ್ರಸ್ಟ್ ಸ್ಥಾಪಕ ಜಿ. ಕಿರಣ್ ಸಾಗರ್, ಟ್ರಸ್ಟಿಗಳಾದ ಶ್ವೇತಾ ಎಸ್. ರಾವ್, ಬಿ.ವಿ. ಸುನಿಲ್ ಹಾಗೂ ಶಿಕ್ಷಣ ನಿರ್ದೇಶಕ ರಾಹುಲ್ ಆರ್. ಉಪಸ್ಥಿತರಿದ್ದರು. ಮಕ್ಕಳಲ್ಲಿನ ಸುಪ್ತ ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಕನ್ನಡ ಸಾಹಿತ್ಯದ ಮುಂದಿನ ಪೀಳಿಗೆಯನ್ನು ರೂಪಿಸುವ ಪ್ರಯತ್ನಕ್ಕೆ ಕಾರ್ಯಕ್ರಮ ಸಾಕ್ಷಿಯಾಯಿತು.

ಯುವ ಬೆಂಗಳೂರು ಟ್ರಸ್ಟ್ ವೆಬ್‌ಸೈಟ್: www.yuvabengaluru.org, ಸಂಪರ್ಕ: 95913 26819

ಕೃಷಿ, ಪಶು ವೈದ್ಯಕೀಯ ಉಳಿಕೆ ಸೀಟುಗಳಿಗೆ ನ.18ರಿಂದ ಮತ್ತೊಂದು ಸುತ್ತು ಕೌನ್ಸೆಲಿಂಗ್

ಬೆಂಗಳೂರು, ನ.14: ಬಿಎಸ್ಸಿ ಕೃಷಿ, ಪಶು ವೈದ್ಯಕೀಯ ಮತ್ತು ಮೀನುಗಾರಿಕೆ ಕೋರ್ಸ್ ಗಳಲ್ಲಿ ಇನ್ನೂ ಸುಮಾರು 290 ಸೀಟು ಬಾಕಿ ಉಳಿದಿದ್ದು, ಅವುಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನ.18ರಿಂದ ಮತ್ತೊಂದು ಸುತ್ತಿನ ಕೌನ್ಸೆಲಿಂಗ್ ನಡೆಸಲು ತೀರ್ಮಾನಿಸಿದೆ.

ಉಳಿಕೆ ಸೀಟುಗಳ ಭರ್ತಿಗೆ ಕೃಷಿ ಮತ್ತು ಪಶು ವೈದ್ಯಕೀಯ ವಿಶ್ವವಿದ್ಯಾಲಯ ಕೋರಿಕೆ ಸಲ್ಲಿಸಿದ್ದು ಆ ಪ್ರಕಾರ ಸೀಟು ಹಂಚಿಕೆ ಪ್ರಕ್ರಿಯೆ ನಡೆಯಲಿದೆ.

ನ. 18ರಂದು ಉಳಿಕೆ ಸೀಟುಗಳ ವಿವರ ಪ್ರಕಟಿಸಲಾಗುತ್ತದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ. ಈಗಾಗಲೇ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆದಿರುವ ಅರ್ಹರು ಸಂಬಂಧಪಟ್ಟ ಕಾಲೇಜುಗಳಿಂದ ನಿರಾಕ್ಷೇಪಣಾ ಪತ್ರ ಪಡೆದುಕೊಂಡು ಬಂದು ಕೆಇಎಗೆ ಕೊಟ್ಟ ನಂತರವೇ ಆಪ್ಷನ್ಸ್ ದಾಖಲಿಸಲು ಅವಕಾಶ ನೀಡಲಾಗುವುದು. ಹಾಗೆಯೇ ಕೋರ್ಸ್ ಸೇರಲು ಇಚ್ಛಿಸುವವರು ಕಡ್ಡಾಯವಾಗಿ 35 ಸಾವಿರ ಮುಂಗಡವಾಗಿ ಪಾವತಿಸಬೇಕು ಎಂದು ಹೇಳಿದ್ದಾರೆ. ಕೃಷಿ ವಿಜ್ಞಾನ ಹಾಗೂ ಪಶು ವೈದ್ಯಕೀಯ ಕೋರ್ಸ್‌ಗಳಿಗೆ ಸೀಟು ಹಂಚಿಕೆ ಮಾಡಿಕೊಂಡು, ನಂತರ ರದ್ದುಪಡಿಸಿಕೊಂಡವರು ಪುನಃ ಅದೇ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅವಕಾಶ ಇರುವುದಿಲ್ಲ. ಹಾಗೆಯೇ ವೈದ್ಯಕೀಯ, ದಂತ ವೈದ್ಯಕೀಯ, ಆಯುಷ್ ಕೋರ್ಸ್ ಗಳಿಗೆ ಸೇರಿರುವ ಹಾಗೂ 4ನೇ ಸುತ್ತು ಮತ್ತು ನಂತರದ ಸುತ್ತುಗಳಲ್ಲಿ ಸೀಟು ಹಂಚಿಕೆಯಾದವರು ಕೂಡ ಈ ಸುತ್ತಿನಲ್ಲಿ ಸೀಟು ಪಡೆಯಲು ಅರ್ಹರಿರುವುದಿಲ್ಲ ಎಂದು ಅವರು ವಿವರಿಸಿದ್ದಾರೆ.

ಆರೋಗ್ಯ ಸಿಟಿಯಾಗಿ ಬೆಂಗಳೂರು ನಿರ್ಮಾಣ ಗುರಿ: 2 ವರ್ಷ 12 ಲಕ್ಷ ಮಂದಿಗೆ ರೋಗ ತಪಾಸಣೆ

ಬೆಂಗಳೂರು, ನ.14: ಬೆಂಗಳೂರನ್ನು ಆರೋಗ್ಯ ಸಿಟಿ ಯನ್ನಾಗಿ ನಿರ್ಮಿಸುವ ಉದ್ದೇಶದಿಂದ ಕಳೆದ ಎರಡು ವರ್ಷಗಳಲ್ಲಿ 12 ಲಕ್ಷ ಬೆಂಗಳೂರಿಗರಿಗೆ ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆ, ಆರಂಭಿಕ ಪತ್ತೆ ಮತ್ತು ತಡೆಗಟ್ಟುವ ಆರೋಗ್ಯ ಸೇವೆಗಳನ್ನು ಒದಗಿಸಲಾಗಿದೆ.

ಆರೋಗ್ಯ ವರ್ಲ್ಡ್ ಹಾಗೂ ಬೆಂಗಳೂರು ಪೊಲಿಟಿಕಲ್ ಆಕ್ಷನ್ ಕಮಿಟಿ – ಬಿ ಪ್ಯಾಕ್ ಸಹಭಾಗಿತ್ವದಲ್ಲಿ ಶುಕ್ರವಾರ ಆಯೋಜಿಸಿದ್ದ ಆರೋಗ್ಯ ಸಿಟಿ ಸಮ್ಮಿಟ್ 2026ರ 3ನೇ ಆವೃತ್ತಿ ಕಾರ್ಯಕ್ರಮದಲ್ಲಿ ಈ ಅಂಕಿ ಅಂಶಗಳನ್ನು ಪ್ರಕಟಿಸಲಾಯಿತು.

ಮಧುಮೇಹ, ಅಧಿಕ ರಕ್ತದೊತ್ತಡ, ಸ್ಥೂಲಕಾಯತೆ, ಕ್ಯಾನ್ಸರ್ ಸೇರಿದಂತೆ ಜೀವನಶೈಲಿಗೆ ಸಂಬಂಧಿಸಿದ ಸಾಂಕ್ರಾಮಿಕವಲ್ಲದ ರೋಗಗಳನ್ನು ತಡೆಗಟ್ಟುವ ಉದ್ದೇಶದಿಂದ ಹಾಗೂ ಬೆಂಗಳೂರನ್ನು ವಿಶ್ವದಲ್ಲಿಯೇ ಮೊದಲ ಆರೋಗ್ಯ ಸಿಟಿಯನ್ನಾಗಿ ಮಾಡುವ ಗುರಿ ಯೊಂದಿಗೆ ಈಗಾಗಲೇ 12 ಲಕ್ಷ



ಬೆಂಗಳೂರಿಗರನ್ನು ತಲುಪಲಾಗಿದೆ.

ಪ್ರಮುಖವಾಗಿ, ಆರೋಗ್ಯ ಸಿಟಿ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 32 ಸಂಸ್ಥೆಗಳು 2024ರಿಂದ 2026ರವರೆಗೆ 12 ಲಕ್ಷ ಬೆಂಗಳೂರಿಗರಿಗೆ ಸಾಂಕ್ರಾಮಿಕವಲ್ಲದ ರೋಗಗಳ (NCD) ತಪಾಸಣೆ, ಆರಂಭಿಕ ಪತ್ತೆ ಮತ್ತು ತಡೆಗಟ್ಟುವ ಆರೋಗ್ಯ ಸೇವೆಗಳನ್ನು ಒದಗಿಸಿವೆ.

ಒನ್ ವಾರ್ಡ್ ಉಪಕ್ರಮಕ್ಕೆ ಚಾಲನೆ: ವಾರ್ಡ್ ಮಟ್ಟದಲ್ಲಿಯೇ ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆ ಹೆಚ್ಚಿಸುವುದು ಹಾಗೂ ಈ ಕುರಿತ ಮಾಹಿತಿ ಸಂಗ್ರಹಿಸುವುದು ಈ ಉಪಕ್ರಮದ ಉದ್ದೇಶವಾಗಿದೆ. 3ನೇ ಆವೃತ್ತಿಯಲ್ಲಿ 40 ಸಂಸ್ಥೆಗಳು ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆಗೆ ಮುಂದಾಗಿದ್ದು, 15 ಲಕ್ಷಕ್ಕೂ ಹೆಚ್ಚು ಬೆಂಗಳೂರಿಗರನ್ನು ತಲುಪುವ ಗುರಿ ಹೊಂದಿವೆ.

ಆರೋಗ್ಯ ವರ್ಲ್ಡ್‌ನ ಸಂಸ್ಥಾಪಕಿ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ನಳಿನಿ ಸಾಲಿಗ್ರಾಮ ಮಾತನಾಡಿ, ಎಲ್ಲರ ಆರೋಗ್ಯ ಸುಧಾರಣೆ ಕೇವಲ ಒಂದು ಸಂಸ್ಥೆಯ ಹೊಣೆಗಾರಿಕೆಯಾಗಬಾರದು. ಸರ್ಕಾರ, ಕಂಪನಿಗಳು, ನಾಗರಿಕ ಸಮಾಜ, ಶಿಕ್ಷಣ ಸಂಸ್ಥೆಗಳು, ಸ್ಟಾರ್ಟ್‌ಅಪ್‌ಗಳು ಸೇರಿದಂತೆ ವಿವಿಧ ಸಮುದಾಯಗಳು ಒಟ್ಟಾಗಿ ಕೆಲಸ ಮಾಡಬೇಕಾಗಿದೆ.

ಈಗಾಗಲೇ 12 ಲಕ್ಷ ಜನರನ್ನು ತಲುಪಿದ್ದು, ಮುಂದಿನ ವರ್ಷದಲ್ಲಿ 15 ಲಕ್ಷ ಜನರನ್ನು ತಪಾಸಣೆಗೆ ಒಳಪಡಿಸುವುದು ನಮ್ಮ ಗುರಿ ಎಂದರು.

ಸ್ಪರ್ಶ್ ಆಸ್ಪತ್ರೆಯ ಇಂಟರ್ವೆನ್ಷನಲ್ ಪಲ್ಮನಾಲಜಿ ಮತ್ತು ಪ್ಯಾಲಿಯೇಟಿವ್ ಮೆಡಿಸಿನ್ ಸಲಹಾ ತಜ್ಞೆಡಾ. ರಜನಿ ಸುರೇಂದರ್ ಭಟ್ ಹಾಗೂ ಸೇಂಟ್ ಜಾನ್ಸ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಸಮುದಾಯ ವೈದ್ಯಕೀಯ ವಿಭಾಗದ ಎಂ.ಡಿ. ಡಾ. ಅರವಿಂದ್ ಕಸ್ತೂರಿ ಅವರು ಚರ್ಚಾಗೋಷ್ಠಿಯಲ್ಲಿ ಭಾಗವಹಿಸಿ, ಸಾಂಕ್ರಾಮಿಕವಲ್ಲದ ರೋಗಗಳ ತಡೆಗಟ್ಟುವಿಕೆಯಲ್ಲಿ ವೈದ್ಯರ ಪಾತ್ರದ ಕುರಿತು ಚರ್ಚಿಸಿದರು

ರೈತರ ಟನ್ ಕಬ್ಬಿಗೆ 4 ಸಾವಿರ ರೂ. ನೀಡಲು ಖೂಬಾ ಆಗ್ರಹ



ಬೀದರ್, ನ.14–ಜಿಲ್ಲಾ ರೈತ ಸಂಘದಿಂದ ಕಬ್ಬಿನ ಬೆಲೆ ನಿಗದಿಗೆ ಆಗ್ರಹಿಸಿ, ಕಳೆದ 3 ದಿವಸಗಳಿಂದ ನಗರದ ಉಸ್ತುವಾರಿ ಸಚಿವರ ಕಚೇರಿ ಎದುರುಗಡೆ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ, ರೈತರು ಪ್ರತಿ ಟನ್ ಕಬ್ಬಿಗೆ 4 ಸಾವಿರ ರೂ. ಬೇಡಿಕೆ ಇಟ್ಟಿರುವುದು ಸಮಂಜಸವಾದ ಬೇಡಿಕೆಯಾಗಿದ್ದು, ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಮುಂದಾಳತ್ವ ವಹಿಸಿ ಟನ್ ಕಬ್ಬಿಗೆ 4000 ರೂ.ನೀಡಬೇಕೆಂದು ಒತ್ತಾಯಿಸಿದರು.

ನನಗೆ ಈಶ್ವರ ಖಂಡ್ರೆ ಮೇಲೆ ಯಾವುದೇ ವೈಯಕ್ತಿಕ ದ್ವೇಷವಿಲ್ಲಾ, ಆದರೆ ಇವರ ಕುಟುಂಬ ಜಿಲ್ಲೆಯಲ್ಲಿ 60 ವರ್ಷಗಳಿಂದ ರಾಜಕಾರಣ ಮಾಡುತ್ತಿದೆ, ಬೀದರ ಜಿಲ್ಲೆ ಹಿಂದುಳಿಯಲು ಕಾರಣರಾಗಿದ್ದಾರೆ, ಜಿಲ್ಲೆಯ ರೈತರು ಸಂಕಷ್ಟದಲ್ಲಿರಲು ಖಂಡ್ರೆ ಕುಟುಂಬ ಕಾರಣವಾಗಿದೆ ಆದ್ದರಿಂದ ನನಗೆ ಈಶ್ವರ ಖಂಡ್ರೆ ಹೆಸರು ಕೇಳಿದರೆ ನನಗೆ ಸಿಟ್ಟು ಬರುತ್ತದೆ, ನನ್ನನ್ನು ಪ್ರತಿಭಟನೆಗಳಿಗೆ ಕರೆಯಿಸಬೇಡಿ, ಕರೆಯಿಸಿ ಬಯ್ಯಿಸಬೇಡಿ ಎಂದು ಸಚಿವ ಈಶ್ವರ ಖಂಡ್ರೆಯವರು ರೈತ ಮುಖಂಡರಿಗೆ ತಾಕಿತು ಮಾಡುವುದು ಬಿಡಬೇಕು, ಯಾಕೆಂದರೆ ನಾನು ರೈತ ಕುಟುಂಬದಲ್ಲಿ ಬೆಳೆದವನು, ರೈತರ ಸಂಕಷ್ಟಗಳಿಗೆ ಸ್ಪಂದಿಸುವುದು ನನ್ನ ಕರ್ತವ್ಯವಿದೆ, ನನಗೆ ಯಾರ ಆಹ್ವಾನವು ಅವಶ್ಯಕತೆಯಿಲ್ಲ, ಆದರೆ ಖಂಡ್ರೆ ಸದಾ ರೈತರಿಗೆ ಸಂಕಷ್ಟದಲ್ಲಿಡುವುದು ಬಿಡಬೇಕು. ಬೆಳಗಾವಿಯಲ್ಲಿ ಪ್ರತಿ ಟನ್ ಕಬ್ಬಿಗೆ 3800 ರಿಂದ 4100 ರೂ. ಟನ್ ಕಬ್ಬಿಗೆ ಬೆಲೆ ನೀಡಲಾಗುತ್ತಿದೆ, ಬೆಳಗಾವಿ ಮಾದರಿಯಲ್ಲಿ ಬೀದರ ಜಿಲ್ಲೆಯ ರೈತರಿಗೂ 4000 ರೂ. ಟನ್ ಕಬ್ಬಿಗೆ ಬೆಲೆ ನಿಡಬೇಕು, ಈ ಬೆಲೆ ಮೊದಲು ಅವರ ಸಹೋದರನ ಮಹಾತ್ಮಾ ಗಾಂಧಿ ಸಕ್ಕರೆ ಕಾರ್ಖಾನೆಯಿಂದ ಪ್ರಾರಂಭವಾಗಬೆಕೆಂದು ಒತ್ತಾಯಿಸಿದರು.

ಡಿ.ಸಿ.ಸಿ. ಬ್ಯಾಂಕ್ ಇದ್ದು ಸತ್ತಂತಾಗಿದೆ, ರೈತರಿಗೆ, ಸ್ವಸಹಾಯ ಸಂಘದವರಿಗೆ ಸಾಲ ನೀಡುತ್ತಿಲ್ಲಾ, ನಿಜವಾಗಿಯೂ ಸಚಿವ ಖಂಡ್ರೆಗೆ ರೈತರ ಮೇಲೆ ಕಾಳಜಿಯಿದ್ದರೆ ಕೂಡಲೆ ಅವರ ತಮ್ಮನಿಗೆ ಡಿ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಕುರ್ಚಿಯಿಂದ ಕೆಳಗಿಳಿಸಬೇಕೆಂದು ಆಗ್ರಹಿಸಿದರು.

ಜಿಲ್ಲೆಯ ರೈತರ ಹಿತ ಕಾಪಾಡಲು ನೀವು ಅಯೋಗ್ಯರಾಗಿದ್ದಿರಿ ಮತ್ತು ನಿಮ್ಮ ಆಡಳಿತದಲ್ಲಿ ಭ್ರಷ್ಟಾಚಾರ ತಾಂಡವ ವಾಡುತ್ತಿದೆ ಎಂದು ಆಕ್ರೋಶ ಹೊರಹಾಕಿದರು.

ಫಸಲ್ ಬಿಮಾ ಯೋಜನೆಯಡಿ ರಾಜ್ಯ ಸರ್ಕಾರದ ಪಾಲು ಬೀದರ ಜಿಲ್ಲೆಗೆ ಸಂಬಂಧಿಸಿದ 51 ಕೊಟಿ 65 ಲಕ್ಷ ರೂ.ಇನ್ಸುರೆನ್ಸ್ ಕಂಪನಿಯವರಿಗೆ ಇಲ್ಲಿಯವರೆಗೆ ಪಾವತಿಸಿಲ್ಲ. ಮತ್ತು ಈ ವರ್ಷ ಬೆಳೆ ಹಾಳಾಗಿದ್ದು ಸುಮಾರು 284 ಕೋಟಿ ಪರಿಹಾರ ಬರಬೆಕು, ಈ ಪರಿಹಾರ ಬರದೆ ಹೊದರೆ ಇದಕ್ಕೆ ಈಶ್ವರ ಖಂಡ್ರೆ ಕಾರಣ ಆಗುತ್ತಾರೆ ಎಂದರು.

ಮೋದಿ ಸರ್ಕಾರ ಬಂದ ಮೇಲೆ ಎಮ್.ಎಸ್.ಪಿ ಬೆಲೆ ಹೆಚ್ಚಿಸಿದೆ, ಖರೀದಿ ಕೇಂದ್ರಗಳು ತೆರೆದಿವೆ, ನಾನು 2014ಕ್ಕಿಂತ ಮುಂಚೆ ತೊಗರಿ ಬೆಲೆ 2000 ದಿಂದ 2400 ಇತ್ತು, ಇವತ್ತು 7 ರಿಂದ 8 ಸಾವಿರ ಆಗಿದೆ, ನಿಮ್ಮೆಲ್ಲರ ಕಾಳಜಿ ನನಗೆ ಮತ್ತು ನಮ್ಮ ಮೋದಿ ಸರ್ಕಾರಕ್ಕಿದೆ ಎಂದರು ನಾನು ಸದಾಕಾಲ ನಿಮ್ಮೆಲ್ಲರೊಂದಿಗೆ ತನು–ಮನ–ಧನದಿಂದ ಇರುತ್ತೇನೆ ಎಂದರು.

ರೈತರ ಕಬ್ಬಿನ ದರ ವಿಚಾರದಲ್ಲಿ ಸರ್ಕಾರದಿಂದ ಸರ್ವ ಪ್ರಯತ್ನ: ಸಚಿವ ಪ್ರಿಯಾಂಕ್ ಖರ್ಗೆ



ಕಲಬುರಗಿ, ನ. 14: ಕಬ್ಬಿನ ದರ ನಿಗದಿ ವಿಚಾರವಾಗಿ ರಾಜ್ಯ ಸರ್ಕಾರ ಈಗಾಗಲೇ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಿದೆ. ಬೆಳಗಾವಿ ಜಿಲ್ಲೆಯಲ್ಲಿ ನೀಡುವ ದರವನ್ನು ಕಲ್ಯಾಣ ಕರ್ನಾಟಕ ಭಾಗದಲ್ಲಿ ನೀಡಲು ಸಾಧ್ಯವಿಲ್ಲ. ಏಕೆಂದರೆ ಎರಡೂ ಭಾಗಗಳಲ್ಲಿನ ಕಬ್ಬಿನ ಇಳುವರಿ ವಿಭಿನ್ನವಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿಯಲ್ಲಿ ನೀಡುವ ಕಬ್ಬಿನ ದರವನ್ನು ನಮ್ಮ ಭಾಗದಲ್ಲಿ ಯಾವತ್ತೂ ನೀಡಿಲ್ಲ. ಅಲ್ಲಿನ ಇಳುವರಿಯೇ ಬೇರೆ, ನಮ್ಮ ಭಾಗದ ಇಳುವರಿಯೇ ಬೇರೆ. ರಾಜ್ಯ ಸರ್ಕಾರ ತನ್ನ ಕಡೆಯಿಂದ ಎಲ್ಲಾ ಪ್ರಯತ್ನಗಳನ್ನು ಮಾಡಿದೆ. ಇನ್ನು ನಾವೇನು ಮಾಡಬೇಕು ಹೇಳಿ? ರೈತರು ಯಾರ ಪ್ರಚೋದನೆಗೂ ಒಳಗಾಗಬಾರದು. ರೈತರು ಒಂದು ಹೆಜ್ಜೆ ಮುಂದೆ ಬಂದರೆ ಸರ್ಕಾರವೂ ಒಂದು ಹೆಜ್ಜೆ ಮುಂದೆ ಬರಲಿದೆ ಎಂದು ಹೇಳಿದರು.

ನಿಗಮ–ಮಂಡಳಿಗಳಿಗೆ ನೇಮಕಾತಿ ಮಾಡುವ ಸಂದರ್ಭದಲ್ಲಿ ಕೆಲವು ಲೋಪಗಳಾಗಿವೆ ಎಂದು ಸೋಲೊಪ್ಪಿಕೊಂಡ ಸಚಿವ ಪ್ರಿಯಾಂಕ್ ಖರ್ಗೆ, ಈ ನೇಮಕಾತಿ ಪಟ್ಟಿ ಒಂದೂವರೆ ವರ್ಷದ ಹಿಂದೆಯೇ ಸಿದ್ಧವಾಗಿತ್ತು. ಶಾಸಕರಿಗೆ ಹೆಚ್ಚಿನ ಆಯ್ಕೆಯ ಅವಕಾಶ ನೀಡಲಾಗಿತ್ತು. ಕೆಲವು ಕಡೆ ಆರ್‌ಎಸ್‌ಎಸ್ ಕಾರ್ಯಕರ್ತರಿಗೆ ಸ್ಥಾನ ನೀಡಲಾಗಿದೆ ಎಂಬ ಆರೋಪಗಳಿವೆ. ಆದರೆ, ಅವರು ಎಂದೋ ಆರ್‌ಎಸ್‌ಎಸ್ ತೊರೆದು ಬಂದಿರಬಹುದು ಎಂದರು.

ಬೆಳಗಾವಿಯ ಚಳಿಗಾಲದ ಅಧಿವೇಶನಕ್ಕೆ ಹೆಸ್ಕಾಂ ಸಕಲ ಸಿದ್ಧತೆ

ಸುವರ್ಣಸೌಧಕ್ಕೆ ನಿರಂತರ ವಿದ್ಯುತ್ ಪೂರೈಕೆಗಾಗಿ ವಿಶೇಷ ವ್ಯವಸ್ಥೆ



ಬೆಳಗಾವಿ/ಬೆಂಗಳೂರು, ನ.14: ರಾಜ್ಯದ ಆಡಳಿತಾತ್ಮಕ ಪ್ರಮುಖ ಕೇಂದ್ರವಾಗಿರುವ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 2 ರಿಂದ 11ರವರೆಗೆ ನಡೆಯಲಿರುವ ಚಳಿಗಾಲದ ಅಧಿವೇಶನಕ್ಕೆ ನಿರಂತರ, ಗುಣಮಟ್ಟದ ಹಾಗೂ ವಿಶ್ವಾಸಾರ್ಹ ವಿದ್ಯುತ್ ಪೂರೈಕೆ ಕಲ್ಪಿಸಲು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ಸಕಲ ರೀತಿಯಲ್ಲಿ ಸಜ್ಜಾಗಿದೆ.

ಅಧಿವೇಶನದ ಹತ್ತು ದಿನಗಳ ಅವಧಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಮುನ್ನೆಚ್ಚರಿಕೆ ವಹಿಸಿರುವ ಹೆಸ್ಕಾಂ, ಸುವರ್ಣಸೌಧ ಸೇರಿದಂತೆ ಬೆಳಗಾವಿ ನಗರದ ಪ್ರಮುಖ ಪ್ರದೇಶಗಳ ವಿದ್ಯುತ್ ವಿತರಣಾ ವ್ಯವಸ್ಥೆಯನ್ನು ಸುಸ್ಥಿತಿಯಲ್ಲಿಡಲು ವಿಶೇಷ ನಿರ್ವಹಣಾ ಕಾರ್ಯಾಚರಣೆಗೆ ಚಾಲನೆ ನೀಡಿದೆ.

ಅಧಿವೇಶನಕ್ಕೆ ಆಗಮಿಸುವ ಗಣ್ಯರು, ಜನಪ್ರತಿನಿಧಿಗಳು, ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವಿದ್ಯುತ್ ವ್ಯವಸ್ಥೆಯನ್ನು ಸಜ್ಜುಗೊಳಿಸುವುದು ಹೆಸ್ಕಾಂನ ಪ್ರಮುಖ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ವಿದ್ಯುತ್ ಮಾರ್ಗಗಳ ಪರಿಶೀಲನೆ, ನಿರ್ವಹಣೆ ಹಾಗೂ ಅಗತ್ಯ ದುರಸ್ತಿ ಕಾರ್ಯಗಳಿಗೆ ಆದ್ಯತೆ ನೀಡಲಾಗಿದ್ದು, ಸಂಭವನೀಯ ತಾಂತ್ರಿಕ ದೋಷಗಳು ಮತ್ತು ವಿದ್ಯುತ್ ವ್ಯತ್ಯಯಗಳನ್ನು ಮುಂಚಿತವಾಗಿಯೇ ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿದೆ.


ಈ ಕಾರ್ಯಾಚರಣೆಯ ಭಾಗವಾಗಿ ಹೆಸ್ಕಾಂ ಹಾಗೂ ಕೆಪಿಟಿಸಿಎಲ್ ವತಿಯಿಂದ ಈ ವಾರದಲ್ಲಿ ನಿರ್ವಹಣಾ ಕಾರ್ಯವನ್ನು ಕೈಗೊಳ್ಳಲಾಗುತ್ತಿದ್ದು, ನವೆಂಬರ್ 14ರಂದು ಸುವರ್ಣಸೌಧದ ಫೀಡರಗಳಿಗೆ ಸಂಬಂಧಿಸಿದಂತೆ ನಿರ್ವಹಣಾ ಕಾರ್ಯ ಕೈಗೊಂಡಿದ್ದು, ಈ ಕುರಿತು ಮುಂಚಿತವಾಗಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಚಳಿಗಾಲದ ಅಧಿವೇಶನಕ್ಕೆ ಯಾವುದೇ ಅಡಚಣೆಯಿಲ್ಲದೆ ನಿರಂತರ, ಗುಣಮಟ್ಟದ ಹಾಗೂ ವಿಶ್ವಾಸಾರ್ಹ ವಿದ್ಯುತ್ ಪೂರೈಕೆ ಕಲ್ಪಿಸುವುದು ಹೆಸ್ಕಾಂನ ಪ್ರಮುಖ ಆದ್ಯತೆಯಾಗಿದೆ. ಸುವರ್ಣಸೌಧದಕ್ಕೆ ಸಂಬಂಧಿಸಿದಂತೆ ವಿದ್ಯುತ್ ಬಳಕೆಯ ಬಿಲ್‌ಗಳು ಕಾಲಕಾಲಕ್ಕೆ ನಿಗದಿತ ಅವಧಿಯೊಳಗೆ ನಿಯಮಿತವಾಗಿ ಸಂದಾಯವಾಗುತ್ತಿದೆ ಹಾಗೂ ಯಾವುದೇ ರೀತಿಯ ಸಮಸ್ಯೆಯಿರುವುದಿಲ್ಲ. ಈ ಕಾರಣಕ್ಕಾಗಿ ಯಾವುದೇ ರೀತಿಯ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವುದಿಲ್ಲ.

ಸುವರ್ಣಸೌಧಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸುವ ಪ್ರಮುಖ ವಿದ್ಯುತ್ ಮಾರ್ಗಗಳಾದ ಬಸವೇಶ್ವರ ಸರ್ಕಲ್, ಹರಿಕಾಕಾ ಕಾಂಪೌಂಡ್ ಹಾಗೂ ಯಡಿಯೂರಪ್ಪ ರಸ್ತೆ ಫೀಡರ್‌ಗಳ ಸಮಗ್ರ ಪರಿಶೀಲನೆ, ನಿರ್ವಹಣೆ ಮತ್ತು ಅಗತ್ಯ ದುರಸ್ತಿ ಕಾರ್ಯಗಳನ್ನು ವ್ಯವಸ್ಥಿತವಾಗಿ ನಿರ್ವಹಿಸಲಾಗಿದೆ. ಈ ಮೂಲಕ ವಿದ್ಯುತ್ ವಿತರಣಾ ಜಾಲದ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದರ ಜತೆಗೆ ಅಧಿವೇಶನದ ಸಂದರ್ಭದಲ್ಲಿ ನಿರಂತರ ವಿದ್ಯುತ್ ಪೂರೈಕೆಗೆ ಅಗತ್ಯ ತಾಂತ್ರಿಕ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ವಿದ್ಯುತ್ ವ್ಯವಸ್ಥೆಯಲ್ಲಿ ಉಂಟಾಗಬಹುದಾದ ಸಂಭಾವ್ಯ ತಾಂತ್ರಿಕ ದೋಷಗಳನ್ನು ಮೊದಲ ಹಂತದಲ್ಲಿಯೇ ಗುರುತಿಸಿ ಪರಿಹರಿಸುವುದರ ಜತೆಗೆ, ಯಾವುದೇ ತುರ್ತು ಪರಿಸ್ಥಿತಿ ಎದುರಾದರೂ ತಕ್ಷಣ ಸ್ಪಂದಿಸಿ ವಿದ್ಯುತ್ ಪೂರೈಕೆಯನ್ನು ಪುನಃಸ್ಥಾಪಿಸಲು ಅಧಿಕಾರಿಗಳು ಮತ್ತು ಸಿಬ್ಬಂದಿ ಸಂಪೂರ್ಣ ಸನ್ನದ್ಧರಾಗಿರಬೇಕು. ಸಾರ್ವಜನಿಕರಿಗೆ ಹಾಗೂ ಅಧಿವೇಶನದ ಕಾರ್ಯಕಲಾಪಗಳಿಗೆ ನಿರಂತರ ವಿದ್ಯುತ್ ಸೇವೆ ಒದಗಿಸುವ ನಿಟ್ಟಿನಲ್ಲಿ ಹೆಸ್ಕಾಂ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಂಡಿದೆ.

ಚಳಿಗಾಲದ ಅಧಿವೇಶನ ಸುಗಮವಾಗಿ ನಡೆಯಲು ಅಗತ್ಯವಿರುವ ವಿದ್ಯುತ್ ಮೂಲಸೌಕರ್ಯವನ್ನು ಸಜ್ಜುಗೊಳಿಸುವಲ್ಲಿ ಹೆಸ್ಕಾಂ ಕಾರ್ಯಪ್ರವೃತ್ತವಾಗಿದ್ದು, ಮುನ್ನೆಚ್ಚರಿಕೆ, ಸಮರ್ಪಕ ನಿರ್ವಹಣೆ ಹಾಗೂ ತ್ವರಿತ ಸ್ಪಂದನೆಯ ಮೂಲಕ ನಿರಂತರ ಮತ್ತು ವಿಶ್ವಾಸಾರ್ಹ ವಿದ್ಯುತ್ ಸೇವೆ ಒದಗಿಸಲು ಬದ್ಧವಾಗಿದೆ ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ: ವಿಶೇಷ ಯೋಜನೆ ರೂಪಿಸಿ ಅನುಷ್ಠಾನಗೊಳಿಸಿ: ಡಿಸಿ ಇಕ್ರಮ್ ಶರೀಫ್



ಕಲಬುರಗಿ, ನ. 14: ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಬಡ, ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳ ಭವಿಷ್ಯ ರೂಪಿಸುವ ಮಹತ್ತರ ಜವಾಬ್ದಾರಿ ಶಿಕ್ಷಕರ ಮೇಲಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆಯ ಫಲಿತಾಂಶ ಕೇವಲ ಅಂಕಗಳ ದೃಷ್ಟಿಯಿಂದ ನೋಡದೆ, ಮಕ್ಕಳ ಬದುಕಿನಲ್ಲಿ ಬದಲಾವಣೆ ತರುವ ಉದ್ದೇಶದಿಂದ ಪ್ರತಿಯೊಬ್ಬ ಶಿಕ್ಷಕರು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ಸರ್ಕಾರಿ ನೌಕರರಿಗೆ ಮಾಸಿಕ ವೇತನದ ಭದ್ರತೆ ಇದೆ. ಆದರೆ ಸರ್ಕಾರಿ ಶಾಲೆಗಳಿಗೆ ಬರುವ ಬಹುತೇಕ ಮಕ್ಕಳು ಬಡವರು, ನಿರುದ್ಯೋಗಿಗಳು, ಗ್ರಾಮೀಣ ಹಾಗೂ ಅನಕ್ಷರಸ್ಥ ಕುಟುಂಬಗಳ ಹಿನ್ನೆಲೆಯಿಂದ ಬಂದವರಾಗಿರುತ್ತಾರೆ. ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಪಾಲಕರು ಸಾಕಷ್ಟು ಕನಸುಗಳನ್ನು ಕಟ್ಟಿಕೊಂಡಿರುತ್ತಾರೆ. ಆ ಕನಸುಗಳನ್ನು ನನಸು ಮಾಡುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದರು.

ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಸಂಕನೂರ್ ಮಾತನಾಡಿ, ವಿದ್ಯಾರ್ಥಿಗಳ ಕಲಿಕಾ ಮಟ್ಟ ಸುಧಾರಣೆ ಹಾಗೂ ಎಸ್.ಎಸ್.ಎಲ್.ಸಿ. ಫಲಿತಾಂಶ ಹೆಚ್ಚಳಕ್ಕಾಗಿ ಶಾಲಾ ಹಂತದಿಂದಲೇ ನಿರಂತರ ಮೇಲ್ವಿಚಾರಣೆ ಮತ್ತು ಪರಿಣಾಮಕಾರಿ ಕಾರ್ಯಯೋಜನೆ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಿದರು.

ಡಯಟ್ ಹಾಗೂ ಇತರೆ ಉಸ್ತುವಾರಿ ಅಧಿಕಾರಿಗಳು ಕಳೆದ ಒಂದು ವಾರದಲ್ಲಿ ಎಲ್ಲಾ ವಿಷಯಗಳ ವಿದ್ಯಾರ್ಥಿಗಳ ಮನೆಗೆಲಸವನ್ನು ಪರಿಶೀಲಿಸಬೇಕು. ಎಲ್ಲಾ ನೋಡಲ್ ಅಧಿಕಾರಿಗಳು ಪ್ರತಿ ವಾರ ಕಡ್ಡಾಯವಾಗಿ ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳ ಕಲಿಕಾ ಪ್ರಗತಿಯನ್ನು ಪರಿಶೀಲಿಸಬೇಕು. ಪ್ರತಿ 15 ದಿನಗಳಿಗೊಮ್ಮೆ ಘಟಕ ಪರೀಕ್ಷೆ ನಡೆಸಬೇಕು. ಈ ಪರೀಕ್ಷೆಗಳ ಫಲಿತಾಂಶ ಹಾಗೂ ಪ್ರಗತಿಯನ್ನು ತಾವು ಖುದ್ದಾಗಿ ಪರಿಶೀಲಿಸುವುದಾಗಿ ತಿಳಿಸಿದರು.

ಪ್ರಗತಿ ಪರಿಶೀಲನೆಗಾಗಿ ಪ್ರತಿ ತಿಂಗಳ ಮೊದಲನೇ ವಾರದಲ್ಲಿ ಕ್ಷೇತ್ರ ಶಿಕ್ಷಣಾಧಿಕಾಯಿರಿಗಳ ಹಾಗೂ ಎರಡನೇ ವಾರದಲ್ಲಿ ನೋಡಲ್ ಅಧಿಕಾರಿಗಳ ಸಭೆ ನಡೆಸಬೇಕು.ಪ್ರತಿದಿನ ಎರಡು ವಿಷಯಗಳಿಗೆ ಮನೆಗೆಲಸ ನೀಡಬೇಕು. ಇದರಲ್ಲಿ ಒಂದು ಭಾಷಾ ವಿಷಯ ಹಾಗೂ ಮತ್ತೊಂದು ಮುಖ್ಯ (ಕೋರ್) ವಿಷಯವಾಗಿರಬೇಕು. ಪ್ರತಿ ವಿಷಯಕ್ಕೆ ಮೂರು ಪ್ರಶ್ನೆಗಳಂತೆ ದಿನಕ್ಕೆ ಒಟ್ಟು ಆರು ಪ್ರಶ್ನೆಗಳನ್ನು ನೀಡಬೇಕು. ಇದರಲ್ಲಿ ಒಂದು ಪ್ರಶ್ನೆಯನ್ನು ಪ್ರಸ್ತುತ ಬೋಧಿಸುತ್ತಿರುವ ಪಾಠದಿಂದ ಹಾಗೂ ಎರಡು ಪ್ರಶ್ನೆಗಳನ್ನು ಹಿಂದಿನ ಪಾಸಿಂಗ್ ಪ್ಯಾಕೇಜ್‌ನಿಂದ ಆಯ್ಕೆ ಮಾಡಬೇಕು ಎಂದು ಸೂಚಿಸಿದರು.

ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಾಲೆಗಳ ಮೇಲ್ವಿಚಾರಣೆಗೆ ನೋಡಲ್ ಅಧಿಕಾರಿಗಳನ್ನು ನಿಯೋಜಿಸುವಂತೆ ಸೂಚಿಸಿದರು. 60 ರಿಂದ 100 ವಿದ್ಯಾರ್ಥಿಗಳಿರುವ ಶಾಲೆಗಳ ಪಟ್ಟಿಯನ್ನು ಸಿದ್ಧಪಡಿಸಬೇಕು. ಇಂತಹ ಶಾಲೆಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳೇ ನೋಡಲ್ ಅಧಿಕಾರಿಗಳಾಗಿರುತ್ತಾರೆ. 100ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ಶಾಲೆಗಳಿಗೆ ಉಪನಿರ್ದೇಶಕರು (ಆಡಳಿತ) ಹಾಗೂ ಡಯಟ್ ಅಧಿಕಾರಿಗಳು ನೋಡಲ್ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ತಿಳಿಸಿದರು.

ಕಡಿಮೆ ವಿದ್ಯಾರ್ಥಿಗಳಿರುವ ಹಾಗೂ ಫಲಿತಾಂಶ ಕುಸಿತ ಕಂಡಿರುವ ಶಾಲೆಗಳ ಬಗ್ಗೆ ವಿಶೇಷ ಗಮನ ಹರಿಸಬೇಕು. 60ಕ್ಕಿಂತ ಕಡಿಮೆ ವಿದ್ಯಾರ್ಥಿಗಳಿದ್ದು, ಕಳೆದ ಸಾಲಿನ ಮೊದಲ ಪರೀಕ್ಷೆಯಲ್ಲಿ ಶೇ.75ಕ್ಕಿಂತ ಕಡಿಮೆ ಫಲಿತಾಂಶ ಪಡೆದಿರುವ ಶಾಲೆಗಳಿಗೆ ವಿಶೇಷ ನೋಡಲ್ ಅಧಿಕಾರಿಗಳನ್ನು ನಿಯೋಜಿಸಿ, ಕಲಿಕಾ ಪ್ರಗತಿ ಸುಧಾರಣೆಗೆ ಕ್ರಮ ಕೈಗೊಳ್ಳಬೇಕು ಎಂದರು.

ಔರಾದ್‌ನಲ್ಲಿ ಕುಡಿಯುವ ನೀರಿನ ಬಿಕ್ಕಟ್ಟು: ಹನಿ ನೀರಿಗೂ ಹಾಹಾಕಾರ



ಬೀದರ್, ನ. 14: ಮಳೆಯ ತೀವ್ರ ಕೊರತೆಯಿಂದ ರಾಜ್ಯದ ಹಲವು ಭಾಗಗಳಲ್ಲಿ ಈ ಚಳಿಗಾಲದಲ್ಲೂ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗುತ್ತಿದೆ. ಅದರಲ್ಲೂ ಬೀದರ್ ಜಿಲ್ಲೆಯ ಔರಾದ್ ಪಟ್ಟಣದಲ್ಲಿ ಕುಡಿಯುವ ನೀರಿಗಾಗಿ ತೀವ್ರ ಸಮಸ್ಯೆ ಉಂಟಾಗಿದ್ದು, ನಿವಾಸಿಗರು ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಒಂದು ಕೊಡ ನೀರು ತುಂಬಿಸಿಕೊಳ್ಳಲು ಗಂಟೆಗಟ್ಟಲೆ ಕಾಯಬೇಕಾದ ದುಸ್ಥಿತಿ ಎದುರಾಗಿದ್ದು, ಮಹಿಳೆಯರು, ಮಕ್ಕಳು, ವಿದ್ಯಾರ್ಥಿಗಳು ಹಾಗೂ ವೃದ್ಧರು ನೀರಿಗಾಗಿ ಪರದಾಡುತ್ತಿದ್ದಾರೆ.

ಮಾಜಿ ಸಚಿವ ಪ್ರಭು ಚೌಹಾಣ್ ಅವರ ಕ್ಷೇತ್ರವಾಗಿರುವ ಔರಾದ್ ಪಟ್ಟಣದ ಬಹುತೇಕ ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರಿದೆ. ಭೀಕರ ಬರಗಾಲದ ಪರಿಣಾಮ ನೀರಿನ ಮೂಲಗಳು ಬತ್ತುತ್ತಿದ್ದು, ಜನರ ದೈನಂದಿನ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಪಟ್ಟಣದ ಹಲವು ಪ್ರದೇಶಗಳಲ್ಲಿ ಬೋರ್‌ವೆಲ್‌ಗಳಿದ್ದರೂ ನಲ್ಲಿಗಳಲ್ಲಿ ಹನಿ ಹನಿಯಾಗಿ ನೀರು ಬರುತ್ತಿದೆ. ಇದರಿಂದ ಜನರು ನೀರಿಗಾಗಿ ಗಂಟೆಗಟ್ಟಲೆ ಕಾಯುವಂತಾಗಿದೆ. ಕುಡಿಯುವ ನೀರು ಸಂಗ್ರಹಿಸಲು ಮಹಿಳೆಯರು ರಸ್ತೆಗಳಲ್ಲೇ ಕೊಡಗಳೊಂದಿಗೆ ಸರತಿ ಸಾಲಿನಲ್ಲಿ ನಿಲ್ಲುತ್ತಿದ್ದಾರೆ. ಕೊಡಗಳಷ್ಟೇ ಅಲ್ಲದೆ ದೊಡ್ಡ ಬ್ಯಾರಲ್‌ಗಳನ್ನು ಕೂಡ ನೀರು ಬರುವ ಸ್ಥಳಗಳಲ್ಲಿ ಸಾಲಾಗಿ ಇಡುತ್ತಿದ್ದಾರೆ. ಸುಡುವ ಬಿಸಿಲನ್ನೂ ಲೆಕ್ಕಿಸದೆ ನೀರಿಗಾಗಿ ಕಾಯುತ್ತಿದ್ದಾರೆ. ಕೂಲಿ ಕೆಲಸಕ್ಕೆ ತೆರಳಬೇಕಾದ ಮಹಿಳೆಯರು ಕೆಲಸ ಬಿಟ್ಟು ನೀರಿಗಾಗಿ ಅಲೆಯುವಂತಾಗಿದೆ. ಇನ್ನು ಶಾಲಾ–ಕಾಲೇಜುಗಳಿಗೆ ತೆರಳಬೇಕಾದ ವಿದ್ಯಾರ್ಥಿಗಳು ಕೂಡ ನೀರು ತುಂಬಿಸಿಕೊಳ್ಳಲು ಸಮಯ ವ್ಯಯಿಸುತ್ತಿದ್ದು, ಅವರ ವಿದ್ಯಾಭ್ಯಾಸಕ್ಕೂ ತೊಂದರೆಯಾಗುತ್ತಿದೆ.

ಔರಾದ್ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಜನಜೀವನವನ್ನು ಅಸ್ತವ್ಯಸ್ತಗೊಳಿಸಿದೆ. ಮಾಜಿ ಸಚಿವರ ಕ್ಷೇತ್ರದಲ್ಲೇ ಜನರು ಹನಿ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿರುವುದು ಚರ್ಚೆಗೆ ಕಾರಣವಾಗಿದೆ. ಜನರ ನೀರಿನ ಸಂಕಷ್ಟಕ್ಕೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಯಾವಾಗ ಸ್ಪಂದಿಸಲಿದ್ದಾರೆ? ತೇಗಂಪುರ ಕೆರೆಯಿಂದ ನೀರು ಪೂರೈಕೆ ಆರಂಭವಾಗಿ ಔರಾದ್ ಜನರ ಹನಿ ನೀರಿನ ಹಾಹಾಕಾರಕ್ಕೆ ಮುಕ್ತಿ ಸಿಗಲಿದೆ

ಸಂತ ಸೇವಾಲಾಲ್ ಮಹಾರಾಜರ ಜನ್ಮಸ್ಥಾನ ಮಹಾಮಠ ಸಮಿತಿ ಅಧ್ಯಕ್ಷರಾಗಿ ಪ್ರಭು ಚವ್ಹಾಣ ಆಯ್ಕೆ



ಬೀದರ, ನ. 14: ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ಭಾಯಾಗಡ್, ಸುರಗೊಂಡನಕೊಪ್ಪದಲ್ಲಿರುವ ಬಂಜಾರ ಸಮುದಾಯದ ಆರಾಧ್ಯ ದೈವ, ಧರ್ಮಗುರು ಶ್ರೀ ಸಂತ ಸೇವಾಲಾಲ್ ಮಹಾರಾಜರ ಪವಿತ್ರ ಜನ್ಮಸ್ಥಾನ ಮಹಾಮಠ ಸಮಿತಿಯ ನೂತನ ಅಧ್ಯಕ್ಷರಾಗಿ ಬೀದರ ಜಿಲ್ಲೆಯ ಔರಾದ(ಬಿ) ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಪ್ರಭು ಚವ್ಹಾಣ ಅವರು ಅವಿರೋಧ ಆಯ್ಕೆಯಾಗಿದ್ದಾರೆ.

ಮಹಾಮಠದ ಸಭಾಂಗಣದಲ್ಲಿ ಇತ್ತೀಚೆಗೆ ಅಪರ ಜಿಲ್ಲಾಧಿಕಾರಿ ನಾಗರಾಜ ನಾಯಕ್ ಅವರ ನೇತೃತ್ವದಲ್ಲಿ ಚುನಾವಣೆ ಪ್ರಕ್ರಿಯೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಪ್ರಭು ಚವ್ಹಾಣ ಅವರು ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಲಾಯಿತು. ಸಮಿತಿಯ ಇತರ ಎಲ್ಲ ಪದಾಧಿಕಾರಿಗಳ ಆಯ್ಕೆಯೂ ಅವಿರೋಧವಾಗಿ ನಡೆಯಿತು.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಮಾತನಾಡಿದ ಪ್ರಭು ಚವ್ಹಾಣ ಅವರು, ಬಂಜಾರ ಸಮುದಾಯದ ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಅಸ್ಮಿತೆಯ ಪ್ರತೀಕವಾಗಿರುವ ಸಂತ ಸೇವಾಲಾಲ್ ಮಹಾರಾಜರು ಜನ್ಮತಾಳಿದ ಈ ಪುಣ್ಯಭೂಮಿ ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಶೇಷವಾಗಿ ಗುರುತಿಸಿಕೊಳ್ಳಬೇಕು. ದೇಶದ ಪ್ರಮುಖ ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಪ್ರವಾಸಿ ತಾಣವಾಗಿ ಅಭಿವೃದ್ಧಿಗೊಳ್ಳಬೇಕು ಎಂಬುದು ನನ್ನ ಮಹದಾಸೆಯಾಗಿದೆ. ಈ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದರು.

ಮಹಾಮಠವನ್ನು ಆರ್ಥಿಕವಾಗಿ ಸ್ವಾವಲಂಬಿಯನ್ನಾಗಿ ಮಾಡುವುದು ನನ್ನ ಪ್ರಮುಖ ಸಂಕಲ್ಪವಾಗಿದೆ. ಮಠದ ಪೂಜೆ, ದಾಸೋಹ ಸೇರಿದಂತೆ ಧಾರ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳು ಯಾವುದೇ ಅಡೆತಡೆಯಿಲ್ಲದೆ ನಿರಂತರವಾಗಿ ನಡೆಯುವಂತೆ ಸುಸ್ಥಿರ ಆರ್ಥಿಕ ವ್ಯವಸ್ಥೆ ರೂಪಿಸಲಾಗುವುದು. ಈ ನಿಟ್ಟಿನಲ್ಲಿ ಎಲ್ಲರ ಸಹಕಾರ ಮತ್ತು ಸಹಭಾಗಿತ್ವದೊಂದಿಗೆ ಯೋಜನಾ ಬದ್ಧವಾಗಿ ಕಾರ್ಯ ನಿರ್ವಹಿಸುತ್ತೇನೆ ಎಂದು ಹೇಳಿದರು.

ಮಹಾಮಠದ ಅಭಿವೃದ್ಧಿಯ ಜೊತೆಗೆ ಸಂತ ಸೇವಾಲಾಲ್ ಮಹಾರಾಜರು ಸಾರಿದ ಸತ್ಯ, ಸಮಾನತೆ, ಮಾನವೀಯತೆ, ಸೇವೆ ಹಾಗೂ ಸಮಾಜ ಸುಧಾರಣೆಯ ತತ್ವಾದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಅವರ ಜೀವನಚರಿತ್ರೆ, ಬೋಧನೆಗಳು ಹಾಗೂ ಬಂಜಾರ ಸಮುದಾಯದ ಶ್ರೀಮಂತ ಇತಿಹಾಸ ಮತ್ತು ಸಂಸ್ಕೃತಿಯನ್ನು ದೇಶದಾದ್ಯಂತ ಪರಿಚಯಿಸುವ ಉದ್ದೇಶದಿಂದ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

ಬಂಜಾರ ಸಮುದಾಯದ ಸರ್ವತೋಮುಖ ಏಳಿಗೆ, ಯುವಜನರ ಪ್ರಗತಿ, ನಮ್ಮ ಸಂಸ್ಕೃತಿ, ಪರಂಪರೆ ಹಾಗೂ ಧಾರ್ಮಿಕ ಮೌಲ್ಯಗಳ ಸಂರಕ್ಷಣೆಗೆ ವಿಶೇಷ ಗಮನ ನೀಡಲಾಗುವುದು. ಮಹಾಮಠವನ್ನು ಭಕ್ತರ ಶ್ರದ್ಧಾಕೇಂದ್ರವನ್ನಾಗಿ ಮಾತ್ರವಲ್ಲದೆ, ಮುಂದಿನ ಪೀಳಿಗೆಗೆ ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಪರಿಚಯಿಸುವ ಪ್ರಮುಖ ಕೇಂದ್ರವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಶ್ರಮಿಸುತ್ತೇನೆ. ಸಚಿವರಾದ ರುದ್ರಪ್ಪ ಲಮಾಣಿ ಅವರು ಸುಮಾರು ವರ್ಷಗಳ ಕಾಲ ಮಹಾಮಠ ಸಮಿತಿಯ ಅಧ್ಯಕ್ಷರಾಗಿ ಉತ್ತಮ ಕೆಲಸ ಮಾಡಿದ್ದಾರೆ. ಅವರ ಯೋಜನೆಗಳನ್ನು ಮುಂದುವರೆಸಲಾಗುವುದು ಎಂದು ಹೇಳಿದರು.

ಯುವಕನ ಹೆಸರು ದುರ್ಬಳಕೆ: 350 ಕೋಟಿ ರೂ. ಜಿಎಸ್‌ಟಿ ವಂಚನೆ

ಬಳ್ಳಾರಿ, ನ.14: ನಗರದಲ್ಲಿ ಇಡೀ ರಾಜ್ಯವನ್ನೇ ಬೆಚ್ಚಿ ಬೀಳಿಸುವ ಜಿಎಸ್‌ಟಿ ವಂಚನೆ ನಡೆದಿರುವುದು ಬೆಳಕಿಗೆ ಬಂದಿದೆ. ಯುವಕನೊಬ್ಬನ ಹೆಸರನ್ನು ದುರ್ಬಳಕೆ ಮಾಡಿಕೊಂಡು 350 ಕೋಟಿ ರೂ. ವಂಚನೆ ಮಾಡಲಾಗಿದೆ. ಈ ಸಂಬಂಧ ಯುವಕನ ಕುಟುಂಬಸ್ಥರು ಸೈಬರ್ ಠಾಣೆ ಮೆಟ್ಟಿಲೇರಿದ್ದಾರೆ.

ಕಂಪನಿಯೊಂದರಲ್ಲಿ ಸೇವಾ ಸಲಹೆಗಾರನಾಗಿ ಕೆಲಸ ಮಾಡ್ತಿದ್ದ ಬಳ್ಳಾರಿಯ ರೋಷನ್ ಎಂಬ ಯುವಕನ ಹೆಸರಲ್ಲಿ ಖಾತೆ ತೆರೆದು ಬರೋಬ್ಬರಿ 350 ಕೋಟಿ ರೂ. ವ್ಯವಹಾರ ನಡೆಸಲಾಗಿದೆ. ರೋಷನ್ ಕಂಪನಿಯೊಂದರಲ್ಲಿ ತಿಂಗಳಿಗೆ 15ಸಾವಿರ ರೂ. ಸಂಬಳಕ್ಕೆ ಕೆಲಸ ಮಾಡಿಕೊಂಡಿದ್ದಾರೆ. ವಂಚಕರು ರೋಷನ್ ಅಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಪಾಸ್ ಬುಕ್ ಹಾಗೂ ಮನೆ ಕರೆಂಟ್ ಬಿಲ್ ಬಳಸಿ ಜಿಎಸ್‌ಟಿ ಮಾಡಿಸಲಾಗಿದೆ. ಆದರೆ ಫೋನ್ ನಂಬರ್ ಹಾಗೂ ಮೇಲ್ ಐಡಿ ಬೇರೆ ಬೇರೆ ಇದೆ. ಹೀಗಾಗಿ ಯುವಕ ರೋಷನ್‌ಗೆ ಯಾವುದೇ ಮಾಹಿತಿ ಸಿಕ್ಕಿಲ್ಲ. ವಂಚಕರು ರೋಷನ್ ಎಂಟರ್‌ಪ್ರೈಸಸ್ ಹೆಸರಲ್ಲಿ ಐದು ತಿಂಗಳಲ್ಲಿ ಪ್ಲಾಸ್ಟಿಕ್ ವ್ಯಾಪಾರದ ಹೆಸರಲ್ಲಿ 350 ಕೋಟಿ ರೂ. ಜಿಎಸ್‌ಟಿ ವ್ಯವಹಾರ ಮಾಡಿ ಅಕೌಂಟ್ ಕ್ಲೋಸ್ ಮಾಡಿದ್ದಾರೆ. ನ.12ರಂದು ಜಿಎಸ್‌ಟಿ ಅಧಿಕಾರಿಗಳು ರೋಷನ್ ಮನೆಗೆ ಬಂದು ಯಾಕೆ ಅಕೌಂಟ್ ಕ್ಲೋಸ್ ಮಾಡಿದ್ದೀರಿ ಎಂದು ವಿಚಾರಿಸಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಈ ವಿಚಾರ ತಿಳಿಯುತ್ತಿದ್ದಂತೆ ಎಪಿ ಗೋಡೌನ್‌ನಲ್ಲಿ ಹಮಾಲಿ ಕೆಲಸ ಮಾಡುವ ತಂದೆ ಫಕ್ರುದ್ದೀನ್, ತಾಯಿ ಸೇರಿದಂತೆ ಎಲ್ಲರೂ ಗಾಬರಿಯಾಗಿದ್ದಾರೆ. ಕೆಲಸದಿಂದ ಬಂದ ರೋಷನ್ ವಿಷಯ ತಿಳಿದು ಕೂಡಲೇ ಜಿಎಸ್‌ಟಿ ಕಚೇರಿಗೆ ತೆರಳಿ ವಿಚಾರಿಸಿದ್ದಾರೆ. ಅಲ್ಲಿ ಸಮರ್ಪಕ ಉತ್ತರ ದೊರೆಯದೆ ಇಡೀ ಕುಟುಂಬವನ್ನ ಕರೆದುಕೊಂಡು ಸೈಬರ್ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ. ದಿನಕ್ಕೆ ಹಮಾಲಿ ಮಾಡಿ 700ರೂ. ದುಡಿಯುವ ಫಕ್ರುದ್ದೀನ್ ಮಗನ ಹೆಸರಲ್ಲಿ ನೂರಾರು ಕೋಟಿ ವ್ಯವಹಾರ ನಡೆದಿರುವುದನ್ನು ಕೇಳಿ ಭಯದಿಂದ ಕಣ್ಣೀರು ಹಾಕಿದ್ದಾರೆ.

ಇತ್ತ ರೋಷನ್ ಕೂಡಾ ಭಯಗೊಂಡಿದ್ದು, ದಾಖಲೆಗಳನ್ನ ದುರುಪಯೋಗ ಮಾಡಿಕೊಂಡು ಅಕ್ರಮ ಹಣದ ವಹಿವಾಟು ಮಾಡಿದವರ ಬಂಧನಕ್ಕೆ ಆಗ್ರಹಿಸಿದ್ದಾರೆ. ಸದ್ಯ ಸೈಬರ್ ಪೊಲೀಸ್ ಠಾಣೆಯಲ್ಲಿ ದೂರು ಕೊಟ್ಟಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಖಾಸಗಿ ಶಾಲೆಗಳ ನಿರ್ಲಕ್ಷ್ಯ: ಬಂದ್‌ಗೆ ಬೆಂಬಲ



ಬೀದರ್, ನ. 14: ರಾಜ್ಯ ಸರ್ಕಾರದ ಶಿಕ್ಷಣ ನೀತಿ ಹಾಗೂ ಅನುದಾನ ರಹಿತ ಖಾಸಗಿ ಶಾಲೆಗಳ ಬೇಡಿಕೆಗಳನ್ನು ಈಡೇರಿಸಲು ನಿರ್ಲಕ್ಷ್ಯ ತೋರುತ್ತಿರುವುದನ್ನು ವಿರೋಧಿಸಿ ನ.17, 18ರಂದು ನಡೆಸಲು ಉದ್ದೇಶಿಸಿರುವ ಹೋರಾಟಕ್ಕೆ ಬೆಂಬಲಿಸಿ ಹೋರಾಟ ನಡೆಸಲಾಗುವುದು ಎಂದು ಕಲ್ಯಾಣ ಕರ್ನಾಟಕ ಅನುದಾನ ರಹಿತ ಶಾಸಗಿ ಶಾಲೆಗಳು ಹಾಗೂ ರಾಜ್ಯ ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಸಂಘದ ರಾಜ್ಯಾಧ್ಯಕ್ಷ ರೇವಣಸಿದ್ದಪ್ಪ ಜಲಾದೆ ತಿಳಿಸಿದರು.

ನ.17ರಂದು ಧಾರವಾಡದಲ್ಲಿ ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಅವರ ನೇತೃತ್ವದಲ್ಲಿ ಪ್ರತಿಭಟನೆ ನಡೆಯಲಿದೆ.

18ರಂದು ರಾಜ್ಯದಾದ್ಯಂತ ಶಾಲಾ–ಕಾಲೇಜುಗಳನ್ನು ಅನಿರ್ದಿಷ್ಟಾವಧಿವರೆಗೆ ಬಂದ್ ಮಾಡಲಾಗುವುದು ಎಂದು ಪತ್ರಿಕಾಗೋಷ್ಠಿಯಲ್ಲಿ ಜಲಾದೆ ಅವರು ಹೇಳಿದರು.

ಕಳೆದ ಮೂರ್ನಾಲ್ಕು ವರ್ಷಗಳಿಂದ 'ಕನ್ನಡ ಶಾಲೆಗಳು ಉಳಿಸಿ–ಶಿಕ್ಷಣ ಉಳಿಸಿ' ಅಭಿಯಾನದಡಿ ನಿರಂತರ ಹೋರಾಟ ನಡೆಸುತ್ತಿದ್ದರೂ ಸರ್ಕಾರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. 1995ರ ನಂತರ ಆರಂಭವಾದ ಕನ್ನಡ ಮಾಧ್ಯಮ ಶಾಲೆಗಳಿಗೆ ಅನುದಾನ ನೀಡಬೇಕು. ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ಪ್ರಕ್ರಿಯೆಯ ಕ್ಲಿಷ್ಟಕರ ನಿಯಮಗಳನ್ನು ಸರಳಗೊಳಿಸಬೇಕು ಎಂದರು.

ಕಳೆದ ಆರು ವರ್ಷಗಳಿಂದ ಸ್ಥಗಿತಗೊಂಡಿರುವ ಆರ್‌ಟಿಇ (ಶಿಕ್ಷಣ ಹಕ್ಕು ಕಾಯ್ದೆ) ಅಡಿ ಉಚಿತ ಶಿಕ್ಷಣ ಸೌಲಭ್ಯವನ್ನು ಮರು ಜಾರಿಗೊಳಿಸಬೇಕು. ನಿವೃತ್ತ ಶಿಕ್ಷಕರ ಹುದ್ದೆ ಭರ್ತಿ ಮಾಡಬೇಕು ಹಾಗೂ ಹಳೆಯ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸಬೇಕು' ಎಂದು ಹೋರಾಟ ನಡೆಸುತ್ತಿದ್ದರೂ ಸರ್ಕಾರ ಕಿವಿಗೊಡುತ್ತಿಲ್ಲ ಶಾಲೆಗಳ ನವೀಕರಣ ಪ್ರಕ್ರಿಯೆ ಯನ್ನು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಸಮಸ್ಯೆಯಾಗಿ ಪರಿಣಮಿಸುವಂತೆ ಮಾಡಲಾಗಿದೆ. ಅನಗತ್ಯ ನಿಯಮಗಳು ಹಾಗೂ ಷರತ್ತುಗಳಿಂದ ಶಾಲೆಗಳ ನಿರ್ವಹಣೆ ಕಷ್ಟವಾಗುತ್ತಿದೆ. ಹೀಗಾಗಿ ನವೀಕರಣ ಪ್ರಕ್ರಿಯೆಯನ್ನು ಸರಳಗೊಳಿಸಿ ಶಿಕ್ಷಣ ಸಂಸ್ಥೆಗಳಿಗೆ ಅನುಕೂಲ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಇಂದಿನಿಂದ ಕಾಲುವೆ ನೀರು ಸ್ಥಗಿತ: ನಾಳೆ ತುಂಗಭದ್ರಾ ಜಲಾಶಯಕ್ಕೆ ರೈತರ ಮುತ್ತಿಗೆ



ರಾಯಚೂರು, ನ. 14: ತುಂಗಾಭದ್ರಾ ಕಾಲುವೆ ನೀರನ್ನು ಸ್ಥಗಿತಗೊಳಿಸುತ್ತಿರುವದನ್ನು ವಿರೋಧಿಸಿ ತುಂಗಭದ್ರಾ ಜಲಾಶಯಕ್ಕೆ ರೈತರು ನವೆಂಬರ್ 16ರಂದು ಸೋಮವಾರ ಮುತ್ತಿಗೆ ಹಾಕಿ ಮುನಿರಾಬಾದ್ ಮತ್ತು ರಾಷ್ಟ್ರೀಯ ಹೆದ್ದಾರಿಯನ್ನು ಬಂದ್ ಮಾಡುವುದಾಗಿ ತುಂಗಾಭದ್ರಾ ಮಂಡಳಿಯ ಅಧಿಕಾರಿಗಳಿಗೆ ತುಂಗಾಭದ್ರಾ ರೈತ ಸಂಘವು ಮನವಿ ಸಲ್ಲಿಸಿದೆ.

ತುಂಗಾಭದ್ರಾ ರೈತ ಸಂಘದ ಅಧ್ಯಕ್ಷ ಡಾ. ಪುರುಷೋತ್ತಮಗೌಡ ಅವರ ನೇತೃತ್ವದಲ್ಲಿ ರೈತರು ತುಂಗಾಭದ್ರಾ ಜಲಾಶಯದ ಸೂಪರಿಂಡೆಂಟ್ ಇಂಜಿನಿಯರ್ ಮಲ್ಲಿಗೆವಾಡ್ ಅವರಿಗೆ ಮನವಿ ಸಲ್ಲಿಸಿ, ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದರು.

ನವೆಂಬರ್ 15 ರಿಂದ ಕಾಲುವೆಗಳಲ್ಲಿ ನೀರು ಬಂದ್ ಮಾಡಲಾಗುವುದು ಎನ್ನುವ ಆದೇಶವನ್ನು ಅಧಿಕಾರಿಗಳಿಗೂ ಕಳುಹಿಸಿದ್ದು, ಈ ಆದೇಶದಿಂದ ಜಲಾಶಯದ ವ್ಯಾಪ್ತಿಯ 12 ಲಕ್ಷದ 60 ಸಾವಿರ ಎಕರೆ ರೈತರು ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ.

ಅಕ್ಟೋಬರ್ 19 ರಂದು ಬೆಂಗಳೂರಿನ ವಿಕಾಸಸೌಧದಲ್ಲಿ ಶಿವರಾಜ್ ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು ಜಿಲ್ಲೆಗಳ ಜನಪ್ರತಿನಿಧಿಗಳ ಜೊತೆ ನಡೆದ ತುಂಗಭದ್ರಾ ಜಲಾಶಯದ ಸಲಹಾ ಸಮಿತಿ ಸಭೆಯಲ್ಲಿ ನವೆಂಬರ್ 20ರ ವರೆಗೆ ಎಲ್ಲಾ ಕಾಲುವೆಗಳಿಗೂ ನೀರು ಹರಿಸಲು ತೀರ್ಮಾನವಾಗಿದೆ. ತುಂಗಾಭದ್ರಾ ಅಚ್ಚುಕಟ್ಟು ಪ್ರದೇಶದ ಜನಪ್ರತಿನಿಧಿಗಳು ಮತ್ತು ರೈತ ಮುಖಂಡರು ನವೆಂಬರ್ 4 ರಂದು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ನವೆಂಬರ್ 30ರ ವರೆಗೆ ಕಾಲುವೆಗಳಿಗೆ ನೀರು ಹರಿಸಿ ರೈತರ ಬೆಳೆ ರಕ್ಷಣೆಗೆ ಮನವಿ ಮಾಡಿದ್ದಾರೆ.

ತುಂಗಾಭದ್ರಾ ಜಲಾಶಯದ ವ್ಯಾಪ್ತಿಗೆ 12 ಲಕ್ಷದ 64ಸಾವಿರ ಎಕರೆಯ ರೈತರು ಬೆಳೆ ಬೆಳೆಯಲು 12,60,000 ಕೋಟಿ ರೂಗಳನ್ನು ಖರ್ಚು ಮಾಡಿದ್ದು, ಬೆಳೆದು ನಿಂತಿರುವ ಪೈರಿಗೆ ನೀರುಣಿಸದಿದ್ದಲ್ಲಿ ರೈತರು ಆತ್ಮಹತ್ಯೆ ಮಾಡಿಕೊಳ್ಳಬೇಕಾಗುತ್ತದೆ. ತುಂಗಭದ್ರಾ ಜಲಾಶಯದಲ್ಲಿ ಪಾವಗಡದ ಕುಡಿಯುವ ನೀರು 2–ಟಿ.ಎಂ.ಸಿ. ಜಿಂದಾಲ್ ಕಾರ್ಖಾನೆಯ ನೀರು 1.7 ಟಿ.ಎಂ.ಸಿ., ಎಂ.ಎಲ್.ಐ 3.ಟಿ.ಎಂ.ಸಿ. ಮತ್ತು ಕೆ.ಸಿ.ಕೆನಾಲ್ 4.ಟಿ.ಎಂಸಿ ಇದ್ದು, ಈ ನೀರನ್ನು ಬಳಕೆ ಮಾಡಿ ನವೆಂಬರ್ 30ರವರೆಗೆ ಎಲ್ಲಾ ನಾಲೆಗಳಿಗೂ ನೀರು ಬಿಡಲು ಅವಕಾಶವಿದೆ. ಕಾರಣ ನವೆಂಬರ್ 30ರ ವರೆಗೆ ಕಾಲುವೆಗಳಿಗೆ ನೀರು ಹರಿಸಲು ಆಗ್ರಹಿಸಿ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಶೀಘ್ರದಲ್ಲೇ ಪರಿಷ್ಕರಿಸಲು ಅಧಿಕಾರಿಗಳಿಗೆ ಸೂಚಿಸಿದ ಮಾಜಿ ಶಾಸಕ ಸೋಮಶೇಖರರೆಡ್ಡಿ

ಬಳ್ಳಾರಿ ನ 14. ಬಳ್ಳಾರಿ ನಗರದ ಅಗ್ನಿಶಾಮಕ ದಳ ಕಚೇರಿ ಸಮೀಪದ ಇಂದಿರಾ ನಗರದಲ್ಲಿ ನೀರಿನ ಪೈಪ್‌ಲೈನ್ ಅಳವಡಿಸುವ ಕಾಮಗಾರಿಗಾಗಿ ರಸ್ತೆಯನ್ನು ಅಗೆದು ಸುಮಾರು ಎಂಟು ತಿಂಗಳು ಕಳೆದರೂ ಇದುವರೆಗೂ ರಸ್ತೆಯನ್ನು ಮರುಸ್ಥಾಪಿಸದೆ ಹಾಗೆಯೇ ಬಿಡಲಾಗಿದೆ. ಇದರಿಂದಾಗಿ ಸ್ಥಳೀಯ ನಿವಾಸಿಗಳು ಹಾಗೂ ವಾಹನ ಸವಾರರು ಪ್ರತಿನಿತ್ಯ ತೊಂದರೆ ಅನುಭವಿಸುವಂತಾಗಿದೆ.

ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ಖುದ್ದಾಗಿ ಭೇಟಿ ನೀಡಿದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಅಲ್ಲಿನ ಪರಿಸ್ಥಿತಿಯನ್ನು ಪರಿಶೀಲಿಸಿ, ಸಂಬಂಧಪಟ್ಟ ಅಧಿಕಾರಿಗಳಿಗೆ ದೂರವಾಣಿ ಮೂಲಕ ಕರೆ ಮಾಡಿ ಸಮಸ್ಯೆಯ ಕುರಿತು ಮಾಹಿತಿ ನೀಡಿದರು.



ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲವನ್ನು ಗಂಭೀರವಾಗಿ ಪರಿಗಣಿಸಿ, ಯಾವುದೇ ವಿಳಂಬವಿಲ್ಲದೆ ಆದಷ್ಟು ಶೀಘ್ರದಲ್ಲೇ ರಸ್ತೆಯನ್ನು ದುರಸ್ತಿಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಸಂದರ್ಭದಲ್ಲಿ ಬಳ್ಳಾರಿ ನಗರದ ಬಿಜೆಪಿ ಅಧ್ಯಕ್ಷರಾದ ವೆಂಕಟರಮಣ ರವರು, ಪಾಲಿಕೆ ಸದಸ್ಯರು ಹಾಗೂ ವಿರೋಧ ಪಕ್ಷ ನಾಯಕರಾದ ಶ್ರೀನಿವಾಸ್ ಮೋತ್ಕರ್ ರವರು, ಅಂಬೇಡ್ಕರ್ ಸಂಘದ ಅಧ್ಯಕ್ಷರಾದ ತಿಪ್ಪೇಸ್ವಾಮಿ ರವರು, ಪ್ರತಾಪ್ ರವರು, ಗೋವಿಂದು ರವರು, ಶಿವನಂದ ರವರು, ಅಂಜಿ ರವರು, ಕ್ರಾಂತಿ ರವರು, ಚಂದ್ರ ರವರು, ಮಲ್ಲಿಕಾರ್ಜುನ ರವರು, ಪ್ರಸಾದ್ ರವರು, ಮೋಹನ್ ಶೆಟ್ಟಿ ರವರು, ಕರ್ಣ ರವರು, ನಗರದ ನಿವಾಸಿಗಳು ಇನ್ನಿತರ ಉಪಸ್ಥಿತರಿದ್ದರು.

ಮಕ್ಕಳ ಪ್ರತಿಭೆ ಅನಾವರಣಕ್ಕೆ ಗುಣಮಟ್ಟದ ಶಿಕ್ಷಣ, ಆಧುನಿಕ ತಂತ್ರಜ್ಞಾನ ಬಳಕೆಗೆ ಆದ್ಯತೆ: ಸಚಿವ ಮಧು ಬಂಗಾರಪ್ಪ

ವಿಜಯಪುರ,ನ.14–ಗ್ರಾಮೀಣ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವುದರೊಂದಿಗೆ ವಿಜ್ಞಾನದ ವಿವಿಧ ಪರಿಕಲ್ಪನೆಗಳನ್ನು ಪ್ರಾಯೋಗಿಕವಾಗಿ ಅರಿತುಕೊಳ್ಳಲು ವಿಜ್ಞಾನಜಾತ್ರೆಗಳು ಉತ್ತಮ ವೇದಿಕೆಯಾಗಿವೆ. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಸಂಶೋಧನಾ ಪ್ರವೃತ್ತಿ, ಸೃಜನಶೀಲತೆ ಹಾಗೂ ವೈಜ್ಞಾನಿಕ ಚಿಂತನೆ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.

ಶನಿವಾರ ಮಕ್ಕಳ ದಿನಾಚರಣೆ ಅಂಗವಾಗಿ ತಿಕೋಟಾದ ಎ.ಬಿ. ಜತ್ತಿ ಶಾಲೆ ಆವರಣದಲ್ಲಿ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಬಿ.ಎಲ್.ಡಿ.ಇ ಸಂಸ್ಥೆ ಹಾಗೂ ಅಗಸ್ತ್ಯ ಫೌಂಡೇಶನ್



ಸಹಯೋಗದಲ್ಲಿ ಆಯೋಜಿಸಿದ್ದ ಮಕ್ಕಳ ವಿಜ್ಞಾನಜಾತ್ರೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಸುಮಾರು 4,500 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿದೆ. ಎಲ್‌ಕೆಜಿಯಿಂದ ಪಿಯುಸಿವರೆಗೆ 14 ವರ್ಷಗಳ ಶಿಕ್ಷಣವನ್ನು ಒಂದೇ ಸೂರಿನಡಿ ಒದಗಿಸುವುದರ ಜತೆಗೆ ಉಚಿತ ಬಸ್ ಸೌಲಭ್ಯ ಕಲ್ಪಿಸಲಾಗುವುದು. ಮುಂದಿನ ಒಂದೆರಡು ತಿಂಗಳಲ್ಲಿ ಶಾಲೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳ ಮಕ್ಕಳ ಪೌಷ್ಟಿಕತೆಗೂ ಸರ್ಕಾರ ಆದ್ಯತೆ ನೀಡಿದೆ. ರಾಜ್ಯದ ಸುಮಾರು 45 ಲಕ್ಷ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟದ ಜತೆಗೆ ಮೊಟ್ಟೆ ಹಾಗೂ ಮೊಟ್ಟೆ ಸೇವಿಸದ ಮಕ್ಕಳಿಗೆ ಬಾಳೆಹಣ್ಣು ವಿತರಿಸಲಾಗುತ್ತಿದೆ. 1,991 ಕೋಟಿ ರೂ. ವೆಚ್ಚದ ಈ ಕಾರ್ಯಕ್ರಮಕ್ಕೆ ಅಜೀಂ ಪ್ರೇಮ್‌ಜಿ ಫೌಂಡೇಶನ್ ಸಹಕಾರ ನೀಡುತ್ತಿರುವುದು ಶ್ಲಾಘನೀಯ ಎಂದರು.

ಕಲಿತ ಶಾಲೆಯಲ್ಲಿ ಚಿಣ್ಣರೊಂದಿಗೆ ಮಕ್ಕಳ ದಿನಾಚರಣೆ ಸಂಭ್ರಮಿಸಿದ ಸಚಿವ ರಘುಮೂರ್ತಿ



ಚಿತ್ರದುರ್ಗ, ನ.14: ಬಾಲ್ಯದ ನೆನಪುಗಳು ಎಂದಿಗೂ ನಿತ್ಯನೂತನ, ಹಚ್ಚ ಹಸಿರಾಗಿಯೇ ಹೃದಯದಲ್ಲಿ ಅಚ್ಚಳಿಯದೇ ಉಳಿದಿರುತ್ತದೆ. ಅದರಲ್ಲೂ ಪ್ರಾಥಮಿಕ ಶಾಲೆಯ ತರಗತಿಗಳು ನೆನಪುಗಳ ಮೆರವಣಿಗೆಯನ್ನೇ ನಮ್ಮ ಕಣ್ಣ ಹಾದು ಹೋಗುತ್ತದೆ. ಅದರಲ್ಲೂ ಮಕ್ಕಳ ದಿನಾಚರಣೆಯಂದೇ ಈ ರೀತಿಯ ಭೇಟಿಯಾದರೆ ಅದೊಂದು ದಿವ್ಯಾನುಭವ. ಇಂಥ ವಿಶೇಷ ಅನುಭವವನ್ನು ಮಕ್ಕಳ ದಿನಾಚರಣೆಯಂದು ಪಡೆದು ಸಂತಸಪಟ್ಟವರು ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ.

ಚಿತ್ರದುರ್ಗ ಮತ್ತು ಚಳ್ಳಕೆರೆಗೆ ಅಧಿಕೃತ ಕಾರ್ಯದ ನಿಮಿತ್ತ ತೆರಳುತ್ತಿದ್ದ ಸಚಿವರು, ಚಿತ್ರದುರ್ಗ ತಾಲೂಕಿನ ಕಡಬನಕಟ್ಟೆ ಗ್ರಾಮದಲ್ಲಿರುವ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದರು.ಮಕ್ಕಳ ದಿನಾಚರಣೆಯ ಸಂಭ್ರಮದಲ್ಲಿದ್ದ ಮಕ್ಕಳಿಗೆ ಅಚ್ಚರಿ ಕಾದಿತ್ತು. ನಮ್ಮ ಶಾಲೆಯಲ್ಲಿಯೇ ಓದಿ ಈಗ ಕರ್ನಾಟಕ ಸರ್ಕಾರದ ಸಚಿವರಾಗಿ ಮೊದಲ ಬಾರಿಗೆ ಮಕ್ಕಳ ದಿನಾಚರಣೆಯಂದು ಭೇಟಿ ನೀಡಿದ ಸಚಿವ ಟಿ. ರಘುಮೂರ್ತಿ ಅವರನ್ನು ಕಂಡು ಚಿಣ್ಣರು, ಶಾಲಾ ಸಿಬ್ಬಂದಿ ಸಂತಸ ಪಟ್ಟರು.

ಈ ಸಂದರ್ಭದಲ್ಲಿ ಮಕ್ಕಳೊಂದಿಗೆ ಕುಶಲೋಪರಿ ನಡೆಸಿದ ಸಚಿವರು, 1967–68ರಲ್ಲಿ ನಾನು ಈ ಶಾಲೆಯಲ್ಲಿ ಒಂದನೇ ತರಗತಿ ಓದಿದೆ. ಏಳನೇ ತರಗತಿಯವರೆಗೂ ನನ್ನ ಶಿಕ್ಷಣ ಇಲ್ಲಿಯೇ ಮುಂದುವರಿದಿತ್ತು. ನಂತರ ಬೇರೆ ಕಡೆ ತೆರಳಿದೆ ಎಂದು ವಿವರಿಸಿದರು. ಚಿಣ್ಣರಿಗೆ ಮಕ್ಕಳ ದಿನಾಚರಣೆಯ ಶುಭಾಶಯ ತಿಳಿಸಿದ ಸಚಿವರು, ಸಿಹಿ ಹಂಚಿದರು.ಈ ಶಾಲೆಯು ನನಗೆ ಅಕ್ಷರ ಕೃಷಿ ಮಾಡಿಸಿದೆ. ಇಲ್ಲಿ ಕಲಿತ ನಾನು ಮುಂದೆ ಇಂಜಿನಿಯರ್ ಆಗುವ ಮಟ್ಟಕ್ಕೆ ತಲುಪಿದೆ. ಈಗ ಸಚಿವನಾಗಿ ನನ್ನ ಶಾಲೆಗೆ ಮೊದಲ ಬಾರಿ ಭೇಟಿ ನೀಡಿದ್ದೇನೆ ಎಂದು ಮನಬಿಚ್ಚಿ ಮಾತನಾಡಿದರು. ಮಕ್ಕಳೊಂದಿಗೆ ಸಂವಾದ ನಡೆಸಿದ ಸಚಿವರು, ಶಾಲೆಯಲ್ಲಿ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ ವಿವರ ಪಡೆದುಕೊಂಡರು.

ನಂತರ ಶಾಲೆಯ ಮುಖ್ಯೋಪಾಧ್ಯಾಯರಾದ ಕೆ. ಸುದರ್ಶನ ಹಾಗೂ ಶಿಕ್ಷಕರೊಂದಿಗೆ ಹಾಗೂ ಶಾಲಾ ಸಿಬ್ಬಂದಿಯೊಂದಿಗೂ ಸಮಾಲೋಚನೆ ನಡೆಸಿದರು. ಈ ಶಾಲೆಯನ್ನು ಹಾಗೂ ಸುತ್ತಮುತ್ತಲ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿ ಮಾಡಲು ಕ್ರಮ ವಹಿಸಲಾಗುವುದು. ಶಾಲೆಯ ಸುತ್ತ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಿ, ಅತ್ಯುತ್ತಮ ರೀತಿಯಲ್ಲಿ ಕಾಣುವಂತೆ ಮಾಡಲು ಎಲ್ಲ ರೀತಿಯ ನೆರವು ನೀಡಲಾಗುವುದು ಎಂದು ಸಚಿವರು ಭರವಸೆ ನೀಡಿದರು. ಇದೊಂದು ಅಪರೂಪದ ಭೇಟಿಯಾಗಿದೆ.

ಮಕ್ಕಳ ದಿನಾಚರಣೆ ಯಂದೇ ನನ್ನ ಶಾಲೆಗೆ ಭೇಟಿ ನೀಡಿರುವುದು ಮನತುಂಬಿ ಬಂದಿದೆ. ಇದು ನನ್ನ ಜೀವನದ ಮರೆಯಲಾಗದ ಮತ್ತು ಸ್ಮರಣೀಯ ದಿನವಾಗಲಿದೆ ಎಂದು ರಘುಮೂರ್ತಿ ತಿಳಿಸಿದರು.

ನವರಾತ್ರಿಯಲ್ಲಿ ಮಾತ್ರ ಹಬ್ಬದೂಟ, ಉಳಿದಂತೆ ಎಲ್ಲರಂತೆ ಅನ್ನ, ಬೇಳೆಸಾರು!

ರಾಜಮನೆತನದ ಬದುಕಿಗೂ ಸಾಮಾನ್ಯ ಬದುಕಿಗೂ ಇರುವ ಕುತೂಹಲಗಳಿಗೆ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಉತ್ತರ

ಮೈಸೂರು, ನ.14: ಚಪ್ಪಾಳೆ ತಟ್ಟಿದರೆ ಓಡಿಬರುವ ಸೇವಕರು ಈಗಲೂ ಇದ್ದಾರೆಯೇ, ರಾಜಮನೆತನದ ಬದುಕಿಗೂ ಸಾಮಾನ್ಯ ಜನರ ಬದುಕಿಗೂ ಇರುವ ವ್ಯತ್ಯಾಸವೇನು ಎಂಬ ಹತ್ತಾರು ಕುತೂಹಲಗಳಿಗೆ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಸರಳವಾಗಿ ಉತ್ತರಿಸಿದ್ದಾರೆ.

ಅರಮನೆಯ ಊಟದ ಬಗ್ಗೆ ಮಾತನಾಡಿದ ಪ್ರಮೋದಾ ದೇವಿ ಅವರು, ಸಿನಿಮಾಗಳಲ್ಲಿ ತೋರಿಸುವಂತೆ ಅರಮನೆಯಲ್ಲಿ ಪ್ರತಿದಿನ ಭೂರಿ ಭೋಜನ, ಹತ್ತಾರು ಬಗೆಯ ಸಿಹಿ–ತಿಂಡಿಗಳು ತಯಾರಾಗುವುದಿಲ್ಲ. ನನ್ನ ಪತಿ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರಿಗೆ ಊಟದಲ್ಲಿ ಯಾವುದೇ ಆಡಂಬರದ ಇಷ್ಟವಿರಲಿಲ್ಲ. ಅವರು ಕೇಳುತ್ತಿದ್ದದ್ದು ಕೇವಲ ಅನ್ನ, ಬೇಳೆ ಸಾರು, ಹಪ್ಪಳ ಮತ್ತು ಸಂಡಿಗೆ ಮಾತ್ರ ಅಷ್ಟು ಸಿಂಪಲ್ ಆಗಿದ್ದರು. ಅರಮನೆಯಲ್ಲಿ ಅಂತಹ ಭರ್ಜರಿ ಭಕ್ಷ್ಯಗಳು ತಯಾರಾಗುವುದು ಕೇವಲ ನವರಾತ್ರಿ (ದಸರಾ) ಹಬ್ಬದ ಸಮಯದಲ್ಲಿ ಮಾತ್ರ. ದೇವರಿಗೆ ನೈವೇದ್ಯ ಮಾಡಿದ ಪ್ರಸಾದವನ್ನೇ ನಾವು ಊಟಕ್ಕೆ ಬಳಸಿಕೊಳ್ಳುತ್ತೇವೆ. ಉಳಿದ ದಿನಗಳಲ್ಲಿ ಎಲ್ಲರ ಮನೆಯಂತೆ ಸಾಮಾನ್ಯ ಊಟವೇ ಇರುತ್ತದೆ

ರಾಜಮನೆತನದ ಜೀವನಶೈಲಿ ಬಗ್ಗೆ ಮಾತನಾಡುತ್ತಾ, "ಅರಮನೆಯ ಬದುಕಿಗೂ ಸಾಮಾನ್ಯ ಜನರ ಬದುಕಿಗೂ ಯಾವುದೇ ವ್ಯತ್ಯಾಸವಿಲ್ಲ. ಇದು ಕೇವಲ ನೋಡುವ ದೃಷ್ಟಿಯ ವ್ಯತ್ಯಾಸ ಅಷ್ಟೇ. ನೀವು ಇದನ್ನು ಅರಮನೆ ಎಂದು ನೋಡ್ತೀರಿ, ಆದರೆ ನಾವಿದನ್ನು ನಮ್ಮ ಮನೆ ಎಂದು ಭಾವಿಸಿ ವಾಸಿಸುತ್ತಿದ್ದೇವೆ. ನಿಜ ಜೀವನದಲ್ಲಿ ಯಾವುದೇ ಭಿನ್ನತೆ ಇಲ್ಲ ಎಂದು ಸರಳತೆಯನ್ನು ಮೆರೆದರು.

ಸಿನಿಮಾಗಳಲ್ಲಿ ರಾಜರು ಚಪ್ಪಾಳೆ ತಟ್ಟಿದರೆ ದಾಸಿಯರು ಬರುವ ದೃಶ್ಯಗಳ ಕುರಿತ ಪ್ರಶ್ನೆಗೆ ಉತ್ತರಿಸಿ, "ಹಿಂದಿನ ಕಾಲದಲ್ಲಿ ಆ ಪದ್ಧತಿ ಇತ್ತೇನೋ, ಆದರೆ ಈಗ ಕಾಲ ಬದಲಾಗಿದೆ. ಆ ತರಹ ಇರಲು ಈಗ ಸಾಧ್ಯವೂ ಇಲ್ಲ. ಬೆಂಗಳೂರು ಮತ್ತು ಮೈಸೂರು ಅರಮನೆ



ಎರಡೂ ಸೇರಿ ಸುಮಾರು 70ರಿಂದ 100 ಸಿಬ್ಬಂದಿ ಇದ್ದಾರೆ. ನಾವು ಅವರನ್ನು ಸಿಬ್ಬಂದಿ ಎಂದು ಭಾವಿಸಿಲ್ಲ, ಅವರೆಲ್ಲರೂ ನಮ್ಮ ಕುಟುಂಬದ ಸದಸ್ಯರಂತೆ. ಅರಮನೆಯ ಖರ್ಚನ್ನು ನಿಭಾಯಿಸಿಕೊಂಡು ಹೋಗುವಷ್ಟರ ಮಟ್ಟಿಗೆ ಆದಾಯವನ್ನು ಸರಿದೂಗಿಸಿಕೊಂಡಿದ್ದೇವೆ".

ನನಗೂ ಅಡುಗೆ ಮಾಡುವ ಹವ್ಯಾಸವಿದೆ. ನಮ್ಮ ಮನೆಯಲ್ಲಿ ಯಾರು ಬೇಕಾದರೂ ಏನು ಬೇಕಾದರೂ ಮಾಡಿಕೊಳ್ಳಬಹುದು. ಯಾವುದೇ ಕಟ್ಟುಪಾಡುಗಳಿಲ್ಲ. ದೇವರ ನೈವೇದ್ಯ ಹೊರತುಪಡಿಸಿ, ನಮಗೆ ಬೇಕಾದ ಅಡುಗೆಯನ್ನು ನಾವೇ ಮಾಡಿಕೊಳ್ಳುತ್ತೇವೆ. ನನ್ನ ದಿನಚರಿಗೆ ಯಾವುದೇ ಫಿಕ್ಸೆಡ್ ರೊಟೀನ್ ಇಲ್ಲ. ಬೆಳಗ್ಗೆ 4:30ಕ್ಕೆ ದಿನ ಆರಂಭವಾಗುತ್ತದೆ. ಕೆಲಸಗಳು ಮುಗಿಯುವುದು ಕೆಲವೊಮ್ಮೆ ಸಂಜೆ 6 ಗಂಟೆಗೆ, ಇನ್ನು ಕೆಲವೊಮ್ಮೆ ರಾತ್ರಿ 12 ಗಂಟೆಗೂ ಆಗಬಹುದು. ಯಾವುದೇ ಜಿಮ್ ಟ್ರೈನರ್ ಇಲ್ಲದೆ, ಫ್ಲೆಕ್ಸಿಬಿಲಿಟಿಗಾಗಿ ನಾನೇ ಸ್ವತಃ ವ್ಯಾಯಾಮ ಮಾಡಿಕೊಳ್ಳುತ್ತೇನೆ ಎಂದು ತಮ್ಮ ದೈನಂದಿನ ಬದುಕಿನ ಬಗ್ಗೆ ವಿಷಯ ಹಂಚಿಕೊಂಡರು.

ತಮ್ಮ ಸ್ವಾವಲಂಬಿ ಜೀವನವನ್ನು ಹಂಚಿಕೊಂಡರು.ವಿಶಾಲವಾದ ಅರಮನೆಯಲ್ಲಿ ನಿಮಗೆ ಅತ್ಯಂತ ಇಷ್ಟವಾದ ಜಾಗ ಯಾವುದು ಎಂದು ಕೇಳಿದಾಗ, "ಅಂತಹ ಜಾಗಗಳು ಒಂದಲ್ಲ, ಬೇಕಾದಷ್ಟಿವೆ!" ಎಂದು ಹೇಳುವ ಮೂಲಕ ಅರಮನೆಯ ಪ್ರತಿಯೊಂದು ಮೂಲೆಗೂ ತಮಗಿರುವ ಬಾಂಧವ್ಯವನ್ನು ವ್ಯಕ್ತಪಡಿಸಿದ್ದಾರೆ.

ವಿದೇಶಕ್ಕೂ ರಫ್ತಾಗುತ್ತಿದೆ ಕಲಬುರಗಿ ರೈತನ ಈರುಳ್ಳಿ


ಕಲಬುರಗಿ, ನ. 14: ಒಂದೆಡೆ ಮಳೆ ಕೊರತೆ, ಮತ್ತೊಂದೆಡೆ ನೀರಿನ ಅಭಾವ. ಇಂತಹ ಬರದ ಸಂಕಷ್ಟದ ನಡುವೆಯೂ ಕಡಿಮೆ ಖರ್ಚಿನಲ್ಲಿ ಉತ್ತಮ ಇಳುವರಿ ಪಡೆದು ಕಲಬುರಗಿ ತಾಲೂಕಿನ ಜಂಬಗಾ (ಬಿ) ಗ್ರಾಮದ ರೈತರೊಬ್ಬರು ಗಮನ ಸೆಳೆದಿದ್ದಾರೆ. ಕೇವಲ ಮೂರು ಕೆ.ಜಿ. ಈರುಳ್ಳಿ ಬೀಜ ಬಿತ್ತನೆ ಮಾಡಿ ಎರಡು ಎಕರೆ ಜಮೀನಿನಲ್ಲಿ ಸುಮಾರು 80ರಿಂದ 100 ಕ್ವಿಂಟಾಲ್ ಈರುಳ್ಳಿ ಬೆಳೆದಿದ್ದು, ಇದೀಗ ಈರುಳ್ಳಿಗೆ ವಿದೇಶದಲ್ಲೂ ಬೇಡಿಕೆ ಸೃಷ್ಟಿಯಾಗಿದೆ.

ಇದೀಗ ಮಾರುಕಟ್ಟೆಯಲ್ಲಿ ಈರುಳ್ಳಿಗೆ ಬಂಗಾರದ ಬೆಲೆ ಬಂದಿದೆ. ಇಳುವರಿ ಕಡಿಮೆಯಾಗಿ ಮಾರುಕಟ್ಟೆಗೆ ಈರುಳ್ಳಿ ಬಾರದೇ ಈರುಳ್ಳಿ ಬೆಲೆ ಮೂರು ಪಟ್ಟುಹೆಚ್ಚಾಗಿದೆ. ಇಂಥ ಸಂದರ್ಭದಲ್ಲಿ ಜಂಬಗಾ (ಬಿ) ಗ್ರಾಮದ ರೈತ ಶ್ರೀಕಾಂತ್ ಅವರು ಎರಡು ಎಕರೆ ಜಮೀನನ್ನು ಲೀಜ್ಗೆ ಪಡೆದು ಈರುಳ್ಳಿ ಕೃಷಿ ಆರಂಭಿಸಿದ್ದರು. ನೀರಿನ ಕೊರತೆಯ ನಡುವೆಯೂ ಪಕ್ಕದ ಜಮೀನಿನಿಂದ ನೀರು ಪಡೆದು ಪೈಪ್ ಮೂಲಕ ನೀರಾವರಿ ವ್ಯವಸ್ಥೆ ಮಾಡಿಕೊಂಡಿದ್ದರು. ಸತತ ನಾಲ್ಕು ತಿಂಗಳ ಪರಿಶ್ರಮದ ಫಲವಾಗಿ ಈಗ ಉತ್ತಮ ಇಳುವರಿ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಈರುಳ್ಳಿ ಬೆಳೆಯಲು ಬೀಜ, ಗೊಬ್ಬರ, ಔಷಧ ಸೇರಿದಂತೆ ಒಟ್ಟು 70ರಿಂದ 80 ಸಾವಿರ ರೂಪಾಯಿ ವೆಚ್ಚ ಮಾಡಿದ್ದಾರೆ. ಕಡಿಮೆ ಪ್ರಮಾಣದ ಬೀಜ ಬಳಸಿ ಇಷ್ಟೊಂದು ಪ್ರಮಾಣದ ಇಳುವರಿ ಪಡೆದಿರುವುದು ವಿಶೇಷವಾಗಿದೆ.



ಬಳ್ಳಾರಿ: ಅಲ್ಲಂ ಪ್ರಶಾಂತ್ ನೇತೃತ್ವದಲ್ಲಿ ನೆಹರು ಜನ್ಮದಿನ– ಮಕ್ಕಳ ದಿನಾಚರಣೆ



ಬಳ್ಳಾರಿ ನ 14. ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ, 14–11–2026ರ ಶನಿವಾರ, ಬೆಳಗ್ಗೆ 10.00 ಗಂಟೆಗೆ, ಕಾಂಗ್ರೆಸ್ ಪಕ್ಷದ ಧೀಮಂತ ನಾಯಕ, ದೇಶದ ಮೊದಲ ಪ್ರಧಾನಿಯಾಗಿ ಧೀರ್ಘವಾದಿ ಆಡಳಿತ ನಡೆಸಿದ ಏಕೈಕ ಪ್ರಧಾನಿ ಪಂಡಿತ್ ಜವಾಹರ್ ಲಾಲ್ ನೆಹರು ರವರ ಜನ್ಮ ದಿನವಾದ ಮಕ್ಕಳ ದಿನಾಚರಣೆಯನ್ನು ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯು ಅಧ್ಯಕ್ಷರಾದ ಅಲ್ಲಂ ಪ್ರಶಾಂತ್ ಅವರ ಅಧ್ಯಕ್ಷತೆಯಲ್ಲಿ ಆಚರಿಸಲಾಯಿತು.

ಈ ವೇಳೆ ಅಧ್ಯಕ್ಷರು ಮತ್ತು ಮುಖಂಡರು ತಮ್ಮ ಭಾಷಣದ ಮೂಲಕ ಮಹಾತ್ಮರು ದೇಶಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು ಮತ್ತು ಅವರ ಶಾಂತಿಯುತ, ಅಹಿಂಸಾತ್ಮಕ ಜೀವನ ಸಿದ್ಧಾಂತಗಳನ್ನು ಪಾಲಿಸಲು ಮನವಿ ಮಾಡಿದರು.

ಈ ಸಂಧರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾದ ಹುಮಯೂನ್ ಖಾನ್, ಡಿಸಿಸಿ ಕಾರ್ಯಾಧ್ಯಕ್ಷರಾದ ಭೋಯಾಪಾಟಿ ವಿಷ್ಣು, ಡಿಸಿಸಿ ಉಪಾಧ್ಯಕ್ಷರಾದ ಶ್ರೀನಿವಾಸುಲು, ಡಿಸಿಸಿ ಕಾರ್ಯದರ್ಶಿ ಹಾಗೂ ಪ್ರಚಾರ ಸಮಿತಿಯ ನಗರ ಅಧ್ಯಕ್ಷ ಈರನ್ನಗೌಡ, ಕಾರ್ಯದರ್ಶಿ ವೈ.ಶ್ರೀನಿವಾಸುಲು, ಕಾರ್ಯಕಾರಿಣಿ ಸಮಿತಿ ಸದಸ್ಯ ವೆಂಕಟ ಲಕ್ಷ್ಮಿ ನಾರಾಯಣ, ಮುಂಚೂಣಿ ಘಟಕಗಳ ಅಧ್ಯಕ್ಷ ಮಂಜುಳ, ಕನೇಕಲ್ ಮಾಬುಸಾಬ್, ಶೇಕ್ ಅಫಾಕ್ ಹುಸ್ಸೇನ್, ಚಾನಳ್ ಮಂಜುನಾಥ್, ಅತ್ತವುಲ್ಲ, ಮುಖಂಡರುಗಳಾದ ಸಿದ್ದೇಶ್, ನಾಗಭೂಷಣ್, ಗೋನಾಳ್ ನಾಗಭೂಷಣ್ ಗೌಡ, ಬಿ.ಮುರಳಿ, ಸಾಂಗಣಕಲ್ ವಿಜಯ್, ಬಜ್ಜಪ್ಪ, ನರಸಿಂಹ, ಸಣ್ಣ ಹೊನ್ನೂರಪ್ಪ, ಹುಸೇನಪ್ಪ, ಬಿ.ಎ.ಮಲ್ಲೇಶ್ವರಿ, ಸುನೀತಾ, ಪರ್ವಿನ್ ಭಾನು, ವಿಜಯಲಕ್ಷ್ಮಿ, ರೋಹಿಣಿ, ಲಕ್ಷ್ಮಿ, ಆಫ್ರಿನ್, ರಂಗಸ್ವಾಮಿ, ಓಂಕಾರ, ಲಕ್ಷ್ಮಿ ಪತಿ, ರಾಮಕೃಷ್ಣ, ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಅವ್ಯವಸ್ಥೆಯ ಆಗರವಾಗಿರುವ ರಾಯಚೂರು ವಸತಿ ನಿಲಯಗಳು

ರಾಯಚೂರು, ನ. 14: ತಾಲ್ಲೂಕಿನ ಯರಗೇರಾ ಸಮೀಪದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಆವರಣದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಸತಿ ನಿಲಯದಲ್ಲಿ ವಿದ್ಯಾರ್ಥಿಗಳ ಸ್ಥಿತಿ ಗೊಂದಲವಾಗಿದೆ. ಹಾಸ್ಟೆಲ್ ದುಸ್ಥಿತಿ ನೋಡಿದರೆ ಇಲ್ಲಿ ಹೇಗೆ ಇರಬೇಕು ಎಂಬುದೇ ತಿಳಿಯುತ್ತಿಲ್ಲ, ಮೂಲ ಸೌಕರ್ಯಗಳ ಕೊರತೆ, ಸ್ವಚ್ಛತೆಯ ಅಭಾವ ಹಾಗೂ ಆಹಾರದ ಕಳಪೆ ಹಾಗೂ ಅಡುಗೆಗೆ ಬಳಸುವ ಪದಾರ್ಥಗಳಲ್ಲಿ ವಿಪರೀತ ಹುಳುಗಳಿವೆ ಎಂದು ವಿದ್ಯಾರ್ಥಿಗಳು ದೂರುತ್ತಾರೆ.

ಜಿಲ್ಲೆ, ಹೊರ ಜಿಲ್ಲೆ ಹಾಗೂ ಗ್ರಾಮೀಣ ಪ್ರದೇಶಗಳಿಂದ ಬಂದು ಇಲ್ಲಿ ವಾಸ್ತವ್ಯ ಹೂಡಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು, ವಸತಿ ನಿಲಯದ ಅವ್ಯವಸ್ಥೆಯಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೆಳಗಿನ ಉಪಾಹಾರ ಕಳಪೆ ಗುಣಮಟ್ಟದ್ದಾಗಿದ್ದು, ಸಾಂಬಾರಿನಲ್ಲಿ ಅಗತ್ಯ ಪ್ರಮಾಣದ ಬೇಳೆ ಹಾಗೂ ತರಕಾರಿ ಇರುವುದಿಲ್ಲ. ಅಕ್ಕಿಯ ಸ್ವಚ್ಛತೆ ಇರುವುದಿಲ್ಲ. ಅಡುಗೆಗೆ ಬಳಸುವ ತರಕಾರಿಗಳು ಹಾಗೂ ಇತರ ಆಹಾರ ಪದಾರ್ಥಗಳು ಕಳಪೆ ಗುಣಮಟ್ಟದ್ದಾಗಿದ್ದು, ಅಡುಗೆಯಲ್ಲಿ ಹುಳುಗಳು ಕಾಣಿಸಿಕೊಳ್ಳುತ್ತಿವೆ. ಈ ಕುರಿತು ವಾರ್ಡನ್ ಗಮನಕ್ಕೆ ತಂದರೂ ಸಮಸ್ಯೆ ಬಗೆಹರಿದಿಲ್ಲ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ.

ಕೃತಕ ಬುದ್ಧಿಮತ್ತೆ, ಸೂಪರ್ ಇಂಟೆಲಿಜೆನ್ಸ್‌ನ ಅಭಿವೃದ್ಧಿಯಲ್ಲಿ ನೈತಿಕ ಮೌಲ್ಯಗಳ ಅಳವಡಿಕೆ ಅತ್ಯಗತ್ಯ; ಚಂದ್ರಶೇಖರ್ ನಾಗರಾಜು

ಬಳ್ಳಾರಿ ನ 14:ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ಕೃತಕ ಬುದ್ಧಿಮತ್ತೆ ಯಂತ್ರ ಕಲಿಕೆ ಹಾಗೂ ಭವಿಷ್ಯದ ಸೂಪರ್ ಇಂಟೆಲಿಜೆನ್ಸ್ ತಂತ್ರಜ್ಞಾನಗಳ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಖ್ಯಾತ ಸೂಪರ್ ಇಂಟೆಲಿಜೆನ್ಸ್ ಸಂಶೋಧಕ ಹಾಗೂ ತಂತ್ರಜ್ಞಾನ ತಜ್ಞರಾದ ಚಂದ್ರಶೇಖರ್ ನಾಗರಾಜು ಅವರು, ಕೃತಕ ಬುದ್ಧಿಮತ್ತೆಯ ವೇಗವಾದ ಬೆಳವಣಿಗೆ, ಅದರ ಭವಿಷ್ಯದ ಸಾಧ್ಯತೆಗಳು ಹಾಗೂ ಮಾನವ ಸಮಾಜದ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ಸವಿಸ್ತಾರವಾಗಿ ಮಾತನಾಡಿದರು. ಯುನೈಟೆಡ್ ಕಿಂಗ್‌ಡಮ್‌ನ ಸಂಸ್ಥೆಯ ಸಂಸ್ಥಾಪಕ ಮತ್ತು ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಯಾಗಿರುವ ಅವರು, ಎರಡು ದಶಕಗಳಿಗೂ ಹೆಚ್ಚಿನ ಅನುಭವವನ್ನು ಹೊಂದಿದ್ದು, ಮುಂದುವರಿದ ಕೃತಕ ಬುದ್ಧಿಮತ್ತೆಯ ಸುರಕ್ಷತೆ, ನೈತಿಕ ಹೊಂದಾಣಿಕೆ ಮತ್ತು ಮಾನವ ನಿಯಂತ್ರಣದ ಕುರಿತು ಸಂಶೋಧನೆ ನಡೆಸುತ್ತಿದ್ದಾರೆ.



ಕೃತಕ ಬುದ್ಧಿಮತ್ತೆಯ ಅಭಿವೃದ್ಧಿಯಲ್ಲಿ ಕೇವಲ ತಾಂತ್ರಿಕ ಪ್ರಗತಿಗೆ ಒತ್ತು ನೀಡದೆ, ಮಾನವೀಯ ಮೌಲ್ಯಗಳು ಮತ್ತು ನೈತಿಕ ತತ್ವಗಳನ್ನು ಆರಂಭಿಕ ಹಂತದಿಂದಲೇ ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ಪ್ರತಿಪಾದಿಸಿದರು.

2025ರ ಅಂತರರಾಷ್ಟ್ರೀಯ ಉದಯೋನ್ಮುಖ ಗಣನ ಮತ್ತು ಮಾಹಿತಿ ತಂತ್ರಜ್ಞಾನಗಳ ಸಮ್ಮೇಳನದಲ್ಲಿ ಪ್ರಶಸ್ತಿ ಪಡೆದ ತಮ್ಮ ಸಂಶೋಧನೆಯ ಕುರಿತು ವಿವರಿಸಿದ ಅವರು, ಅತ್ಯಾಧುನಿಕ ಕೃತಕ ಬುದ್ಧಿಮತ್ತೆ ವ್ಯವಸ್ಥೆಗಳಲ್ಲಿ ಕಂಡುಬರಬಹುದಾದ ಮೋಸಪೂರಿತ ಹೊಂದಾಣಿಕೆ ಹಾಗೂ ಮಾನವ ನಿಯಂತ್ರಣ ಕಳೆದುಕೊಳ್ಳುವ ಅಪಾಯಗಳ ಕುರಿತು ಬೆಳಕು ಚೆಲ್ಲಿದರು. ಭಾರತೀಯ ಸನಾತನ ಜ್ಞಾನ ಪರಂಪರೆಯ ಪದವಿಧಿ ಸೂತ್ರದಿಂದ ಪ್ರೇರಣೆ ಪಡೆದು ರೂಪಿಸಿರುವ ಆರು ಹಂತಗಳ ನೈತಿಕ ಹೊಂದಾಣಿಕೆ ಚೌಕಟ್ಟಿನ ಮಹತ್ವವನ್ನು ವಿವರಿಸಿದರು. ಭಾರತೀಯ ಪ್ರಾಚೀನ ಜ್ಞಾನ ಮತ್ತು ಆಧುನಿಕ ತಂತ್ರಜ್ಞಾನ ಸ'ಂಶ'ೋಧ'ನ'ಂ'ು'ನ'್ನ ಸಮನ್ವಯಗೊಳಿಸುವ ಮೂಲಕ ಮಾನವ ಹಿತಾಸಕ್ತಿಗೆ ಪೂರಕವಾದ ಸುರಕ್ಷಿತ ಸೂಪರ್ ಇಂಟೆಲಿಜೆನ್ಸ್ ಅಭಿವೃದ್ಧಿಪಡಿಸುವ ಸಾಧ್ಯತೆಗಳಿವೆ ಎಂದು ತಿಳಿಸಿದರು. 2030ರ ವೇಳೆಗೆ ಒಂದು ಮಿಲಿಯನ್ ಇಂಜಿನಿಯರ್‌ಗಳು ಮತ್ತು ವೃತ್ತಿಪರರನ್ನು ಸೂಪರ್ ಇಂಟೆಲಿಜೆನ್ಸ್ ತಂತ್ರಜ್ಞಾನಕ್ಕೆ ಸನ್ನದ್ಧಗೊಳಿಸುವ ರಾಷ್ಟ್ರೀಯ ಉಪಕ್ರಮದ ಬಗ್ಗೆಯೂ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಕೋರಿ ನಾಗರಾಜ್ ಅವರು, ಕೃತಕ ಬುದ್ಧಿಮತ್ತೆಯು ಭವಿಷ್ಯದ ತಂತ್ರಜ್ಞಾನ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆಗಳನ್ನು ತರಲಿದ್ದು, ಇಂಜಿನಿಯರಿಂಗ್ ವಿದ್ಯಾರ್ಥಿಗಳು ಇಂತಹ ಉದಯೋನ್ಮುಖ ತಂತ್ರಜ್ಞಾನಗಳ ಬಗ್ಗೆ ಆಳವಾದ ಜ್ಞಾನ ಮತ್ತು ಸಂಶೋಧನಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸುವುದಷ್ಟೇ ಅಲ್ಲದೆ, ಅದನ್ನು ಸಮಾಜದ ಒಳಿತಿಗಾಗಿ ಜವಾಬ್ದಾರಿಯುತವಾಗಿ ಬಳಸುವ ನೈತಿಕ ದೃಷ್ಟಿಕೋನವನ್ನೂ ವಿದ್ಯಾರ್ಥಿಗಳು ಹೊಂದಿರಬೇಕು ಎಂದು ತಿಳಿಸಿದರು. ಕಾಲೇಜಿನ ಉಪ ಪ್ರಾಂಶುಪಾಲ ರಾದ ಡಾ. ದೊಡ್ಡ ಬಸವನಗೌಡ ಅವರು ಮಾತನಾಡಿ, ಕೃತಕ ಬುದ್ಧಿಮತ್ತೆ ಮತ್ತು ಸೂಪರ್ ಇಂಟೆಲಿಜೆನ್ಸ್ ಕ್ಷೇತ್ರಗಳು ಭವಿಷ್ಯದ ಉದ್ಯೋಗಾವಕಾಶಗಳು ಹಾಗೂ ಸಂಶೋಧನೆಗೆ ಹೊಸ ದಾರಿಗಳನ್ನು ತೆರೆದಿಡುತ್ತಿವೆ. ವಿದ್ಯಾರ್ಥಿಗಳು ಇಂತಹ ತಂತ್ರಜ್ಞಾನಗಳ ಬೆಳವಣಿಗೆ, ಸವಾಲುಗಳು ಮತ್ತು ನೈತಿಕ ಜವಾಬ್ದಾರಿಗಳ ಕುರಿತು ಅರಿವು ಹೊಂದಬೇಕು ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮದಲ್ಲಿ ಕಾಲೇಜಿನ ವಿವಿಧ ವಿಭಾಗಗಳ ವಿದ್ಯಾರ್ಥಿಗಳು, ಬೋಧಕ ವರ್ಗದವರು ಹಾಗೂ ಬೋಧಕೇತರ ಮತ್ತು ಸಹಾಯಕ ಸಿಬ್ಬಂದಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಸಂಪನ್ಮೂಲ ವ್ಯಕ್ತಿಗಳೊಂದಿಗೆ ಸಂವಾದ ನಡೆಸಿ ತಮ್ಮ ಪ್ರಶ್ನೆಗಳಿಗೆ ಉತ್ತರಗಳನ್ನು ಪಡೆಯುವ ಮೂಲಕ ವಿಷಯದ ಕುರಿತು ಹೆಚ್ಚಿನ ಅರಿವು ಪಡೆದುಕೊಂಡರು. ಇಂತಹ ಉಪನ್ಯಾಸಗಳು ವಿದ್ಯಾರ್ಥಿಗಳಲ್ಲಿ ನವೀನ ಚಿಂತನೆ, ಸಂಶೋಧನಾ ಆಸಕ್ತಿ ಹಾಗೂ ಭವಿಷ್ಯದ ತಾಂತ್ರಿಕ ಸವಾಲುಗಳನ್ನು ಎದುರಿಸುವ ಆತ್ಮವಿಶ್ವಾಸವನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂಬ ಅಭಿಪ್ರಾಯ ವ್ಯಕ್ತವಾಯಿತು.

ಕಾಶಿಪೀಠದ ಮಾತೃಶಕ್ತಿ ರಾಷ್ಟ್ರೀಯ ಪುರಸ್ಕಾರಕ್ಕೆ ಡಾ.ದಾಕ್ಷಾಯಣಿ ಅಪ್ಪಾ ಆಯ್ಕೆ

ಕಲಬುರಗಿ, ನ. 14 : ಕಾಶಿ ಜ್ಞಾನಸಿಂಹಾಸನ ಮಹಾಪೀಠದಿಂದ ಸಾಧಕ ಮಹಿಳೆಯೋರ್ವರಿಗೆ ಪ್ರತಿವರ್ಷ ಕೊಡಮಾಡುವ ಮಾಲತಿ ಮಹಾರುದ್ರಪ್ಪ ಖೇಣಿ ಮಾತೃಶಕ್ತಿ ರಾಷ್ಟ್ರೀಯ ಪುರಸ್ಕಾರವನ್ನು ಪ್ರಕಟಿಸಲಾಗಿದ್ದು, 2026ನೇ ಸಾಲಿನ ಪ್ರಶಸ್ತಿಗೆ ಕಲಬುರಗಿ ಶರಣಬಸವೇಶ್ವರ ಸಂಸ್ಥಾನದ ಮಾತೋಶ್ರೀ ಡಾ.ದಾಕ್ಷಾಯಣಿ ಅಪ್ಪ ಅವರು ಆಯ್ಕೆಯಾಗಿದ್ದಾರೆ. ಪ್ರಶಸ್ತಿಯು ಒಂದು ಲಕ್ಷ ರೂ. ನಗದು ಹಾಗೂ ಸ್ಮರಣಿಕೆಯನ್ನು ಒಳಗೊಂಡಿದ್ದು, ನ.29ರಂದು ಪ್ರಶಸ್ತಿ ಪ್ರದಾನ ನಡೆಯಲಿದೆ. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪ್ರಶಸ್ತಿ ಸ್ವೀಕರಿಸುವಂತೆ ಕಾಶಿ ಪೀಠದ ಅಧಿಕೃತ ಆಮಂತ್ರಣ ಮಾತೋಶ್ರೀ ಅವರಿಗೆ ನೀಡಲಾಯಿತು.

ಜೇವರ್ಗಿ ತಾಲೂಕಿನ ಶಾಕಾಪುರದಲ್ಲಿರುವ ಕಾಶೀ ಪೀಠದ ಶಾಖಾ ತಪೋವನ ಮಠದಲ್ಲಿ ನ.29 ರಂದು ನಡೆಯಲಿರುವ ಕಾಶೀ ಜಗದ್ಗುರು ಡಾ.ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರ 37ನೇ ಪೀಠಾರೋಹಣ ವರ್ಧಂತಿ ಮಹೋತ್ಸವದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಡಾ.ಸಿದ್ಧರಾಮ ಶಿವಾಚಾರ್ಯ ಸ್ವಾಮಿಗಳು ತಿಳಿಸಿದ್ದಾರೆ.



ಪೀಠಾರೋಹಣ ವರ್ಧಂತಿ ಮಹೋತ್ಸವದ ಪ್ರಯುಕ್ತ ಅಂದು ಬೆಳಗ್ಗೆ 9ಕ್ಕೆ ಜಗದ್ಗುರುಗಳ ಸುವರ್ಣ ಕಿರೀಟಧಾರಣೆ ಹಾಗೂ ಸಾಮೂಹಿಕ ಇಷ್ಟಲಿಂಗ ಮಹಾಪೂಜೆ ನಡೆಯಲಿದೆ. ನಂತರ ಶ್ರೀಜಗದ್ಗುರು ವಿಶ್ವಾರಾಧ್ಯ ಮಂದಿರದ ಶಿಲಾನ್ಯಾಸವನ್ನು ನೆರವೇರಿಸಲಿದ್ದಾರೆ. ಸಂಜೆ 6ಕ್ಕೆ ಧರ್ಮಸಭೆ ಹಾಗೂ ಪ್ರಶಸ್ತಿ ಪುರಸ್ಕಾರ ನಡೆಯಲಿದೆ.

ಮಾತೃಶಕ್ತಿ ಪುರಸ್ಕಾರಕ್ಕೆ ಭಾಜನರಾಗಿರುವ ಡಾ.ದಾಕ್ಷಾಯಣಿ ಅಪ್ಪ ಅವರನ್ನು ಶಾಕಾಪುರದ ಡಾ.ಸಿದ್ಧರಾಮ ಶಿವಾಚಾರ್ಯ ಸ್ವಾಮಿಗಳು ಕಾಶಿ ಪೀಠದ ಪರವಾಗಿ ಕಾರ್ಯಕ್ರಮಕ್ಕೆ ಆಹ್ವಾನಿಸಿದರು.

ಮಹಾರಾಷ್ಟ್ರದ ಪ್ರಸಿದ್ಧ ಉದ್ಯಮಿಗಳಾದ ಡಾ.ಬಾಬಾ ಕಲ್ಯಾಣಿಯವರ ಪತ್ನಿ ಸುನೀತ ಬಾಬಾ ಕಲ್ಯಾಣಿಯವರು ತಮ್ಮ ತಾಯಿ ಮಾಲತಿ ಖೇಣಿಯವರ ಸ್ಮರಣಾರ್ಥ ಕಾಶೀ ಪೀಠದಲ್ಲಿ ಸ್ಥಾಪಿಸಿರುವ ಪ್ರಶಸ್ತಿಯನ್ನು, ಸಮಾಜ ಸೇವೆ, ಶೈಕ್ಷಣಿಕ ಸಾಧನೆ, ವಿಶೇಷ ಕ್ಷೇತ್ರಗಳಲ್ಲಿ ಸೇವೆ ಮಾಡುತ್ತಿರುವ ಅಪರೂಪದ ಸಾಧಕಿಯರನ್ನು ಗುರುತಿಸಿ ನೀಡಲಾಗುತ್ತದೆ. ಕಲ್ಯಾಣ ಕರ್ನಾಟಕದಲ್ಲಿ ಶೈಕ್ಷಣಿಕ ಕ್ರಾಂತಿ ಮಾಡುತ್ತಿರುವ ಶರಣಬಸವ ವಿಶ್ವವಿದ್ಯಾಲಯದ ಕುಲಪತಿಗಳಾಗಿ ಡಾ.ದಾಕ್ಷಾಯಣಿ ಅಪ್ಪ ಅವರು ಮಾಡುತ್ತಿರುವ ಅನುಪಮ ಸೇವೆಯನ್ನು ಪರಿಗಣಿಸಿ ಮಾತೃಶಕ್ತಿ ಪುರಸ್ಕಾರವನ್ನು ನೀಡಲಾಗಿದೆ.

ನವದೆಹಲಿಯ ಕರ್ನಾಟಕ ಭವನದಲ್ಲಿ ಅದ್ಧೂರಿ ರಾಜ್ಯೋತ್ಸವ ಸಂಭ್ರಮ








71ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ನವದೆಹಲಿಯ ಕರ್ನಾಟಕ ಭವನದ ನಿವಾಸಿ ಆಯುಕ್ತರ ಕಚೇರಿ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು. ಕರ್ನಾಟಕ ಭವನದ ಸಿಬ್ಬಂದಿ ಮತ್ತು ಅವರ ಕುಟುಂಬಗಳ ಸದಸ್ಯರು ನೃತ್ಯ, ಗಾಯನ, ನಾಟಕ ಸೇರಿದಂತೆ ಹಲವು ಸಾಂಸ್ಕೃತಿಕ ಚಟುವಟಿಕೆ ನಡೆಸಿಕೊಟ್ಟರು.

ಬಗೆಹರಿದ ಔಟ್‌ಲುಕ್ ಸಮಸ್ಯೆ, ಜಾಗತಿಕ ವ್ಯತ್ಯಯ ಅಂತ್ಯ: ಗ್ರಾಹಕರಲ್ಲಿ ಕ್ಷಮೆಯಾಚಿಸಿದ ಮೈಕ್ರೋಸಾಫ್ಟ್

ನವದೆಹಲಿ, ನ.14: ಜಾಗತಿಕ ಮಟ್ಟದಲ್ಲಿ ಭಾರಿ ವ್ಯತ್ಯಯಕ್ಕೆ ಕಾರಣವಾಗಿದ್ದ ಮೈಕ್ರೋಸಾಫ್ಟ್‌ನ ಸೇವೆಗಳು ಸಹಜ ಸ್ಥಿತಿಗೆ ಮರಳಿದ್ದು, ಗ್ರಾಹಕರಿಗೆ ಉಂಟಾದ ತೊಂದರೆಗಾಗಿ ಸಂಸ್ಥೆ ಕ್ಷಮೆ ಯಾಚಿಸಿದೆ.

ಔಟ್‌ಲುಕ್ ಇ-ಮೇಲ್ ಸೇರಿದಂತೆ ಮೈಕ್ರೋಸಾಫ್ಟ್ 365ರ ಹಲವು ಸೇವೆಗಳು ಸ್ಥಗಿತಗೊಂಡಿದ್ದಕ್ಕೆ ಕಂಪನಿ ಗ್ರಾಹಕರಲ್ಲಿ ಕ್ಷಮೆಯಾಚಿಸಿದೆ. ನೆಟ್‌ವರ್ಕ್ ಸಾಮರ್ಥ್ಯ ಹೆಚ್ಚಿಸುವ ಪ್ರಕ್ರಿಯೆಯಲ್ಲಿ ಉಂಟಾದ ತಾಂತ್ರಿಕ ದೋಷವೇ ಈ ಸಮಸ್ಯೆಗೆ ಕಾರಣ ಎಂದು ಸ್ಪಷ್ಟಪಡಿಸಿದೆ.


ಶನಿವಾರ ಬೆಳಗ್ಗೆ ಮೈಕ್ರೋಸಾಫ್ಟ್‌ನ ಸೇವಾ ಸ್ಥಿತಿಯ ವೆಬ್‌ಪುಟದಲ್ಲಿ 'ಎಲ್ಲ ಉತ್ಪನ್ನಗಳು ಕಾರ್ಯನಿರ್ವಹಿಸುತ್ತಿವೆ' ಎಂಬ ಮಾಹಿತಿ ಪ್ರಕಟವಾಗಿದೆ. ಮೈಕ್ರೋಸಾಫ್ಟ್ 365ರ ಉದ್ಯಮ ಮತ್ತು ವಾಣಿಜ್ಯ ಸೇವೆಗಳ ಜತೆಗೆ ಸಾಮಾನ್ಯ ಗ್ರಾಹಕರು ಬಳಸುವ ಸೇವೆಗಳೂ ಸಹಜ ಸ್ಥಿತಿಗೆ ಮರಳಿವೆ. ಈ ತಾಂತ್ರಿಕ ವ್ಯತ್ಯಯದಿಂದ ನಮ್ಮ ಗ್ರಾಹಕರು ಮತ್ತು ಪಾಲುದಾರರಿಗೆ ಉಂಟಾದ ತೊಂದರೆಗೆ ನಾವು ಪ್ರಾಮಾಣಿಕವಾಗಿ ಕ್ಷಮೆಯಾಚಿಸುತ್ತೇವೆ. ನಮ್ಮ ಸೇವೆಗಳ ಮೇಲೆ ಗ್ರಾಹಕರು ಇಟ್ಟಿರುವ ನಂಬಿಕೆಯನ್ನು ನಾವು ಗಂಭೀರವಾಗಿ ಪರಿಗಣಿಸುತ್ತೇವೆ ಎಂದು ಕಂಪನಿ ಎಕ್ಸ್ ಖಾತೆಯಲ್ಲಿ ತಿಳಿಸಿದೆ.

ನೆಟ್‌ವರ್ಕ್ ಅಪ್‌ಗ್ರೇಡ್ ವೇಳೆ ತಾಂತ್ರಿಕ ದೋಷ

ನೆಟ್‌ವರ್ಕ್ ಸಾಮರ್ಥ್ಯ ಹೆಚ್ಚಿಸುವ ನವೀಕರಣದ ವೇಳೆ ಉಂಟಾದ ಸಮಸ್ಯೆಯೇ ಜಾಗತಿಕ ವ್ಯತ್ಯಯಕ್ಕೆ ಕಾರಣವಾಗಿದೆ ಎಂದು ಮೈಕ್ರೋಸಾಫ್ಟ್ ತಿಳಿಸಿದೆ. ಈ ಹಿಂದೆ ನಡೆದ ನೆಟ್‌ವರ್ಕ್ ಮೇಲ್ದರ್ಜೆಗೇರಿಸುವಲ್ಲಿನ ದೋಷವು ಇತ್ತೀಚಿನ ನೆಟ್‌ವರ್ಕ್ ಬದಲಾವಣೆಯ ಬಳಿಕ ಪರಿಣಾಮ ಬೀರಿದೆ. ಇದು ಸೈಬರ್ ದಾಳಿ, ಕೃತಕ ಬುದ್ಧಿಮತ್ತೆ ಅಥವಾ ಎಐ ಏಜೆಂಟ್‌ಗಳಿಗೆ ಸಂಬಂಧಿಸಿದ ಸಮಸ್ಯೆಯಲ್ಲ. ಸಂಪೂರ್ಣ ತಾಂತ್ರಿಕ ದೋಷದಿಂದ ಈ ವ್ಯತ್ಯಯ ಉಂಟಾಗಿದೆ ಎಂದು ಕಂಪನಿ ಸ್ಪಷ್ಟಪಡಿಸಿದೆ.

ಮೂಲ ಸಮಸ್ಯೆಯನ್ನು ಸರಿಪಡಿಸಿದ ಬಳಿಕವೂ ಎಲ್ಲ ಸೇವೆಗಳನ್ನು ಒಂದೇ ಬಾರಿಗೆ ಆರಂಭಿಸದೆ ಹಂತ ಹಂತವಾಗಿ ಮರುಸ್ಥಾಪಿಸಲಾಗಿದೆ. ಪ್ರತಿಯೊಂದು ಹಂತದಲ್ಲೂ ಸೇವೆಗಳ ಸ್ಥಿರತೆಯನ್ನು ಪರಿಶೀಲಿಸಿದ ಬಳಿಕವೇ ಮುಂದಿನ ಸೇವೆಗಳನ್ನು ಆರಂಭಿಸಲಾಗಿದೆ. ಇದರಿಂದ ಚೇತರಿಕೆ ಪ್ರಕ್ರಿಯೆ ಸ್ವಲ್ಪ ವಿಳಂಬವಾದರೂ ಸೇವೆಗಳ ವಿಶ್ವಾಸಾರ್ಹತೆ ಕಾಪಾಡಲು ಸಾಧ್ಯವಾಯಿತು ಎಂದು ಕಂಪನಿ ಹೇಳಿದೆ.

ಸಂಸ್ಥೆಯ ಕಾರ್ಯನಿರ್ವಾಹಕ ಉಪಾಧ್ಯಕ್ಷ ಚಾರ್ಲ್ಸ್ ಲಮಾನ್ನಾ ಪ್ರತಿಕ್ರಿಯಿಸಿದ್ದು, ನೆಟ್‌ವರ್ಕ್‌ನ ಒಂದು ಭಾಗದಲ್ಲಿ ಉಂಟಾದ ದೋಷ ಇತರ ವ್ಯವಸ್ಥೆಗಳಿಗೂ ಹರಡಿತ್ತು. ಇದರಿಂದ ಸೇವೆಗಳನ್ನು ಮರುಸ್ಥಾಪಿಸುವ ಪ್ರಕ್ರಿಯೆ ಮತ್ತಷ್ಟು ಸಂಕೀರ್ಣವಾಗಿತ್ತು. ಈ ಘಟನೆಯ ಸಂಪೂರ್ಣ ತನಿಖೆ ನಡೆಸಿ, ಸಮಸ್ಯೆ ಹೇಗೆ ಆರಂಭವಾಯಿತು, ಯಾವ ಹಂತದಲ್ಲಿ ಯಾವ ಕ್ರಮ ಕೈಗೊಳ್ಳಲಾಯಿತು ಮತ್ತು ಮುಂದೆ ಇಂತಹ ಸಮಸ್ಯೆಗಳು ಮರುಕಳಿಸದಂತೆ ಯಾವ ಬದಲಾವಣೆ ಮಾಡಲಾಗುತ್ತದೆ ಎಂಬ ವಿವರಗಳನ್ನೊಳಗೊಂಡ ವರದಿಯನ್ನು ಶೀಘ್ರದಲ್ಲೇ ಪ್ರಕಟಿಸುವುದಾಗಿ ಹೇಳಿದ್ದಾರೆ.



1.3 ಲಕ್ಷಕ್ಕೂ ಹೆಚ್ಚು ದೂರುಗಳು

ಈ ವ್ಯತ್ಯಯದಿಂದ ಮುಖ್ಯವಾಗಿ ಮೈಕ್ರೋಸಾಫ್ಟ್‌ನ ಕ್ಲೌಡ್ ಆಧಾರಿತ ಇ-ಮೇಲ್ ವ್ಯವಸ್ಥೆಯಾದ ಎಕ್ಸ್‌ಚೇಂಜ್ ಆನ್‌ಲೈನ್ ಸೇವೆಗಳಿಗೆ ತೊಂದರೆಯಾಗಿತ್ತು. ಸಮಸ್ಯೆ ತೀವ್ರಗೊಂಡ ಸಂದರ್ಭದಲ್ಲಿ ಔಟ್‌ಲುಕ್ ಸೇವೆಗೆ ಸಂಬಂಧಿಸಿದಂತೆ 1.3 ಲಕ್ಷಕ್ಕೂ ಹೆಚ್ಚು ದೂರುಗಳು ದಾಖಲಾಗಿದ್ದವು. ಒಟ್ಟು 72ರಿಂದ 74 ದೇಶಗಳಲ್ಲಿ ಸೇವಾ ವ್ಯತ್ಯಯ ವರದಿಯಾಗಿತ್ತು.

ಸೇವೆಗಳು ಮರುಸ್ಥಾಪನೆಯಾದ ಬಳಿಕವೂ ಸಂಗ್ರಹವಾಗಿದ್ದ ಬಾಕಿ ಇ-ಮೇಲ್‌ಗಳು ಸರಿಯಾಗಿ ತಲುಪುತ್ತಿವೆಯೇ ಎಂಬುದನ್ನು ಮೈಕ್ರೋಸಾಫ್ಟ್ ಪರಿಶೀಲಿಸುತ್ತಿದೆ. ಪರಿಸ್ಥಿತಿ ಸಂಪೂರ್ಣ ಸ್ಥಿರವಾಗುವವರೆಗೆ ನಿಗಾ ಮುಂದುವರಿಸುವುದಾಗಿ ಕಂಪನಿ ತಿಳಿಸಿದೆ.

ಭಾರತದ ವಿಮಾನಯಾನ, ಹಣಕಾಸು ಸಂಸ್ಥೆಗಳಿಗೂ ಹೊಡೆತ

ಗುರುವಾರ ತಡರಾತ್ರಿ ಆರಂಭವಾದ ಈ ಜಾಗತಿಕ ವ್ಯತ್ಯಯದಿಂದ ಭಾರತ ಸೇರಿದಂತೆ ಹಲವು ದೇಶಗಳ ಉದ್ಯಮಗಳು ತೊಂದರೆ ಅನುಭವಿಸಿದ್ದವು. ಭಾರತದ ಇಂಡಿಗೋ, ಏರ್ ಇಂಡಿಯಾ ಮತ್ತು ಆಕಾಶ ಏರ್ ವಿಮಾನಯಾನ ಸಂಸ್ಥೆಗಳ ಇ-ಮೇಲ್ ಆಧಾರಿತ ಗ್ರಾಹಕ ಸೇವೆಗಳು ವ್ಯತ್ಯಯಗೊಂಡಿದ್ದವು. ಪ್ರಯಾಣಿಕರು ಕಳುಹಿಸಿದ ಕೆಲವು ಇ-ಮೇಲ್‌ಗಳನ್ನು ಸ್ವೀಕರಿಸಲು ಅಥವಾ ಅವುಗಳಿಗೆ ಪ್ರತಿಕ್ರಿಯಿಸಲು ಸಂಸ್ಥೆಗಳಿಗೆ ತೊಂದರೆಯಾಗಿತ್ತು.

ಗ್ರಾಹಕರ ಸಂಪರ್ಕಕ್ಕೆ ತೊಂದರೆಯಾಗದಂತೆ ಏರ್ ಇಂಡಿಯಾ ತನ್ನ ಇ-ಮೇಲ್ ಸೇವೆಗಳನ್ನು ತಾತ್ಕಾಲಿಕವಾಗಿ ಬೇರೆ ವ್ಯವಸ್ಥೆಗೆ ವರ್ಗಾಯಿಸಿತ್ತು. ಆದರೆ, ವಿಮಾನಗಳ ಹಾರಾಟದ ಮೇಲೆ ಯಾವುದೇ ಪರಿಣಾಮ ಬೀರಿರುವ ಬಗ್ಗೆ ವರದಿಯಾಗಿಲ್ಲ. ಹಣಕಾಸು ಸೇವಾ ಸಂಸ್ಥೆಗಳೂ ಸಂಶೋಧನಾ ವರದಿಗಳನ್ನು ಪಡೆಯಲು ಮತ್ತು ಗ್ರಾಹಕರೊಂದಿಗೆ ಸಂಪರ್ಕ ಸಾಧಿಸಲು ತೊಂದರೆ ಅನುಭವಿಸಿದ್ದವು.

ಪಾಠ ಮಾಡುವ ಮೊದಲು ನಿಮ್ಮ ಪೂರ್ವಗ್ರಹ ಸರಿಪಡಿಸಿಕೊಳ್ಳಿ ಹಸ್ತಕ್ಷೇಪ ಮಾಡಬೇಡಿ: ಅಮೆರಿಕಕ್ಕೆ ಭಾರತ ಖಡಕ್ ತಿರುಗೇಟು

ನವದೆಹಲಿ, ನ.14: ಅಮೆರಿಕದ ಧಾರ್ಮಿಕ ಸ್ವಾತಂತ್ರ್ಯ ಆಯೋಗ (ಯುಎಸ್‌ಸಿಐಆರ್‌ಎಫ್) ಭಾರತದ ವಿರುದ್ಧ ಮಾಡಿರುವ ಟೀಕೆಗೆ ಭಾರತೀಯ ರಾಯಭಾರಿ ವಿನಯ್ ಮೋಹನ್ ಕ್ವಾತ್ರ ತಿರುಗೇಟು ನೀಡಿದ್ದು, ಮೊದಲು ನಿಮ್ಮ ಪೂರ್ವಗ್ರಹಗಳನ್ನು ಆತ್ಮಾವಲೋಕನ ಮಾಡಿಕೊಳ್ಳಿ, ಇತರರಿಗೆ ಪಾಠ ಹೇಳುವುದನ್ನು ನಿಲ್ಲಿಸಿ ಎಂದು ಖಡಕ್ ಸಂದೇಶ ರವಾನಿಸಿದ್ದಾರೆ.



ಭಾರತದಲ್ಲಿ ಧಾರ್ಮಿಕ ಸ್ವಾತಂತ್ರ್ಯದ ಪರವಾಗಿ ಧ್ವನಿ ಎತ್ತಿದ ಕಾರಣಕ್ಕೆ ಮುಸ್ಲಿಂ ವ್ಯಕ್ತಿಯೊಬ್ಬರನ್ನು ಬಂಧಿಸಲಾಗಿದೆ ಎಂದು ಆಯೋಗ ಆರೋಪಿಸಿತ್ತು. ಈ ಸಂಬಂಧ ಶುಕ್ರವಾರ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಕ್ವಾತ್ರ, ಭಾರತೀಯ ನಾಗರಿಕರ ಸಾಂವಿಧಾನಿಕ ಹಕ್ಕುಗಳ ಬಗ್ಗೆ ತೀರ್ಪು ನೀಡಲು ಯುಎಸ್‌ಸಿಐಆರ್‌ಎಫ್‌ಗೆ ಯಾವುದೇ ಅಧಿಕಾರವಿಲ್ಲ ಎಂದು ಹೇಳಿದ್ದಾರೆ.

ತನ್ನ ಸಾಮಾಜಿಕ ಮಾಧ್ಯಮದ ವೇದಿಕೆಯಲ್ಲಿ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದ ಮಾಜಿ ಸಂಶೋಧನಾ ವಿದ್ಯಾರ್ಥಿ ಶರ್ಜೀಲ್ ಇಮಾಮ್ ಅವರ ಪ್ರೊಫೈಲ್ ಹಂಚಿಕೊಂಡಿದ್ದ ಆಯೋಗ, ಧಾರ್ಮಿಕ ಸ್ವಾತಂತ್ರ್ಯದ ಪರವಾಗಿ ಹೋರಾಡಿದ ಮುಸ್ಲಿಂ ವ್ಯಕ್ತಿಯನ್ನು ಭಾರತದಲ್ಲಿ ಬಂಧಿಸಲಾಗಿದೆ ಎಂದು ಬಣ್ಣಿಸಿತ್ತು. 2020ರ ಫೆಬ್ರವರಿಯಲ್ಲಿ ದೆಹಲಿಯಲ್ಲಿ ನಡೆದ ಗಲಭೆಗೆ ಸಂಬಂಧಿಸಿದಂತೆ ಇಮಾಮ್ ವಿರುದ್ಧ ಗಲಭೆಯ ಹಿಂದಿನ ಪ್ರಮುಖ ಸಂಚುಕೋರರಲ್ಲಿ ಒಬ್ಬ ಎಂಬ ಆರೋಪವಿದೆ.

ಆಯೋಗದ ಟೀಕೆಗೆ ಪ್ರತಿಕ್ರಿಯಿಸಿದ ಕ್ವಾತ್ರ, "ಆಯೋಗದ ಪಕ್ಷಪಾತದ, ಸರಿಯಾದ ಮಾಹಿತಿಯಿಲ್ಲದ ಮತ್ತು ಪೂರ್ವಗ್ರಹಪೀಡಿತ ವರದಿಗಳು ಭಾರತದ ಧಾರ್ಮಿಕ ಸ್ವಾತಂತ್ರ್ಯ ಹಾಗೂ ಎಲ್ಲ ಧರ್ಮಗಳ ಸಮಾನ ಹಕ್ಕುಗಳ ಬಗೆಗಿನ ಸಾಂವಿಧಾನಿಕ ಬದ್ಧತೆಯನ್ನು ಕುಗ್ಗಿಸಲು ಸಾಧ್ಯವಿಲ್ಲ" ಎಂದು ಹೇಳಿದ್ದಾರೆ.

ಭಾರತವು ಆಯೋಗದ ಉದ್ದೇಶಪೂರ್ವಕ ಮತ್ತು ಪಕ್ಷಪಾತದ ನಿರೂಪಣೆಗಳನ್ನು ಮೀರಿ ಅಭಿವೃದ್ಧಿ ಹೊಂದುತ್ತಿದೆ. ಇತರರಿಗೆ ಉಪದೇಶ ನೀಡುವ ಮೊದಲು ಆಯೋಗ ತನ್ನದೇ ಪೂರ್ವಗ್ರಹಗಳನ್ನು ಪರಿಶೀಲಿಸಿಕೊಳ್ಳಲಿ ಎಂದು ಅವರು ತಿರುಗೇಟು ನೀಡಿದ್ದಾರೆ. USCIRF ಅನ್ನು ಭಾರತ ಈ ಹಿಂದಿನಿಂದಲೂ ಪಕ್ಷಪಾತಿ ಮತ್ತು ವಿಶ್ವಾಸಾರ್ಹತೆಯಿಲ್ಲದ ಸಂಸ್ಥೆ ಎಂದು ಟೀಕಿಸುತ್ತಾ ಬಂದಿದೆ.

1998ರಲ್ಲಿ ಅಮೆರಿಕ ಸರ್ಕಾರ ಈ ಆಯೋಗವನ್ನು ಸ್ಥಾಪಿಸಿತ್ತು. ಅಂತಾರಾಷ್ಟ್ರೀಯ ಧಾರ್ಮಿಕ ಸ್ವಾತಂತ್ರ್ಯ ಕಾಯ್ದೆಯ ಹಿನ್ನೆಲೆಯಲ್ಲಿ ರಚನೆಯಾದ ಈ ಆಯೋಗವು ಅಮೆರಿಕದ ವಿದೇಶಾಂಗ ಇಲಾಖೆಗೆ ಶಿಫಾರಸುಗಳನ್ನು ಮಾಡುತ್ತದೆ. ಆದರೆ, ಆಯೋಗದ ಶಿಫಾರಸುಗಳು ಕಡ್ಡಾಯವಾಗಿ ಜಾರಿಗೊಳಿಸಬೇಕಾದವುಗಳಲ್ಲ.

ಬಾಂಗ್ಲಾಗೆ ಶೇಖ್ ಹಸೀನಾ ವಾಪಸ್: ಢಾಕಾ ಸರ್ಕಾರದ ಮುಂದೆ ಭಾರತ ಎರಡು ಷರತ್ತು

ನವದೆಹಲಿ, ನ.14: ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ರಾಜಕೀಯ ಅಜ್ಞಾತವಾಸ ಅಂತ್ಯಗೊಳ್ಳಲಿದೆಯೇ ಭಾರತದಲ್ಲಿ ಆಶ್ರಯ ಪಡೆದಿರುವ ಹಸೀನಾ ಅವರು ಡಿಸೆಂಬರ್‌ನಲ್ಲಿ ಸ್ವದೇಶಕ್ಕೆ ಮರಳಲು ಸಜ್ಜಾಗಿದ್ದಾರೆ ಎನ್ನಲಾಗುತ್ತಿದ್ದು, ಇದು ದಕ್ಷಿಣ ಏಷ್ಯಾ ರಾಜಕೀಯದಲ್ಲಿ ಭಾರೀ ಸಂಚಲನ ಸೃಷ್ಟಿಸಿದೆ. ಆದರೆ, ಅವರ ವಾಪಸಾತಿ ಅಷ್ಟು ಸುಲಭವಿಲ್ಲ ಎಂಬುದು ಈಗ ಬಹಿರಂಗಗೊಂಡಿದೆ.



ನವದೆಹಲಿ ಮತ್ತು ಬಾಂಗ್ಲಾದ ನಡುವೆ ತೆರೆಮರೆಯಲ್ಲಿ ಮಾತುಕತೆಗಳು ನಡೆದಿದ್ದು, ಹಸೀನಾ ಸುರಕ್ಷತೆ ಹಾಗೂ ನ್ಯಾಯಯುತ ವಿಚಾರಣೆಗೆ ಭಾರತ ಎರಡು ಷರತ್ತುಗಳನ್ನು ಮುಂದಿಟ್ಟಿದೆ ಎನ್ನಲಾಗಿದೆ.

ಏತನ್ಮಧ್ಯೆ, ಡಿಸೆಂಬರ್‌ನಲ್ಲಿ ಬಾಂಗ್ಲಾದೇಶಕ್ಕೆ ಮರಳಿ ನ್ಯಾಯಾಲಯಕ್ಕೆ ಶರಣಾಗಲು ನಿರ್ಧರಿಸಿರುವ ಶೇಖ್ ಹಸೀನಾ, ಇತ್ತೀಚೆಗಷ್ಟೇ ಹೊಸ ಬಾಂಗ್ಲಾದೇಶಿ ಪಾಸ್‌ಪೋರ್ಟ್ ಮತ್ತು ರಾಷ್ಟ್ರೀಯ ಗುರುತಿನ ಚೀಟಿಗಾಗಿ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಬಾಂಗ್ಲಾದೇಶ ಸರ್ಕಾರವು ಅವರಿಗೆ ಹೊಸ ಪಾಸ್‌ಪೋರ್ಟ್ ನೀಡಲು ನಿರಾಕರಿಸಿದ್ದು, ಹಸ್ತಾಂತರ ಒಪ್ಪಂದದ ಅಡಿಯಲ್ಲೇ ಅವರನ್ನು ಹಸ್ತಾಂತರಿಸಬೇಕು ಎಂದು ಪಟ್ಟು ಹಿಡಿದಿದೆ.

ಹಸೀನಾ ಅವರು ದೀರ್ಘಕಾಲ ಭಾರತದಲ್ಲೇ ಉಳಿದಿರುವುದು ದ್ವಿಪಕ್ಷೀಯ ಸಂಬಂಧ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತಕ್ಕೆ ಇಕ್ಕಟ್ಟು ತಂದೊಡ್ಡಿದೆ. ಆದರೆ, ದೀರ್ಘಕಾಲದ ಮಿತ್ರೆಯಾಗಿರುವ ಅವರನ್ನು ಒಬ್ಬ ಕೈದಿಯಂತೆ ಹಸ್ತಾಂತರಿಸಿದರೆ ನೇಪಾಳ, ಶ್ರೀಲಂಕಾ ಮತ್ತು ಮಾಲ್ಡೀವ್ಸ್‌ನಂತಹ ನೆರೆಯ ರಾಷ್ಟ್ರಗಳ ಮಿತ್ರಪಕ್ಷಗಳಿಗೆ ತಪ್ಪು ಸಂದೇಶ ರವಾನೆಯಾಗುತ್ತದೆ ಎಂಬುದು ಭಾರತದ ಕಾಳಜಿಯಾಗಿದೆ.

ಷರತ್ತುಗಳೇನು?

2024ರ ಆಗಸ್ಟ್‌ನಲ್ಲಿ ಹಸೀನಾ ಅವರು ಬಾಂಗ್ಲಾದೇಶದ ಮಿಲಿಟರಿ ವಿಮಾನದಲ್ಲೇ ಭಾರತಕ್ಕೆ ಬಂದಿಳಿದಿದ್ದರು. ಅದೇ ರೀತಿ ಈಗಲೂ ಬಾಂಗ್ಲಾದೇಶ ಸೇನೆಯೇ ಅವರನ್ನು ಮಿಲಿಟರಿ ವಿಮಾನದ ಮೂಲಕ ಅಥವಾ ನಿಗದಿತ ಗಡಿ ಭಾಗದ ಮೂಲಕ ಸುರಕ್ಷಿತವಾಗಿ ಕರೆದೊಯ್ಯುವ ಜವಾಬ್ದಾರಿ ಹೊರಬೇಕು ಮತ್ತು ದೇಶಕ್ಕೆ ಮರಳಿದ ಬಳಿಕ ಅವರ ಜೀವಕ್ಕೆ ಯಾವುದೇ ಅಪಾಯವಾಗದಂತೆ ರಕ್ಷಣೆ ನೀಡಬೇಕು.


2024ರ ಜುಲೈ ದಂಗೆಯ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಹಸೀನಾ ಅನುಪಸ್ಥಿತಿಯಲ್ಲಿ ವಿಶೇಷ ನ್ಯಾಯಮಂಡಳಿ ವಿಧಿಸಿರುವ ಮರಣದಂಡನೆ ಶಿಕ್ಷೆಯ ವಿರುದ್ಧ ಮೇಲ್ಮನವಿ ಸಲ್ಲಿಸಲು ಅವರಿಗೆ ಅವಕಾಶ ನೀಡಬೇಕು ಮತ್ತು ಹೊಸದಾಗಿ ನ್ಯಾಯಸಮ್ಮತ ವಿಚಾರಣೆ ನಡೆಸುವ ಭರವಸೆ ನೀಡಬೇಕು.

19 ವರ್ಷದೊಳಗಿನವರ ಏಷ್ಯಾಕಪ್: ಸೆಹ್ವಾಗ್ ಪುತ್ರ ಆರ್ಯವೀರ್‌ಗೆ ಸರಣಿ ಶ್ರೇಷ್ಠ ಪ್ರಶಸ್ತಿ

ಮಸ್ಕಟ್, ನ.14: 19 ವರ್ಷದೊಳಗಿನವರ ಏಷ್ಯಾ ಕಪ್ 2026ರಲ್ಲಿ ಭಾರತದ ಮಾಜಿ ಆರಂಭಿಕ ಆಟಗಾರ ವೀರೇಂದ್ರ ಸೆಹ್ವಾಗ್ ಅವರ ಪುತ್ರ ಆರ್ಯವೀರ್ ಪ್ಲೇಯರ್ ಆಫ್ ದಿ ಟೂರ್ನಮೆಂಟ್ (ಸರಣಿ ಶ್ರೇಷ್ಠ) ಪ್ರಶಸ್ತಿಯನ್ನು ಗೆದ್ದುಕೊಂಡಿದ್ದಾರೆ.

ಶನಿವಾರ ನಡೆದ ಫೈನಲ್ ಪಂದ್ಯದಲ್ಲಿ ಪಾಕಿಸ್ತಾನದ ವಿರುದ್ಧ ಭಾರತ ರೋಚಕ ಜಯ ಸಾಧಿಸುವ ಮೂಲಕ ಈ ಟೂರ್ನಿ ಮುಕ್ತಾಯಗೊಂಡಿತು. ಲಕ್ಷ್ಯ ರಾಯ್ ಚಂದಾನಿ ನೇತೃತ್ವದ ಭಾರತ ತಂಡ, ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಒಂದು ವಿಕೆಟ್ ಅಂತರದಿಂದ ಸೋಲಿಸಿ, ದಾಖಲೆಯ ಒಂಬತ್ತನೇ ಬಾರಿಗೆ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿತು.

ಪಾಕಿಸ್ತಾನದ ವಿರುದ್ಧದ ಫೈನಲ್ ಪಂದ್ಯದಲ್ಲಿ ಆರ್ಯವೀರ್ 61 ಎಸೆತಗಳಲ್ಲಿ 58 ರನ್ ಗಳಿಸುವ ಮೂಲಕ ಭಾರತ ಗೆಲುವಿನಲ್ಲಿ ಪ್ರಮುಖ ಕೊಡುಗೆ ನೀಡಿದರು.



'ಪ್ಲೇಯರ್ ಆಫ್ ದಿ ಟೂರ್ನಮೆಂಟ್' ಪ್ರಶಸ್ತಿ ಪಡೆದ ನಂತರ ಮಾತನಾಡಿದ ಆರ್ಯವೀರ್, ಪಾಕಿಸ್ತಾನ ನೀಡಿದ 338 ರನ್‌ಗಳ ಗೆಲುವಿನ ಗುರಿ ಬೆನ್ನಟ್ಟುವ ಕುರಿತು ಡ್ರೆಸ್ಸಿಂಗ್ ರೂಮ್‌ನಲ್ಲಿ ಚರ್ಚೆ ನಡೆಸಿದ್ದೇವು. ಪಿಚ್ ಬ್ಯಾಟಿಂಗ್‌ಗೆ ತುಂಬಾ ಚೆನ್ನಾಗಿದೆ, ಇದು ಅಷ್ಟೇನೂ ದೊಡ್ಡಮೊತ್ತವಲ್ಲ ಎಂದು ಚರ್ಚಿಸಲಾಯಿತು. ಸಹಜವಾಗಿ ಬ್ಯಾಟಿಂಗ್ ಮಾಡಿ, ನಮ್ಮ ಎಂದಿನ ಶೈಲಿಯ ಶಾಟ್‌ಗಳನ್ನು ಆಡಿದರೆ, ಗುರಿಯನ್ನು ತಲುಪಬಹುದು ಎಂಬ ನಮಗೆ ನಂಬಿಕೆ ಇತ್ತು ಎಂದು ಅವರು ಹೇಳಿದರು.

ಫೈನಲ್ ಪಂದ್ಯದಲ್ಲಿ ಭಾರತ 300ಕ್ಕೂ ಹೆಚ್ಚು ರನ್‌ಗಳ ಗುರಿಯ ಬೆನ್ನುಹತ್ತಿದ್ದರೂ, ತಮ್ಮ ಯೋಜನೆಯಲ್ಲಿ ಯಾವುದೇ ಬದಲಾವಣೆ ಇರಲಿಲ್ಲ ಎಂದು ಈ ಸ್ಟಾರ್ ಬ್ಯಾಟರ್ ತಿಳಿಸಿದರು.

ಕೊನೆಯ 10 ಓವರ್‌ಗಳಲ್ಲಿ 100 ಅಥವಾ 120 ರನ್‌ಗಳನ್ನು ಹೇಗೆ ಬೆನ್ನುಹತ್ತಬಹುದು ಎಂಬುದರ ಕುರಿತು ಚರ್ಚಿಸಿದ್ದೆವು. ಏಕೆಂದರೆ ಪಿಚ್ ಬ್ಯಾಟಿಂಗ್‌ಗೆ ಅತ್ಯುತ್ತಮವಾಗಿತ್ತು. ಹೀಗಾಗಿ ಯಾರಾದರೂ ಒಬ್ಬರು ದೀರ್ಘಕಾಲ ಕ್ರೀಸ್‌ನಲ್ಲಿ ನಿಂತು ಬ್ಯಾಟಿಂಗ್ ಮಾಡಬೇಕಿತ್ತು. ಲಕ್ಷ್ಯ ಅದನ್ನು ಮಾಡಿದರು, ಅವರಿಗೆ ಅಭಿನಂದನೆಗಳು. ಹಾಗೆಯೇ, ಅಂತಿಮ ಹಂತದಲ್ಲಿ ಮೋಹಿತ್ ಮತ್ತು ಮಾನಲ್ ಪ್ರದರ್ಶಿಸಿದ ಆಟ ಅದ್ಭುತವಾಗಿತ್ತು, ಅವರಿಗೂ ಅಭಿನಂದನೆಗಳು ಎಂದು ಆರ್ಯವೀರ್ ಹೇಳಿದರು. ಇದೇ ವೇಳೆ ತಮ್ಮ ತಂದೆಯೊಂದಿಗೆ ಮಾತನಾಡಿದ್ದೀರಾ ಎಂದು ಕೇಳಿದಾಗ, "ಇಲ್ಲ ಸರ್, ನಾನು ಇನ್ನೂ ಮಾತನಾಡಿಲ್ಲ. ನಂತರ ಮಾತನಾಡುತ್ತೇನೆ' ಎಂದಷ್ಟೇ ಹೇಳಿದರು.

ಐಷಾರಾಮಿ ಕ್ರೂಸ್‌ಗೆ ಟ್ಯಾಂಕರ್ ಡಿಕ್ಕಿ: ಮಗುಚಿದ ಹಡಗು, ಪ್ರಯಾಣಿಕರು ಪಾರು!

ನ್ಯೂಯಾರ್ಕ್, ನ.14: ಅಮೆರಿಕದ ನ್ಯೂ ಓರ್ಲಿಯನ್ಸ್ ಮಿಸಿಸಿಪ್ಪಿ ನದಿಯಲ್ಲಿ ನಿಂತಿದ್ದ ಐಷಾರಾಮಿ ಕ್ರೂಸ್ ಹಡಗಿಗೆ ಟ್ಯಾಂಕರ್ ಡಿಕ್ಕಿ ಹೊಡೆದ ಪರಿಣಾಮ ಕ್ರೂಸ್ ಹಡಗು ಮಗುಚಿ ನದಿಗೆ ಬಿದ್ದಿದೆ. ಈ ವೇಳೆ ಹಡಗಿನಲ್ಲಿದ್ದ ಪ್ರಯಾಣಿಕರು ಜೀವ ಉಳಿಸಿಕೊಳ್ಳಲು ನೀರಿಗೆ ಹಾರಿದ್ದು, ಹಲವರು ಗಾಯಗೊಂಡಿದ್ದಾರೆ. ಅಪಘಾತದಲ್ಲಿ ಗಾಯಗೊಂಡ ಕನಿಷ್ಠ 32 ಪ್ರಯಾಣಿಕರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಆದರೆ ಅಚ್ಚರಿ ಎಂದರೆ ಯಾರಿಗೂ ಗಂಭೀರ ಗಾಯಗಳಾಗಿಲ್ಲ ಎಂದು ನ್ಯೂ ಓರ್ಲಿಯನ್ಸ್ ಮೇಯರ್ ಹೆಲೆನಾ ಮೊರೆನೊ ತಿಳಿಸಿದ್ದಾರೆ. ಅಪಘಾತ ಸಂಭವಿಸಿದಾಗ ಹಡಗಿನಲ್ಲಿ ಸುಮಾರು 180ರಿಂದ 190 ಪ್ರಯಾಣಿಕರು ಮತ್ತು ಸಿಬ್ಬಂದಿ ಇದ್ದರು ಎಂದು ಮೇಯರ್ ತಿಳಿಸಿದ್ದಾರೆ. ಹಡಗಿನಲ್ಲಿದ್ದ ಎಲ್ಲ ಪ್ರಯಾಣಿಕರು ಮತ್ತು ಸಿಬ್ಬಂದಿಯನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ ಎಂದು ತಿಳಿಸಿದ್ದಾರೆ.



ಶುಕ್ರವಾರ ಮಧ್ಯಾಹ್ನ ಈ ಘಟನೆ ನಡೆದಿದೆ. ಅಮೆರಿಕನ್ ಕ್ರೂಸ್ ಲೈನ್ಸ್ ನಿರ್ವಹಿಸುವ 'ಅಮೆರಿಕನ್ ಹೆರಿಟೇಜ್' ಎಂಬ ಕ್ರೂಸ್ ಹಡಗು ನದಿಯ ದಡದಲ್ಲಿ ನಿಂತಿದ್ದಾಗ, 'ಅಟ್ಲಾಂಟಿಕ್ ಅಸ್ಫಾಲ್ಟ್' ಎಂಬ ಟ್ಯಾಂಕರ್ ನಿಯಂತ್ರಣ ತಪ್ಪಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಕ್ರೂಸ್ ಹಡಗು ನೀರಿನಲ್ಲಿ ಮುಳುಗಲು ಆರಂಭಿಸಿದೆ. ಬಳಿಕ ಒಂದು ಬದಿಗೆ ಮಗುಚಿ ಸಂಪೂರ್ಣವಾಗಿ ಪಲ್ಟಿಯಾಗಿದೆ. ಹಡಗು ಮುಳುಗುವ ಮುನ್ನ ಸುಮಾರು 87 ಪ್ರಯಾಣಿಕರು ಹೊರಬರುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಅಗ್ನಿಶಾಮಕ ಸಿಬ್ಬಂದಿ, ಬಂದರು ಸಿಬ್ಬಂದಿ ಮತ್ತು ಸಮೀಪದಲ್ಲಿದ್ದ ಇತರ ದೋಣಿಗಳಲ್ಲಿನ ಜನರು ತಕ್ಷಣ ಕಾರ್ಯಾಚರಣೆಗೆ ಇಳಿದಿದ್ದರಿಂದ ಎಲ್ಲರನ್ನೂ ರಕ್ಷಿಸಲು ಸಾಧ್ಯವಾಯಿತು ಎಂದು ಅವರು ತಿಳಿಸಿದ್ದಾರೆ.